₹ 4 | ಪುಟ: 4 | ಸಂಪುಟ: 4 | ಸಂಚಿಕೆ 65 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 | Issue: 65 | Tuesday, 25, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಭ್ರಷ್ಟ ಬಿಜೆಪಿ ಸರ್ಕಾರ ಕಿತ್ತೊಗೆಯಲು ಸಿದ್ದರಾಮಯ್ಯ ಕರೆ



ಗೋಕಾಕ: ಗೋಕಾಕ ಜನತೆ ಈ ಬಾರಿ ಬದಲಾವಣೆಯನ್ನು ಬಯಸಿದ್ದಾರೆ. ಇದೇ ರೀತಿ ರಾಜ್ಯದಲ್ಲಿಯೂ ಬದಲಾವಣೆಯ ಗಾಳಿ ಬೀಸುತ್ತಿದೆ. ಇದಕ್ಕೆ ಕಾರಣ ರಾಜ್ಯದಲ್ಲಿರುವ ಜನವಿರೋಧಿ, ಭ್ರಷ್ಟ ಸರ್ಕಾರ, ಈ ಸರ್ಕಾರವನ್ನು ಬದಲಾವಣೆ ಮಾಡಿ ಮತ್ತೆ ಕಾಂಗ್ರೆಸ್ ಗೆ ಅಧಿಕಾರ ಕೊಡಬೇಕು ಎಂಬುದು ಜನರ ಅಭಿಲಾಷೆಯಾಗಿದೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿ ಜಿಲ್ಲೆಯ ಗೋಕಾಕ ಪಟ್ಟಣದಲ್ಲಿ ಇಂದು ಆಯೋಜಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ವಿಪಕ್ಷ ನಾಯಕರಾದ ಸಿದ್ದರಾಮಯ್ಯ ಬಿಜೆಪಿ ವಿರುದ್ದ ವಾಗ್ದಾಳಿ ನಡೆಸಿದರು.

ಗೋಕಾಕ ಜನ ಈ ಬಾರಿ ಬದಲಾವಣೆಯನ್ನು ಬಯಸಿದ್ದಾರೆ, ಇದೇ ರೀತಿ ರಾಜ್ಯದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ. ಇದಕ ಕಾರಣ ರಾಜ್ಯದಲ್ಲಿರುವ ಜನವಿರೋಧಿ, ಭ್ರಷ್ಟ ಸರ್ಕಾರ, ಈ ಸರ್ಕಾರವನ್ನು ಬದಲಾವಣೆ ಮಾಡಿ ಮತ್ತೆ ಕಾಂಗ್ರೆಸ್ ಗೆ ಅಧಿಕಾರ ಕೊಡಬೇಕು ಎಂಬುದು ಜನರ ಅಭಿಲಾಷೆಯಾಗಿದೆ ಎಂದರು.

2013ರಲ್ಲಿ ಕಾಂಗ್ರೆಸ್ ಗೆ ನೀವೆಲ್ಲ ಆಶೀರ್ವಾದ ಮಾಡಿ ನನಗೆ ಮುಖ್ಯಮಂತ್ರಿಯಾಗಲು ಅವಕಾಶ ಕೊಟ್ಟಾಗ ನಮ್ಮ ಸರ್ಕಾರದ 5 ವರ್ಷಗಳಲ್ಲಿ ಸಮಾಜದ ಎಲ್ಲಾ ಜಾತಿ, ಧರ್ಮಗಳ ಬಡವರಿಗೆ ಕಾರ್ಯಕ್ರಮವನ್ನು ನೀಡುವ ಪ್ರಯತ್ನ ಮಾಡಿದ್ದೆವು. ನಮ್ಮದು ನುಡಿದಂತೆ ನಡೆದ ಸರ್ಕಾರ. ನಾವು ಜನರಿಗೆ ನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸಿದ್ದೆವು, ಇದನ್ನು ಯಾರು ಬೇಕಾದರೂ ಪರಿಶೀಲನೆ ಮಾಡಬಹುದಾಗಿದೆ. ನಾವು ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇ-ರಿಸಿದ್ದೆವು. ಅನ್ನಭಾಗ್ಯ, ಕೃಷಿ ಭಾಗ್ಯ, ಶೂಭಾಗ್ಯ, ಪಶುಭಾಗ್ಯ, ಮೈತ್ರಿ, ಮನಸ್ವಿನಿ, ಇಂದಿರಾ ಕ್ಯಾಂಟೀನ್, ಶಾದಿಭಾಗ್ಯ, ಸಾಲಮನ್ನಾ ಮುಂತಾದ ಕಾರ್ಯಕ್ರಮಗಳನ್ನು ಜಾರಿಗೆ ಕೊಟ್ಟು ಬಡವರ ಬದುಕನ್ನು ಹಸನಾಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೆವು. ಆದ-'ರೆ ಬಿಜೆಪಿ ಪಕ್ಷ ರಾಜ್ಯದ ಜನರಿಗೆ ಕಳೆದ ಚುನಾವಣೆ ವೇಳೆಯಲ್ಲಿ 600 ಭರವಸೆಗಳನ್ನು ನೀಡಿ ಅದರಲ್ಲಿ ಕೇವಲ 55 ಭರವಸೆಗಳನ್ನು ಮಾತ್ರ ಈಡೇರಿಸಿ ಜನರಿಗೆ ಮೋಸ ಮಾಡಿದೆ ಎಂದು ಟೀಕಿಸಿದರು.

ರಾಜ್ಯ ಸರ್ಕಾರದ ಭ್ರಷ್ಟಾಚಾರ ಮುಗಿಲು ಮುಟ್ಟಿದೆ. ಕರ್ನಾಟಕ ಅನುದಾನಿತ ಶಿಕ್ಷಣ ಸಂಸ್ಥೆಗಳು (ರುಪ್ಸಾ) ದವರು ದೇಶದ ಪ್ರಧಾನಿಗಳಿಗೆ, ಮುಖ್ಯಮಂತ್ರಿಗಳಿಗೆ ನಾವು 40% ಕಮಿಷನ್ ಕೊಡಬೇಕಾಗಿದೆ, ಹಿಂದೆಂದೂ ಹೀಗೆ ಕಮಿಷನ್ ಕೇಳುವ ಸರ್ಕಾರ ಬಂದಿರಲಿಲ್ಲ ಎಂದು ಪತ್ರ ಬರೆದಿದ್ದರು. ರಾಜ್ಯದ ಇತಿಹಾಸದಲ್ಲಿ ಮೊಟ್ಟ ಬಾರಿಗೆ ಬಾರಿಗೆ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಪ್ರಧಾನಿಗಳಿಗೆ ಪತ್ರ ಬರೆದಿದ್ದಾರೆ. ನರೇಂದ್ರ ಮೋದಿ ಅವರಿಗೆ ಭ್ರಷ್ಟಾಚಾರದ ಬಗ್ಗೆ ವಿರೋಧ ಇದ್ದರೆ ರಾಜ್ಯ ಸರ್ಕಾರದ ಮೇಲೆ ಕ್ರಮ ತೆಗೆದುಕೊಳ್ಳಬೇಕಿತ್ತು ಅಲ್ಲವೇ ಎಂದು ಪ್ರಶ್ನಿಸಿದರು.

ಈ ಪ್ರಚಾರ ಸಭೆಯಲ್ಲಿ ಸಾಕಷ್ಟು ಜನ ಪಂಚಾಯತಿ ಸದಸ್ಯರಿದ್ದಾರೆ, ಬಿಜೆಪಿ ಅಧಿಕಾರಕ್ಕೆ ಬಂದಮೇಲೆ ಕಳೆದ ನಾಲ್ಕು ವರ್ಷದಲ್ಲಿ ಒಂದೇ ಒಂದು ಮನೆ ಕಟ್ಟಿಸಿಕೊಟ್ಟಿದೆಯಾ ಹೇಳಿ? ರಮೇಶ್ ಜಾರಕಿಹೊಳಿ ಬಹಳ ದೊಡ್ಡ ನಾಯಕರು, ಒಂದು ಮನೆ ಕೊಡಿಸಿದ್ರಾ? ನಾನು ಮುಖ್ಯಮಂತ್ರಿಯಾಗಿದ್ದಾಗ 5 ವರ್ಷದಲ್ಲಿ 15 ಲಕ್ಷ ಮನೆಗಳನ್ನು ಕಟ್ಟಿಸಿಕೊಟ್ಟಿದ್ದೆ. ಇವರಿಂದ ಒಂದು ಮನೆ ಕೊಡೋಕಾಗಿಲ್ಲ. ನಾನು 7 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡುತ್ತಿದ್ದೆ, ಬಿಜೆಪಿಯವರು ಅನ್ನಭಾಗ್ಯ ಕೇಂದ್ರ ಸರ್ಕಾರದ ಕಾರ್ಯಕ್ರಮ ಎಂದರು, ಇದು ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದ್ದರೆ ಗುಜರಾತ್ ನಲ್ಲಿ, ಉತ್ತರ ಪ್ರದೇಶದಲ್ಲಿ ಯಾಕಿಲ್ಲಪ್ಪ? ಹೀಗೆ ಬರೀ ಸುಳ್ಳು ಹೇಳಿಕೊಂಡು ತಿರುಗುತ್ತಾರೆ. ಬಿಜೆಪಿ ಒಂದು ಸುಳ್ಳಿನ ಫ್ಯಾಕ್ಟರಿ ಇದ್ದ ಹಾಗೆ. ಅವರ ಸುಳ್ಳುಗಳಿಗೆ ಇತಿಮಿತಿಯೇ ಇಲ್ಲ. ಕೃಷಿಭಾಗ್ಯ, ಇಂದಿರಾ ಕ್ಯಾಂಟೀನ್, ವಿದ್ಯಾಸಿರಿ ಇಂದು ಇದೆಯಾ? ನಮ್ಮ ಸರ್ಕಾರ ನೀಡಿದ್ದ ಮನೆಗಳಿಗೆ ಇವರಿಗೆ ಬಿಲ್ ಕೊಡಲು ಸಾಧ್ಯವಾಗಿಲ್ಲ. ಇಂಥಾ ಬಡವರ ವಿರೋಧಿಗಳು ಇವರು ಎಂದರು.

ಗೋಕಾಕ್ ನಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳು. ಜನರನ್ನು ಬೆದರಿಸಿ ಭಯದ ವಾತಾವರಣ ನಿರ್ಮಾಣ ಮಾಡುವವರು ರಾಜಕೀಯದಲ್ಲಿ ಇರಬಾರದು. ಹಿಂದೆ ರಮೇಶ್ ಜಾರಕಿಹೊಳಿ ರಾಜೀನಾಮೆ ನೀಡಿ ಸಮ್ಮಿಶ್ರ ಸರ್ಕಾರವನ್ನು ಕಿತ್ತುಹಾಕಿದ್ದಾಗ ನಾನು ಇಲ್ಲಿಗೆ ಬಂದಿದ್ದೆ. 2018ರಲ್ಲಿ ರಮೇಶ್ ಜಾರಕಿಹೊಳಿ ನಮ್ಮ ಪಕ್ಷದಿಂದ ಗೆದ್ದಿದ್ದರು. ಅಧಿಕಾರದ ಆಸೆಗಾಗಿ ಆಪರೇಷನ್ ಕಮಲಕ್ಕೆ ಒಳಗಾಗಿ, ಸಮ್ಮಿಶ್ರ ಸರ್ಕಾರ ಉರುಳಿಸಿ ಬಿಜೆಪಿ ಸೇರಿದರು ಆದರೂ ಇಂದು ಅವ-ರಿಗೆ ಮಂತ್ರಿಯಾಗಿ ಉಳಿದುಕೊಳ್ಳಲು ಆಗಲಿಲ್ಲ. ಮಂತ್ರಿ ಹುದ್ದೆ ಹೋಗಿದ್ದು ಯಾಕೆ ಎಂದು ನಿಮಗೆಲ್ಲ ಗೊತ್ತಿಲ್ಲ, ಅದನ್ನು ನಾನು ಹೇಳಲು ಹೋಗಲ್ಲ. ನಾವು ನಿಮ್ಮ ಜೊತೆ ಇದ್ದೀವಿ, ನೀವ್ಯಾರು ಭಯಪಡುವ ಅಗತ್ಯವಿಲ್ಲ. ಅಶೋಕ್ ಪೂಜಾರಿಯವರು ಹೋರಾಟ ಮಾಡಿಕೊಂಡು ಬಂದವರು, ಇದು ಪ್ರಜಾಪ್ರಭುತ್ವ ಇಲ್ಲಿ ಯಾರೂ ಹೆದರಿಕೊಳ್ಳಬೇಕಾದ ಅಗತ್ಯವಿಲ್ಲ. ನೀವೆಲ್ಲ ಮುಕ್ತವಾದ ವಾತಾವರಣದಲ್ಲಿ ಮತ ನೀಡಿ ಭ್ರಷ್ಟರನ್ನು ಮನೆಗೆ ಕಳಿಸುವ ಕೆಲಸ ಮಾಡಬೇಕು, ಇಲ್ಲದಿದ್ದರೆ ಪ್ರಜಾಪ್ರಭುತ್ವ ಉಳಿಯುವುದಿಲ್ಲ. ಈ ಬಾರಿ ಭಯಪಡದೆ ಮಹಾಂತೇಶ್ ಕಡಾಡಿ ಅವರಿಗೆ ಮತನೀಡಿ ಗೆಲ್ಲಿಸಿ, ನಿಮಗೆ ರಕ್ಷಣೆ ನೀಡಲು ನಾವು ನಿಮ್ಮ ಜೊತೆ ಇರುತ್ತೇವೆ ಎಂದು ಭರವಸೆ ನೀಡಿದರು.

ನಾವು ಮಾಡಿದ್ದ ಎಲ್ಲಾ ಕೆಲಸಗಳನ್ನು ಈ ಸರ್ಕಾರ ಹಾಳುಮಾಡಿದೆ. ಜಗದೀಶ್ ಶೆಟ್ಟರ್ ಅವರನ್ನು ಆಚೆ ತಳ್ಳಿದ್ದಾರೆ. ಇಂಥ-'ವರು ಯಾರಿಗೆ ರಕ್ಷಣೆ ಕೊಡುತ್ತಾರೆ? ಯಾ-ರಿಗೆ ಗೌರವ ಕೊಡುತ್ತಾರೆ? ಯಡಿಯೂರಪ್ಪ ಅವರನ್ನು ಬಲವಂತದಿಂದ ಮುಖ್ಯಮಂತ್ರಿ ಹುದ್ದೆಯಿಂದ ತೆಗೆದುಹಾಕಿದ್ದಾರೆ. ಅವರು ಸ್ವಯಂಪ್ರೇರಣೆಯಿಂದ ರಾಜೀನಾಮೆ ನೀಡಿದ್ದಲ್ಲ. ಅವರನ್ನು ಕೂಡ ಹೆದರಿಸಿದ್ದಾರೆ. ಅವರ ಕಣ್ಣಲ್ಲಿ ನೀರು ಹಾಕಿಸಿದರು, ಆರ್.-ಎಸ್.ಎಸ್ ನವರ ಕೈಗೊಂಬೆಯಾಗಿ ಬಸವರಾಜ ಬೊಮ್ಮಾಯಿ ಅವರನ್ನು ಕೂ-ರಿಸಿದ್ರು. ಈ ಸರ್ಕಾರ ಅಲಿಬಾಬಾ ಮತ್ತು 40 ಮಂದಿ ಕಳ್ಳರ ಗುಂಪು ಎಂದು ವ್ಯಂಗ್ಯವಾಡಿದರು.

ಬಸವಣ್ಣನವರ ಜಯಂತಿ ಆಚರಣೆ ಮಾಡಿದ್ದೇವೆ. ನಾವು ಬಸವಾದಿ ಶರಣ-ರ ಹಾದಿಯಲ್ಲಿ ನಡೆಯುವವರು. ನಾನು ನಿನ್ನೆ ಸಂಗಮದಲ್ಲಿ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮಕ್ಕೆ ಹೋಗಿದ್ದೆ, ನಾನು ಮುಖ್ಯಮಂತ್ರಿಯಾಗಿರುವಾಗ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರ ಇರಬೇಕು ಎಂದು ಆದೇಶ ಮಾಡಿದ್ದೆ, ಇದಕ್ಕೆ ಕಾರಣ ಬಸವಣ್ಣನವರು ನಾಡಿನ ಎಲ್ಲಾ ಮಂತ್ರಿಗಳಿಗೆ, ಶಾಸಕರಿಗೆ, ಅಧಿಕಾರಿಗಳಿಗೆ ಮತ್ತು ಜನರಿಗೆ ಪ್ರೇರಣೆಯಾಗಬೇಕು ಎಂಬುದಾಗಿತ್ತು. ಬಸವಣ್ಣನವರು ಹೇಗೆ ನುಡಿದಂತೆ ನಡೆದಿದ್ದರು, ಸಮಸಮಾಜದ ಕನಸು ಕಂಡಿದ್ದರು ಅದಕ್ಕೆ ಎಳ್ಳು ನೀರು ಬಿಟ್ಟಿರುವವರು ಬಿಜೆಪಿಯವರು. ಇಂಥವರು ಬಸವಣ್ಣನವರ ಬಗ್ಗೆ ಬರೀ ಮಾತುಗಳನ್ನಾಡುತ್ತಾರೆ, ಅವರ ವಿಚಾರಗಳನ್ನು ಜಾರಿಗೆ ತರುವುದಿಲ್ಲ ಎಂದು ಹೇಳಿದರು.

ನಾವು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತೇವೆ. ನಮಗೆ ಇನ್ನೊಂದು ಅವಕಾಶ ಮಾಡಿಕೊಡಿ. ಇನ್ನು ಒಂದೆರೆಡು ದಿನದಲ್ಲಿ ನಮ್ಮ ಪ್ರಣಾಳಿಕೆ ಬಿಡುಗಡೆಯಾಗುತ್ತದೆ. ಇದರಲ್ಲಿ ನಾವು 4 ಪ್ರಮುಖ ಭರವಸೆಗಳನ್ನು ನೀಡಿದ್ದೇವೆ. ಪ್ರತೀ ಮನೆಗೆ 200 ಯುನಿಟ್ ಉಚಿತ ವಿದ್ಯುತ್, ಪ್ರತಿ ಮನೆಯ ಯಜಮಾನಿಗೆ ತಿಂಗಳಿಗೆ 2000 ರೂಪಾಯಿ, ಬಡವರಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ನೀಡುತ್ತೇವೆ. ಎಲ್ಲಾ ಪದವೀಧರ ನಿರುದ್ಯೋಗಿ ಯುವಕರಿಗೆ ತಿಂಗಳಿಗೆ 3000 ರೂಪಾಯಿ ನೀಡುತ್ತೇವೆ. ಡಿಪ್ಲೊಮಾ ಪದವೀಧರರಿಗೆ ತಿಂಗಳಿಗೆ 1500 ರೂಪಾಯಿ ನೀಡುತ್ತೇವೆ. ಮುಂದೆ ನಾವು ಅಧಿಕಾರಕ್ಕೆ ಬಂದ ನಂತರ ರೈತರಿಗೆ 5 ಲಕ್ಷದ ವರೆಗೆ ಬಡ್ಡಿ ರಹಿತವಾಗಿ ಸಾಲ ನೀಡುತ್ತೇವೆ ಎಂದು ಭರವಸೆ ನೀಡಿದರು.

ಮಹಾಂತೇಶ್ ಕಡಾಡಿ ಗೆದ್ದ ನಂತರ ಇನ್ನೊಮ್ಮೆ ನಿಮಗೆ ಧನ್ಯವಾದ ತಿಳಿಸಲು ಬರುತ್ತೇನೆ. ನೀವು ಭಯವನ್ನು ಬಿಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರಿಗೂ ಭಯಪಡಬೇಕಾದ ಅಗತ್ಯವಿಲ್ಲ. ಮೇ 10 ರಂದು ನಡೆಯುವ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಮಹಾಂತೇಶ್ ಕಡಾಡಿ ಅವರನ್ನು ಗೆಲ್ಲಿಸಿ ಕೊಡಬೇಕು ಎಂದು ಮನವಿ ಮಾಡುತ್ತೇನೆ ಎಂದರು.

## ಸವದಿ, ಶೆಟ್ಟರ್ ಕಾಂಗ್ರೆಸ್ ಗೆ ಹೋಗಿರೋದು ಬಿಜೆಪಿ ಗೆ ಒಳಿತಾಗಲಿದೆ ಎಂದ ಸಿಎಂ ಬೊಮ್ಮಾಯಿ



ದಾವಣಗೆರೆ: ಕಾಂಗ್ರೆಸ್ ನಾಯಕ ರಾಹುಲ್ ಗಾಂದಿ ತೋರಿಕೆಗಾಗಿ ಲಿಂಗಾಯತ ಮಠಕ್ಕೆ ಹೋಗುತ್ತಿರುವುದಕ್ಕೆ ಧನ್ಯವಾದಗಳನ್ನು ಹೇಳುವುದಾಗಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಅವರು ಸೋಮವಾರ ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ರಾಜ್ಯಕ್ಕೆ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಸೃತಿ ಇರಾನಿ, ಸೇರಿದಂತೆ ಹಲವು ನಾಯಕರು ತಾರಾ ಪ್ರಚಾರಕರಾಗಿ ಆಗಮಿಸುತ್ತಿದ್ದಾರೆ ಎಂದರು.

ಸಿಎಂ ಆಗಬೇಕು ಎಂದು ನಾನು ಅಂ-ದುಕೊಂಡಿರಲಿಲ್ಲ. ಹಿಂದೆಯೂ ಹೈಕಮಾಂಡ್ ತೀರ್ಮಾನ ಮಾಡಿದ್ದು, ಈಗಲೂ ಕೂಡ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದರು. ವರಿಷ್ಠರು ಎಲ್ಲವನ್ನೂ ಗಮನಿಸುತ್ತಿರುವುದಾಗಿ ತಿಳಿಸಿದರು.

ಡಿಕೆಶಿ ಹೇಳುವುದು ಒಂದು ಮಾಡೋದು ಒಂದು ಭಾವನೆಗಳ ಜೊತೆ ಬಿಜೆಪಿ ಆಟವಾಡುತ್ತಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿ. ಲಿಂಗಾಯತ ವಿವಾದಗಳನ್ನು ತೆಗೆದಿದ್ದೇ ಅವರು. ಡಿಕೆಶಿ ಹೇಳುವುದು ಒಂದು ಮಾಡೋದು ಒಂದು . ದೇವರು ಯಾರಿಗೆ ಆಶೀರ್ವಾದ ಮಾಡ್ತಾರೆ ಎಂದು ಕಾದು ನೋಡೋಣ ಎಂದು ತಿಳಿಸಿದರು.

**ಸವದಿ, ಶೆಟ್ಟರ್ ಕಾಂಗ್ರೆಸ್ ಗೆ ಹೋಗಿರೋದು ಬಿಜೆಪಿ ಗೆ ಒಳಿತಾಗಲಿದೆ**

ಕಳೆದ ಬಾರಿಗಿಂತ ಈ ಬಾರಿ ನಮಗೆ ಮತಗಳು ಹೆಚ್ಚಾಗಲಿವೆ ಎಂದರು. ಕಾಂಗ್ರೆಸ್ ಮಿತ್ರರಿಗೆ ನಾನು ಧನ್ಯವಾದ ಹೇಳಲು ಇಷ್ಟ ಪಡುತ್ತೇನೆ ಎಂದರು. ಸವದಿ, ಶೆಟ್ಟರ್ ಕಾಂಗ್ರೆಸ್ ಗೆ ಹೋಗಿರೋದು ಬಿಜೆಪಿ ಗೆ ಪ್ಲಸ್ ಆಗುತ್ತದೆ. ಅವರ ಕ್ಷೇತ್ರದಲ್ಲಿ ಅವರ ವಿರುದ್ದ ಜನರು ಮಾತನಾಡುತ್ತಿದ್ದಾರೆ.

ಎಲ್ಲಾ ಪದವಿ ಪಡೆದು ನಂತರ ಕಾಂಗ್ರೆಸ್ ಗೆ ಹೋಗಿದ್ದು ಜನರು ಅವರನ್ನು ಒಪ್ಪುವುದಿಲ್ಲ ಎಂದರು. ಹೇಳಿಕೆ ತಿರುಚುತ್ತಿದ್ದಾರೆ ಮೀಡಿಯಾದಲ್ಲೇ ಸ್ಪಷ್ಟವಾಗಿ ಸಿದ್ದರಾಮಯ್ಯ ಹೇಳಿದ್ದಾರೆ. ಆದರೆ ಈಗ ಅವರ ಹೇಳಿಕೆಯನ್ನು ತಿರುಚಿ ಹೇಳುತ್ತಿದ್ದಾರೆ. ಜನರು ಏನು ದಡ್ಡರಲ್ಲ ಎಲ್ಲವನ್ನು ಗಮನಿಸಿದ್ದಾರೆ ಎಂದರು.

## ಶೇಕಡಾ 40% ಕಮಿಷನ್ ಬಿಜೆಪಿ ಸಾಧನೆ: ಎಐಸಿಸಿ ಅಧ್ಯಕ್ಷ ಖರ್ಗೆ ಟೀಕೆ



ಚಿಕ್ಕಮಗಳೂರು: ಈ ಬಾರಿಯ ಚುನಾವಣೆಯನ್ನು ನಾವು ಗೆಲ್ಲಲೇಬೇಕು ಎಂಬ ತೀರ್ಮಾನಕ್ಕೆ ನೀವು ಬರಬೇಕು. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅವರು ಜನರ ಹಿತ ಮರೆತು, ಕೇವಲ ಲಂಚದಲ್ಲಿ ಮುಳುಗಿದ್ದಾರೆ. ಪ್ರತಿ ಕೆಲಸದಲ್ಲಿ 40% ಕಮಿಷನ್ ಭ್ರಷ್ಟಾಚಾರ ಮಾಡಿದ್ದಾರೆ. ಈ ಆರೋಪವನ್ನು ಕಾಂಗ್ರೆಸ್ ಮಾಡುತ್ತಿಲ್ಲ, ಗುತ್ತಿಗೆದಾರರ ಸಂಘ, ರುಪ್ಸಾ ಸಂಸ್ಥೆ, ಮಾಧ್ಯಮಗಳ ವರದಿಗಳು, ಮಠಮಾನ್ಯಗಳು ಈ ಆರೋಪ ಮಾಡಿವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಎಂದು ಹೇಳಿದರು.

ಇವರೆಲ್ಲಾ ಕೇವಲ ಆರೋಪ ಮಾಡುವುದಲ್ಲದೇ, ಪ್ರಧಾನಿಗೆ ಪತ್ರ ಬರೆದು ದೂರು ನೀಡಿದ್ದಾರೆ.

ಇಷ್ಟೆಲ್ಲಾ ಆದರೂ ಇಡೀ ದೇಶದಲ್ಲಿ ಮೋದಿ ಅವರು ನಾ ಖಾವೂಂಗಾ, ನಾ ಖಾನೇದೂಂಗಾ ಎಂದು ಹೇಳಿಕೊಂಡು ಓಡಾಡುತ್ತಾರೆ. ಆದರೆ ಮೋದಿ ಅವರು ಲಂಚ ತಿನ್ನುತ್ತಿರುವವರ ಜತೆ ಸುತ್ತಾಡುತ್ತಿದ್ದಾರೆ. ಪ್ರಶಂಸೆ ಮಾಡುತ್ತಿದ್ದಾರೆ. 40% ಲಂಚದಲ್ಲಿ ಕೇಂದ್ರದ ಪಾಲು ಎಷ್ಟಿದೆಯೋ ಗೊತ್ತಿಲ್ಲ. ಈ ಮಾತುಗಳು ಜನರ ಬಾಯಿಂದ ಬರುತ್ತಿದೆ. ಆದರೂ ಆವರು ಈ ಬಗ್ಗೆ ಗಮನಹರಿಸುತ್ತಿಲ್ಲ ಎಂದು ತಿಳಿಸಿದರು..

ರಾಜ್ಯ ಸರಕಾರ ಯಾವುದೇ ಅಭಿವೃದ್ಧಿ ಮಾಡಿಲ್ಲ. ಕೇಂದ್ರ ಸರ್ಕಾರ ಕೂಡ ಯಾವುದೇ ಯೋಜನೆಯನ್ನು ರಾಜ್ಯಕ್ಕೆ ನೀಡಿಲ್ಲ. ಚಿಕ್ಕಮಗಳೂರಿಗೂ ಬಂದಿಲ್ಲ. ಬಿಜೆಪಿ ತನ್ನ ಕಾಲದಲ್ಲಿ ಯಾವ ಯೋಜನೆ ತಂದಿದ್ದಾರೆ ಎಂದು ಹೇಳಲು ಸಾಧ್ಯವೇ? ನಾನು ರೈಲ್ವೇ ಸಚಿವನಾಗಿ ಒಂದು ವರ್ಷ ಅವಕಾಶ ಸಿಕ್ಕಿತ್ತು. ಆಗ ನೆನೆಗುದಿಗೆ ಬಿದ್ದದ್ದ ಚಿಕ್ಕಮಗಳೂರು ಕಡೂರು ಮಾರ್ಗವನ್ನು ಪೂರ್ಣಗೊಳಿಸಿದ್ದಾಗಿ ಅವರು ಹೇಳಿದರು.

ಇಲ್ಲಿಂದ ಆರಿಸುವ ಶಾಸಕರು ಸಂಸದರು ಕೇಂದ್ರದ ಮೇಲೆ ಒತ್ತಡ ತಂದು ಕೆಲಸ ಮಾಡಿಸುವುದಿಲ್ಲ ಯಾಕೆ? ಬಿಜೆಪಿಯವರು 70 ವರ್ಷಗಳಲ್ಲಿ ಕಾಂಗ್ರೆಸ್ ಏವು ಮಾಡಿದೆ ಎಂದು ಕೇಳುತ್ತಾರೆ. ಕಾಂಗ್ರೆಸ್ ಯಾವುದೇ ಯೋಜನೆ ಮಾಡದಿದ್ದರೆ ದೇಶ ಇಷ್ಟು ಅಭಿವೃದ್ಧಿ ಆಗುತ್ತಿರಲಿಲ್ಲ. 1947ರಲ್ಲಿ ಸಾಕ್ಷರತೆ ಪ್ರಮಾಣ ಶೇ.16ರಷ್ಟಿತ್ತು. ಆದರೆ 2013-14ರವರೆಗೆ ಶೇ.74 ಕ್ಕೆ ಏರಿಕೆಯಾಯಿತು. ಆದ-'ರೂ ನಾವು ಏನು ಮಾಡಿದ್ದೇವೆ ಎಂದು ಕೇಳುತ್ತಾರೆ. ಜನರನ್ನು ಶಿಕ್ಷಿತರನ್ನಾಗಿ ಮಾಡಿ, ಬದುಕುವಂತೆ ಮಾಡಿದ್ದೇವೆ. 1947ರಲ್ಲಿ ಪ್ರತಿ ವ್ಯಕ್ತಿಯ ಜೀವಮಾನ ಸರಾಸರಿ 32 ವರ್ಷದಷ್ಟಿತ್ತು. ಆದರೆ ಇದು ಇಂದು 70 ವರ್ಷವಾಗಿದೆ. ಈಗ ಮೋದಿ ಅವರ ಕಾಲದಲ್ಲಿ ಶೇ.69.27ರಷ್ಟಕ್ಕೆ ಕುಸಿದಿದೆ. ಆಸ್ಪತ್ರೆ, ಪೋಷಕಾಂಶಗಳ ಕೊರತೆ ಹೆಚ್ಚಾಗಿದೆ. ಈ ಅಂಕಿಅಂಶಗಳು ಕೇಂದ್ರ ಸರ್ಕಾರ ನೀಡಿದೆ ಎಂದರು.

ವಿದ್ಯಾವಂತ ಹೆಣ್ಣುಮಕ್ಕಳ ಪ್ರಮಾಣ ಶೇ 7.3ಯಷ್ಟಿತ್ತು, ನಂತರ ಇದು ಶೇ. 65.46ಕ್ಕೆ ಏರಿಕೆಯಾಗಿದೆ. ಬಿಜೆಪಿಯವರು ಮಾತಿನಲ್ಲಿ ಎಲ್ಲವನ್ನು ಗೆಲ್ಲಲು ಸುಳ್ಳು ಹೇಳುತ್ತಾರೆ. ಅವ-ರಿಗೆ ಜನರ ಹಿತ, ಅಭಿವೃದ್ಧಿ ಬೇಕಾಗಿಲ್ಲ. ಸ್ವಾತಂತ್ರ್ಯಕ್ಕೂ ಮುನ್ನ ಎಲ್ಲಾ ಹಂತದ ಶಾಲೆಗಳ ಸಂಖ್ಯೆ 1.40,794 ಇತ್ತು. 2013-14 ಇದರ ಸಂಖ್ಯೆ 14 ಲಕ್ಷಕ್ಕೆ ಏರಿಕೆಯಾಗಿದೆ. ಈ ಬಗ್ಗೆ ಮೋದಿ ಅವರು ಯಾಕೆ ಓದಿಕೊಂಡಿಲ್ಲ. ಇದ್ಯಾವುದೂ ಬಿಜೆಪಿಯವರ ತಲೆಗೆ ಹೋಗುವುದಿಲ್ಲ ಎಂದು ಲೇವಡಿ ಮಾಡಿದರು.

ನೀರಾವರಿ ವಿಚಾರ ನೋಡುವುದಾದರೆ, 1947ರಲ್ಲಿ ಒಟ್ಟಾರೆ ನೀರಾವರಿ ಪ್ರದೇಶ 21 ಮಿಲಿಯನ್ ಹೆಕ್ಟೇರ್ ನಷ್ಟಿತ್ತು. 2013-14ರಲ್ಲಿ ಇದು 68 ಮಿಲಿಯನ್ ಹೆಕ್ಟೇರ್ ಗೆ ಏರಿಕೆಯಾಯಿತು. ಆಹಾರ ಉತ್ಪಾದನೆಯಲ್ಲಿ 50 ಮಿಲಿಯನ್ ಟನ್ ನಷ್ಟಿತ್ತು, ಈಗ 265 ಮಿಲಿಯನ್ ಟನ್ ಆಗಿದೆ. ಆಗ ನಮ್ಮ ಜನ ಅಮೆರಿಕದ ಗೋದಿಗೆ ಕೈಚಾಚುತ್ತಿದ್ದರು. ಆದರೆ ಇಂದು ಮನ್ ಮೋಹನ್ ಸಿಂಗ್ ಅವರು ಆಹಾರ ಭದ್ರತಾ ಕಾಯ್ದೆ ತಂದು ಬಡವರ ಹೊಟ್ಟೆ ತುಂಬಿಸುವ ಕೆಲಸ ಮಾಡಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅನ್ನಭಾಗ್ಯ ಯೋಜನೆ ಮೂಲಕ ಉಚಿತ ಅಕ್ಕಿ ನೀಡಲಾಗುತ್ತಿತ್ತು. ಈಗ ಪ್ರತಿ ಬಡ ಕುಟುಂಬದ ಪ್ರತಿ ಸದಸ್ಯರಿಗೆ 10 ಕೆ.ಜಿ ಉಚಿತ ಅಕ್ಕಿ ನೀಡಲಾಗುವುದು. ಸ್ವಾತಂತ್ರ್ಯ ಬಂದಾಗ ದೇಶದಲ್ಲಿ ವಿದ್ಯುತ್ ಸಂಪರ್ಕ ಪ್ರಮಾಣ ಶೇ.27.2 ನಷ್ಟಿತ್ತು, 2012-14ರ ವೇಳೆಗೆ ಶೇ. 83.1ಕ್ಕೆ ಏರಿಕೆಯಿತು. ನಾವು ಮಾಡಿರುವ ಮೂಲಭೂತ ಸೌಕರ್ಯ ಕಾಣುವುದಿಲ್ಲವೇ? ಹಸಿರು ಕ್ರಾಂತಿ, ಶ್ವೇತ ಕ್ರಾಂತಿಯಿಂದ ದೇಶದ ಜನರ ಬದುಕಿನಲ್ಲಿ ಬದಲಾವಣೆ ತರಲಾಯಿತು ಎಂದು ಹೇಳಿದರು.

}2ನೇ ಪುಟಕ್ಕೆ

## ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ: ಡಿಕೆಶಿ




ಕೊಲ್ಲೂರು: ರಾಜ್ಯಾದ್ಯಂತ ಅನೇಕ ನಾಯಕರುಗಳು ಕಾಂಗ್ರೆಸ್ ಸೇರಿದ್ದಾರೆ.

ಜನರ ಈ ವಿಶ್ವಾಸ ಉಳಿಸಿಕೊಂಡು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ತಂದು ಜನರ ಸೇವೆ ಮಾಡಬೇಕು. ರಾಹುಲ್ ಗಾಂಧಿ ಅವರು ಈ ಭಾಗದಲ್ಲಿ ಪ್ರಚಾರ ಮಾಡಲಿದ್ದಾರೆ ಎಂದು ತಿಳಿಸಿದರು.

ಕೊಲ್ಲೂರಿನಲ್ಲಿ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಕರಾವಳಿ ಭಾಗದಲ್ಲಿ ನಮ್ಮ ಪಕ್ಷಕ್ಕೆ ಉತ್ತಮ ವಾತಾವರಣವಿದ್ದು ಕನಿಷ್ಠ 10 ಕ್ಷೇತ್ರಗಳನ್ನು ಗೆಲ್ಲುವ ವಿಶ್ವಾಸವಿದೆ.

ಈ ಭಾಗದಲ್ಲಿ ಬಿಜೆಪಿ ಹಿಂದುತ್ವದ ವಿಚಾರದಲ್ಲಿ ಚುನಾವಣೆ ಮಾಡುತ್ತಿದೆ ಇದು ಫಲ ನೀಡುವುದೇ ಎಂದು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, 'ಈ ಬಾರಿ ಆ ತಂತ್ರ ಫಲ ನೀಡುವುದಿಲ್ಲ.

ಈ ಚುನಾವಣೆ ಭಾವನೆ ಹಾಗೂ ಬದುಕಿನ ನಡುವಣ ಚುನಾವಣೆ. ಬಿಜೆಪಿ ಭಾವನೆಗಳ ಮೇಲೆ ಚುನಾವಣೆ ಮಾಡಿದರೆ, ನಾವು ಬದುಕಿನ ಮೇಲೆ ಚುನಾವಣೆ ಮಾಡುತ್ತೇವೆ.

ಅವರು ಭ್ರಷ್ಟಾಚಾರ ನಿರ್ಮೂಲನೆಗೆ ನಾವು ಪಣ ತೊಟ್ಟಿದ್ದೇವೆ' ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷದ ವಿರುದ್ಧ ಬಂಡಾಯ ಸ್ಪರ್ಧಿಗಳ ವಿಚಾರವಾಗಿ ಕೇಳಿದ ಪ್ರಶ್ನೆಗೆ, 'ಬಹುತೇಕ ಎಲ್ಲಾ ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯುತ್ತಾರೆ. ಕೆಲವರಿಗೆ ಪಕ್ಷೇತರರಾಗಿ ಸ್ಪರ್ಧಿಸುವ ಚಟ ಇದ್ದು, ಮೊದಲಿನಿಂದಲೂ ಹಾಗೆ ಮಾಡಿದ್ದಾರೆ. ಅಂತಹವರನ್ನು ಹೋಗಬಹುದು, ಉಳಿದವರು ಅರ್ಜಿ ಹಿಂಪಡೆಯಲಿದ್ದಾರೆ.

ನಿನ್ನೆ ಉಡುಪಿಯಲ್ಲಿ ಮಾತನಾಡಿದ್ದೇನೆ, ಅವರು ಹಾಗೂ ಚಿಕ್ಕಪೇಟೆಯಲ್ಲಿ ಮಾಜಿ ಮೇಯರ್ ಅವರು ಅರ್ಜಿ ಹಿಂಪಡೆಯಲಿದ್ದಾರೆ' ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರ ಲಿಂಗಾಯತ ಸಮುದಾಯ ಕುರಿತ ವಿವಾದದ ಬಗ್ಗೆ ಕೇಳಿದಾಗ, 'ಸಿದ್ದರಾಮಯ್ಯ ಅವರು ಅವರ ಕಾಲದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಹೇಳಿದ್ದಾರೆ ಹೊರತು, ಇಡೀ ಸಮುದಾಯ ಉದ್ದೇಶಿಸಿ ಹೇಳಿಲ್ಲ.

ರಾಜ್ಯದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಬಿಜೆಪಿ ನಾಯಕರಾದ ಯತ್ನಾಳ್, ವಿಶ್ವನಾಥ್, ಗೂಳಿಹಟ್ಟಿ ಶೇಖರ್, ಕೆಂಪಣ್ಣ ಅವರು ಹೇಳಿದ್ದಾರೆ. ಈ ಸರ್ಕಾರದಲ್ಲಿ ಭ್ರಷ್ಟಾಚಾರ ನಡೆದಿರುವುದನ್ನು ಯಾರು ಮುಚ್ಚಿ ಹಾಕಲು ಸಾಧ್ಯವಿಲ್ಲ.

ರಾಜ್ಯದಲ್ಲಿ 40% ಕಮಿಷನ್, ಪಿ ಎಸ್ ಐ ಸೇ-ರಿದಂತೆ ನೇಮಕಾತಿ ಹಗರಣ, ವಿವಿ ಉಪಕುಲಪತಿ ನೇಮಕಕ್ಕೆ ಹಣ ಪಡೆದಿರುವುದು ನಮ್ಮ ಕಾಲದಲ್ಲಿ ಆಗಿದೆಯಾ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಆಗಿದೆ. ಸಿದ್ದರಾಮಯ್ಯ ಸರ್ಕಾರದ ವಿಚಾರ ಮಾತನಾಡಿದ್ದು, ಸಮುದಾಯದ ವಿಚಾರ ಮಾತನಾಡಿಲ್ಲ' ಎಂದು ತಿಳಿಸಿದರು.

ಈ ಬಾರಿ ಲಿಂಗಾಯತ ಸಮುದಾಯ ಕಾಂಗ್ರೆಸ್ ಪಕ್ಷದ ಕೈ ಹಿಡಿಯಲಿದೆಯೆ ಎಂಬ ಪ್ರಶ್ನೆಗೆ, 'ಬಿಜೆಪಿ ಆಣೆಕಟ್ಟು ಒಡೆದಿದೆ.

ಕೇವಲ ಲಿಂಗಾಯತ ಸಮುದಾಯ ಮಾತ್ರವಲ್ಲ, ಎಲ್ಲಾ ಸಮುದಾಯದ ನಾಯಕರು ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿದ್ದಾರೆ. ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದ್ದು, ಉತ್ತಮ ಆಡಳಿತ ನೀಡಲಾಗುವುದು.

ಹೊರಗಡೆ ಇರುವ ಎಲ್ಲ ಮತದಾರರು ತಮ್ಮ ಊರಿಗೆ ಬಂದು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಬೇಕು ಎಂದು ಮನವಿ ಮಾಡುತ್ತೇನೆ' ಎಂದು ತಿಳಿಸಿದರು.

## ಫುಟ್‌ಪಾತ್‌ನಲ್ಲಿ ಮಲಗಿದ ಕುಸ್ತಿ ಪಟುಗಳು



ಹೊಸದಿಲ್ಲಿ: ಭಾರತದ ಕುಸ್ತಿ ಫೆಡರೇಶನ್ ಮುಖ್ಯಸ್ಥ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಸಿಡಿದೆದ್ದು ಪ್ರತಿಭಟನೆಗಿಳಿದಿರುವ ಕುಸ್ತಿಪಟುಗಳು ದೆಹಲಿಯ ಫುಟ್‌ಪಾತ್‌ನಲ್ಲಿ ಮಲಗಿರುವ ದೃಶ್ಯ ಎಲ್ಲೆಡೆ ಗಮನ ಸೆಳೆದಿದೆ.

ಪ್ರತಿಭಟನಾಕಾರ ಕುಸ್ತಿಪಟುಗಳು ಚಾದರ ಹೊದ್ದುಕೊಂಡು ಫುಟ್‌ಪಾತ್‌ನಲ್ಲಿ ಮಲಗಿರುವ ಫೋಟೊಗಳನ್ನು ಭಾರತದ ರಾಷ್ಟ್ರೀಯ ಕುಸ್ತಿ ಚಾಂಪಿಯನ್ ವಿನೇಶ್ ಫೋಗಟ್ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಪ್ರತಿಭಟನಾನಿರತ ಕುಸ್ತಿಪಟುಗಳು ಬ್ರಿಜ್ ಭೂಷಣ ಸಿಂಗ್ ವಿರುದ್ಧದ ಲೈಂಗಿಕ ಕಿರುಕುಳದ ಆರೋಪಗಳ ತನಿಖೆಯ ವಿವರಗಳನ್ನು ಕೇಳುತ್ತಿದ್ದಾರೆ. ಇದಕ್ಕಾಗಿ ಪ್ರತಿಭಟನೆಗಿಳಿದಿರುವ ಕುಸ್ತಿಪಟುಗಳು ಅನಿರ್ದಿಷ್ಟಾವಧಿ ಪ್ರತಿಭಟನೆಯಲ್ಲಿ ನಿರತರಾಗಿದ್ದಾರೆ. ಈ ವೇಳೆ ರಾತ್ರಿ ಇವರೆಲ್ಲ ಪ್ರತಿಭಟನಾರ್ಥವಾಗೇ ಫುಟ್‌ಪಾತ್‌ನಲ್ಲಿ ಮಗಲಿದ್ದಾರೆ.

ಪೋಡಿಯಂನಿಂದ ಪಾದಚಾರಿ ಮಾರ್ಗದವರೆಗೆ. ಮಧ್ಯರಾತ್ರಿ ತೆರೆದ ಆಕಾಶದ ಅಡಿಯಲ್ಲಿ ನ್ಯಾಯದ ಭರವಸೆಯಲ್ಲಿ" ಎಂದು ವಿನೇಶ್ ಫೋಗಟ್ ಟ್ವೀಟ್ ಮಾಡಿದ್ದಾರೆ.

## ಮೈಸೂರಿನ ಚಾಮುಂಡೇಶ್ವರಿ ದೇವಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದ ಕೇಂದ್ರ ಸಚಿವ ಅಮಿತ್ ಶಾ



ಮೈಸೂರು: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸೋಮವಾರ ರಾಜ್ಯಕ್ಕೆ ಭೇಟಿ ನೀಡಿದ್ದು, ಮೈಸೂ-ರಿನ ಚಾಮುಂಡೇಶ್ವರಿ ದೇವಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು.


ಇಂದಿನಿಂದ ಅಮಿತ್ ಶಾ ಅವರು ಮೂರು ದಿನಗಳ ಕಾಲ ರಾಜ್ಯದಲ್ಲಿ ಪ್ರವಾಸ ಆರಂಭಿಸಿದ್ದಾರೆ. ನಂತರ ಹಾಸನದಲ್ಲಿ ರೋಡ್ ಶೋ ನಡೆಸಲಿದ್ದಾರೆ.

ಭಾರತೀಯ ಜನತಾ ಪಕ್ಷ ಅಧಿಕಾರದಲ್ಲಿರುವ ದಕ್ಷಿಣದ ಏಕೈಕ ರಾಜ್ಯವಾದ ಕರ್ನಾಟಕದಲ್ಲಿ ವಿಧಾನಸಭೆ ಚುನಾವಣೆಗೆ ಮುನ್ನ, ಸತತ ಎರಡನೇ ಅವಧಿಗೆ ಚುನಾವಣಾ ಪ್ರಚಾರಕ್ಕಾಗಿ ಅಮಿತ್ ಶಾ ರಾಜ್ಯಕ್ಕೆ ಆಗಮಿಸಿದ್ದಾರೆ.

ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಇಂದಿನಿಂದ ಮೂರು ದಿನಗಳ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಸಿಡ್ಲಘಟ್ಟದಲ್ಲಿ ಪಥಸಂಚಲನದಲ್ಲಿ ಭಾಗವಹಿಸಲಿದ್ದಾರೆ. ಅವರು ಉತ್ತರ ಕನ್ನಡ ಜಿಲ್ಲೆಯ ಶಿರಸಿಯ ದೇವಸ್ಥಾನಕ್ಕೂ ಭೇಟಿ ನೀಡಲಿದ್ದಾರೆ ಮತ್ತು ಹಲವಾರು ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.


ಏಪ್ರಿಲ್ 29 ರಂದು ಪ್ರಧಾನಿ ನರೇಂದ್ರ ಮೋದಿ ರಾಜ್ಯಕ್ಕೆ ಭೇಟಿ ನೀಡುವುದರೊಂದಿಗೆ ಪಕ್ಷದ ಬೃಹತ್ ಚುನಾವಣಾ ಪ್ರಚಾರಕ್ಕೆ ಚಾಲನೆ ದೊರೆಯುವ ಸಾಧ್ಯತೆ ಇದೆ.

## ರಸ್ತೆಯಲ್ಲಿ ಬಾಜಿ ಮಾರುವ ಮಹಿಳೆಯರಲ್ಲಿ ಮತಯಾಚನೆ ಮಾಡಿದ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಡಾ. ರವಿ ಪಾಟೀಲ



ಬೆಳಗಾವಿ : ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿರುವ ಡಾ.ರವಿ ಪಾಟೀಲ್ ಅವರು ಸದಾಶಿವ ನಗರದ ವಿವಿದೆಡೆಗಳಲ್ಲಿ ಪ್ರಚಾರ ಮತಯಾಚನೆ ಕಾರ್ಯ ಕೈಗೊಂಡಿದ್ದರು. ಸದಾಶಿವ ನಗರದ ಫಸ್ಟ್ ಮೇನ್ ಸೆಕೆಂಡ್ ಕ್ರಾಸ್ ನಲ್ಲಿಯೂ ಕೂಡ ಡಾ.ರವಿ ಪಾಟೀಲ್ ಅವರಿಗೆ ಭರ್ಜರಿ ಬೆಂಬಲ ವ್ಯಕ್ತವಾಯಿತು.

ಈ ಭಾಗದಲ್ಲಿ ಮನೆ ಮನೆಗೆ ತೆರಳಿ ಡಾ.ರವಿ ಪಾಟೀಲ್ ಅವರು ಪ್ರಚಾರ ನಡೆಸಿ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸುವಂತೆ ವಿನಂತಿಸಿದರು. ಮನೆ ಮನೆಗಳಿಗೆ ತೆರಳಿ ಪ್ರಚಾರ ಕೈಗೊಂಡ ಸಂದರ್ಭದಲ್ಲಿ ಡಾ.ರವಿ ಪಾಟೀಲ್ ಅವರ ಸರಳ ಸುಸಂಸ್ಕೃತ ವ್ಯಕ್ತಿತ್ವ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಈ ಭಾಗದ ಜನರ ವಿವಿಧ ಸಮಸ್ಯೆಗಳ ಕುರಿತು ಮಾಹಿತಿ ಪಡೆದ ಡಾ.ರವಿ ಪಾಟೀಲ್ ಅವರು ಸಮಸ್ಯೆಗಳನ್ನು ನಿವಾರಿಸುವ ಮತ್ತು ಅಭಿವೃದ್ಧಿ ಯೋಜನೆಗಳನ್ನು ರೂಪಿಸುವ ಭರವಸೆ ನೀಡಿದರು. ಡಾ ರವಿ ಪಾಟೀಲ್ ಅವರಿಗೆ ಅಪಾರವಾದ ಜನ ಬೆಂಬಲ ವ್ಯಕ್ತವಾಗುತ್ತಿತ್ತು. ಶಾಹುನಗರ ಬಿಕೆ ಕಂಗ್ರಾಳಿ ರಸ್ತೆಯಲ್ಲಿ ಬಾಜಿ ಮಾರುವ ಮಹಿಳೆಯರಲ್ಲಿ ಕೂಡ ಮತಯಾಚನೆ ಮಾಡಿದ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಡಾ. ರವಿ ಪಾಟೀಲ ಇದೇ ಸಂದರ್ಭದಲ್ಲಿ ಬಾಜಿ ಮಾರುವ ಮಹಿಳೆ ಮಾತನಾಡಿ ನಿಮ್ಮಂತವರೇ ನಮ್ಮ ಬೆಳಗಾವಿ ಉತ್ತರ ಕ್ಷೇತ್ರಕ್ಕೆ ಬೇಕಾಗಿತ್ತು ನಾವು ನಿಮ್ಮನ್ನೇ ಬೆಂಬಲಿಸುತ್ತೇವೆ ಎಂದು ಮಹಿಳೆ ಹೇಳಿದರು.




ಬೆಳಗಾವಿ ಜಿಲ್ಲೆಯ ಗೋಕಾಕ ಪಟ್ಟಣದಲ್ಲಿ ಸೋಮವಾರ ಆಯೋಜಿಸಿದ್ದ ಚುನಾಣಾ ಪ್ರಚಾರ ಸಭೆಯಲ್ಲಿ ಸಿದ್ದರಾಮಯ್ಯ ಅವರು ಭಾಗವಹಿಸಿ ಪಕ್ಷದ ಅಭ್ಯರ್ಥಿ ಮಹಾಂತೇಶ ಕಡಾಡಿ ಅವರ ಪರ ಮತ ಯಾಚಿಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ಶಾಸಕರಾದ ಲಕ್ಷ್ಮಿ ಹೆಬ್ಬಾಳಕರ್, ಪ್ರಕಾಶ್ ರಾಥೋಡ್, ಪಕ್ಷದ ಜಿಲ್ಲಾಧ್ಯಕ್ಷ ವಿನಯ ನವಲಗಟ್ಟಿ ಹಾಜರಿದ್ದರು.

## ಶೇಕಡಾ 40% ಕಮಿಷನ್ ಬಿಜೆಪಿ ಸಾಧನೆ: ಎಐಸಿಸಿ ಅಧ್ಯಕ್ಷ ಖರ್ಗೆ ಟೀಕೆ

}ಮೊದಲನೇ ಪುಟದಿಂದ

ಬಿಜೆಪಿ ಸರ್ಕಾರ ರೈತರ ಆದಾಯ ಡಬಲ್ ಮಾಡುವುದಾಗಿ ಹೇಳಿತ್ತು. ಯಾರ ಆದಾಯ ಡಬಲ್ ಆಗಿದೆ? ನಮ್ಮ ಕಾಲದಲ್ಲಿ ಭತ್ತಕ್ಕೆ ಬೆಂಬಲ ಬೆಲೆಯನ್ನು ಶೇ.10.92ರಷ್ಟು ನಿಗಧಿ ಮಾಡಿದ್ದೆವು. ಬಿಜೆಪಿ ಅವಧಿಯಲ್ಲಿ ಅದು ಶೇ.4.09 ಗೆ ಕುಸಿದಿದೆ. ಹೀಗೆ ಅನೇಕ ವಿಚಾರದಲ್ಲಿ ಕಾಂಗ್ರೆಸ್ ಪಕ್ಷ ಬಿಜೆಪಿಗಿಂತ ಉತ್ತಮ ಜನಪರ ಯೋಜನೆ ನೀಡಿದೆ. ದೇಶದಲ್ಲಿ ಕೋಮುವಾದ, ಧರ್ಮಗಳ ನಡುವೆ ವೈಷಮ್ಯ ಸೃಷ್ಟಿಸಿ ದೇಶವನ್ನು ಬರ್ಬಾದ್ ಮಾಡುತ್ತಿರುವವರು ಬಿಜೆಪಿಯವರು. ನಾವು ಎಲ್ಲರನ್ನು ಶಾಂತಿಯುತವಾಗಿ ಎಲ್ಲರನ್ನು ಒಗ್ಗಟ್ಟಾಗಿಸಲು ಪ್ರಯತ್ನಿಸುತ್ತಿದ್ದೇವೆ. ನಮ್ಮದು ಬದುಕಿನ ಪ್ರಯತ್ನವಾದರೆ, ನಿಮ್ಮದು ಒಡಕಿನ ಪ್ರಯತ್ನವಾಗಿದೆ. ನೀವು ಇನ್ನು ಎಷ್ಟು ದಿನ ಜನರನ್ನು ಮೋಸ ಮಾಡುತ್ತೀರಿ ಎಂದು ಬಿಜೆಪಿಯನ್ನು ಪ್ರಶ್ನಿಸಿದರು.

ಕರ್ನಾಟಕ ಸರ್ಕಾರವನ್ನು ಕಿತ್ತೊಗೆಯಲು ನಾವು ಹಾಗೂ ಜನ ಯೋಚಿಸಿದ್ದಾರೆ. ನಿರರುದ್ಯೋಗ, ಹಣದುಬ್ಬರ ಹೆಚ್ಚಾಗಿದೆ. ಕರ್ನಾಟಕದಲ್ಲಿ 25 ಲಕ್ಷ ನಿರುದ್ಯೋಗಿಗಳಿದ್ದಾರೆ. ರಾಜ್ಯ ಸರ್ಕಾರದಲ್ಲಿ 2.50 ಲಕ್ಷ ಹುದ್ದೆಗಳು ಖಾಲಿ ಇವೆ. ಈ ಹುದ್ದೆ ಭರ್ತಿ ಮಾಡಲು ಸರ್ಕಾರ ಯಾಕೆ ಸಿದ್ಧವಿಲ್ಲ. ಶಆಲೆಗಳಲ್ಲಿ ಶಿಕ್ಷಕರು, ಆಸ್ಪತ್ರೆಯಲ್ಲಿ ವೈದ್ಯ ಹುದ್ದೆಗಳು ಖಾಲಿ ಇದ್ದರೂ ಯಾಕೆ ತುಂಬುತ್ತಿಲ್ಲ? ರಾಷ್ಟ್ರ ಮಟ್ಟದಲ್ಲಿ 30 ಲಕ್ಷ ಸರ್ಕಾರಿ ಹುದ್ದೆ ಖಾಲಿ ಇವೆ. ಇದರಲ್ಲಿ ಶೇ.50ರಷ್ಟು ಹುದ್ದೆಗಳು ಪರಿಶಿಷ್ಟರಿಗೆ ಸೇರಬೇಕಿದೆ. ಅದಕ್ಕಾಗಿ ಇವುಗಳನ್ನು ತುಂಬಲು ಅವರು ಸಿದ್ಧರಿಲ್ಲ ಎಂದರು.

ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತನ್ನಿ, ನಾವು ಜನಪರ ಕೆಲಸ ಮಾಡುತ್ತೇವೆ. ಕಾಂಗ್ರೆಸ್ ಪಕ್ಷ ನಾಲ್ಕು ಗ್ಯಾರಂಟಿ ಯೋಜನೆ ಘೋಷಿಸಿದೆ. ಗೃಹಜ್ಯೋತಿ ಯೋಜನೆ ಮೂಲಕ ಪ್ರತಿ ತಿಂಗಳು ಪ್ರತಿ ಮನೆಗೆ 200 ಯುನಿಟ್ ವಿದ್ಯುತ್ ಉಚಿತ, ಗೃಹಲಕ್ಷ್ಮಿ ಯೋಜನೆ ಮೂಲಕ ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು 2 ಸಾವಿರ ಪ್ರೋತ್ಸಾಹ ಧನ, ಆಮೂಲಕ ವರ್ಷಕ್ಕೆ 24 ಸಾವಿರ ನೀಡಲಾಗುವುದು. ಅನ್ನಭಾಗ್ಯ ಯೋಜನೆ ಮೂಲಕ ಪ್ರತಿ ಬಡ ಕುಟುಂಬಗಳ ಸದಸ್ಯರಿಗೆ ತಲಾ 10 ಕೆ.ಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಯುವನಿಧಿ ಯೋಜನೆ ಮೂಲಕ ಪದವೀಧರ ನಿರುದ್ಯೋಗಿ ಯುವಕರಿಗೆ ಪ್ರತಿ ತಿಂಗಳು 3 ಸಾವಿರ, ಡಿಪ್ಲೋಮಾ ಪದವೀಧರರಿಗೆ 1500 ನಿರುದ್ಯೋಗ ಭತ್ಯೆ ನೀಡಲಾಗುವುದು ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೊದಲ ಸಚಿವ ಸಂಪುಟದಲ್ಲಿ ಈ ನಾಲ್ಕೂ ಗ್ಯಾರಂಟಿ ಯೋಜನೆ ಸಾಧಿಸಲಾಗುವುದು. ಇದನ್ನು ಮಾಡದಿದ್ದರೆ, ಮುಖ್ಯಮಂತ್ರಿ ಸ್ಥಾನದಲ್ಲಿರುವವರನ್ನು ಎಐಸಿಸಿ ತೆಗೆದುಹಾಕಲಿದೆ. ಇಂದಿರಾ ಗಾಂಧಿ ಅವರ ಕಾಲದಲ್ಲಿ 10 ಅಂಶಗಳ ಕಾರ್ಯಕ್ರಮ ಮಾಡಿದೆವು, ಭೂಸುಧಾರಣೆ ಕಾರ್ಯಕ್ರಮ, ಬಡವ–ರಿಗೆ ನಿವೇಷನ, ನೀಡಿದ್ದೇವೆ. ಬಿಜೆಪಿಯವರು ಉದ್ಯಮಿಗಳಿಗೆ ನೆರವು ನೀಡುತ್ತಿದೆ. ನೀವು ಬಿಜೆಪಿ ಷಡ್ಯಂತ್ರಕ್ಕೆ ಬಲಿಯಾಗಬೇಡಿ. ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿ ಎಂದು ಕೋರಿದರು.

ಇಲ್ಲಿ ಕಾಫಿ ತೋಟದಲ್ಲಿ ಕೆಲಸಗಾರರಿದ್ದಾರೆ. ಬಿಜೆಪಿ ಸರ್ಕಾರ ಬಡವರ ಪರವಾಗಿ, ಕಾರ್ಮಿಕರ ಪರವಾಗಿ ಇದ್ದ ಕಾನೂನುಗಳನ್ನು ಬದಲಾವಣೆ ಮಾಡಿದೆ. ಅಂಬೇಡ್ಕರ್ ಅವರು 1946ರಲ್ಲಿ ಬ್ರಿಟೀಷ್ ಸರ್ಕಾರದಲ್ಲಿ 8 ತಾಸಿನ ಕೆಲಸ ಮಿತಿ ಹಾಗೂ ಅದಕ್ಕೆ ವೇತನವನ್ನು ನಿಗದಿ ಮಾಡಿದ್ದರು. ಆದರೆ ಬಿಜೆಪಿ ಸರ್ಕಾರ ಕೆಲಸದ ಮಿತಿಯನ್ನು 12 ತಾಸಿಗೆ ವಿಸ್ತರಿಸಿದೆ. ಇದರಿಂದ ಕಾರ್ಮಿಕರ ಮೇಲೆ ಒತ್ತಡ ಹೆಚ್ಚಾಗಿದೆ. ನಿಮ್ಮ ಭವಿಷ್ಯ ನಿಧಿ, ಎಲ್ಐಸಿ, ಬ್ಯಾಂಕುಗಳ ಹಣವನ್ನು ತೆಗೆದು ಶ್ರೀಮಂತ ಉದ್ಯಮಿಗಳಿಗೆ ನೀಡುತ್ತಿದ್ದಾರೆ. ನಮ್ಮ ಆಸ್ತಿ, ಹಣವನ್ನು ಅವರಿಗೆ ನೀಡುತ್ತಿದ್ದಾರೆ. ಹೀಗಾಗಿ ನೀವು ಒಗ್ಗಟ್ಟಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಬೆಂಬಲಿಸಬೇಕು ಎಂದು ಖರ್ಗೆ ಕೇಳಿದರು.

# ಶಾಸಕ ರಮೇಶ ಜಾರಕಿಹೊಳಿಗೆ ಸವಾಲೆಸೆದ ಸವದಿ

ಗೋಕಾಕ: "ಗೋಕಾಕ ಜನತೆಯ ಹಿತ ಕಾಪಾಡುವ ನಾಯಕನನ್ನು ಮತದಾರರು ಆಯ್ಕೆ ಮಾಡಿ. ಸವದಿಯನ್ನ ಸೋಲಿಸು ಅಥಣಿಯಲ್ಲಿ ವಾಸ್ತವ್ಯ ಹೂಡಿದ್ದಾರಂತೆ, ನಮ್ಮ ಮನೆಯಲ್ಲಿಯೇ ಅರ್ಧ ಮನೆ ಬಿಟ್ಟುಕೊಡ್ತೀನಿ ತಾಕತ್ತಿದ್ದರೆ ಸೋಲಿಸಲಿ ನೋಡೋಣ" ಎಂದು ರಮೇಶ ಜಾರಕಿಹೊಳಿಗೆ ಅಥಣಿ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಸವದಿ ಸವಾಲೆಸೆದರು.

ನಗರದಲ್ಲಿ ಆಯೋಜಿಸಿದ್ದ ಗೋಕಾಕ ವಿಧಾನಸಭಾ ಮತಕ್ಷೇತ್ರದ ಪ್ರಜಾಧ್ವನಿ ಸಮಾವೇಶದಲ್ಲಿ ಮಾತನಾಡಿದ ಅವರು, ಗೋಕಾಕ್‌ಗೆ ಬರಬೇಕಾದ್ರೆ ಪಾಸ್‌ಪೋರ್ಟ್ ತಗೊಂಡು ಬರಬೇಕಾ. ನನಗೂ ಕೆಲವರು ಕೇಳಿದ್ರು ಎಂದ ಸವದಿ ಅವರು, ಗೋಕಾಕ ಕ್ಷೇತ್ರದಲ್ಲಿ ಹೇಳುವವರು ಕೇಳುವವರು ಇಲ್ಲದಂತಾಗಿದೆ. ಹೀಗಾಗಿ ಅಥಣಿಯಲ್ಲಿ, ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಓಡಾಡುತ್ತಿದ್ದಾರೆ ಮತದಾರರು ಅರ್ಥ ಮಾಡಿಕೊಳ್ಳಬೇಕು ಎಂದು ಕುಟುಕಿದರು.

ಗೋಕಾಕದಲ್ಲಿ ಬಹಳಷ್ಟು ಬದಲಾವಣೆ ಕಾಣಬೇಕಿದೆ. ಹೀಗಾಗಿ ಮತದಾರರು ನಿರ್ಧಾರ ಮಾಡಿ ಕಡಾಡಿಯವರಿಗೆ ಮತ ನೀಡಿ ಬಹುಮತ ಅಂತರದಿಂದ ಗೆಲ್ಲಿಸಿ, ಕಾಂಗ್ರೆಸ್‌ನ್ನು ಅಧಿಕಾರಕ್ಕೆ



ತರಬೇಕು ಎಂದು ಮನವಿ ಮಾಡಿಕೊಂಡರು.

ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಯಾರು ನೆಮ್ಮದಿ ಜೀವನ ನಡೆಸುತ್ತಿಲ್ಲ. ಹೀಗಾಗಿ ನಿಮ್ಮ ನೆಮ್ಮದಿ ಜೀವನ ನಡೆಸಲು ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕೆಂದು ಕರೆ ನೀಡಿದರು.

ಡಾ. ಮಹಾಂತೇಶ್ ಕಡಾಡಿ ಅವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಮತ ನೀಡಿ ಗೆಲ್ಲಿಸಿ, ಅವರು ಗೆದ್ದರೆ ನಿಮ್ಮ ಗೋಕಾಕ ಮತಕ್ಷೇತ್ರವನ್ನು ಮಾದರಿ ಕ್ಷೇತ್ರವಾಗಿ ನಿರ್ಮಾಣ ಮಾಡುತ್ತಾರೆ ಎಂದು ಭರವಸೆ ನೀಡಿದರು.

ಕಾಂಗ್ರೆಸ್ ಮುಖಂಡ ಅಶೋಕ ಪೂಜಾರಿ ಮಾತನಾಡಿ, ಎಲ್ಲಾ ಸಮಾಜದ ಪ್ರಗತಿಗೆ ಹಗಲಿರುಳು ಶ್ರಮಿಸಿದ್ದ ಸರ್ಕಾರ ಎಂದರೆ ಅದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎಂದು ತಿಳಿಸಿದರು.


ನನ್ನ ಹೋರಾಟದ ಹಾದಿಗೆ ಸತೀಶ್ ಜಾರಕಿಹೊಳಿ ಅವರು ಬೆಂಬಲ ನೀಡಿದ್ದಾರೆ. ಮುಂದೆಯೂ ಗೋಕಾಕ ಕ್ಷೇತ್ರದಲ್ಲಿ ಬದಲಾವಣೆ ಆಗಬೇಕಾದರೆ ಸತೀಶ್ ಜಾರಕಿಹೊಲಿಯವರು, ಲಕ್ಷ್ಮೀ ಹೆಬ್ಬಾಳಕರ್ ಅವರು ನಮ್ಮ ಬೆಂಬಲಕ್ಕೆ ನಿಲ್ಲಬೇಕೆಂದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಮಹಾಂತೇಶ ಕಡಾಡಿ, ಕಾಂಗ್ರೆಸ್ ಮುಖಂಡರಾದ ಅಶೋಕ ಪೂಜಾರಿ, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಗ್ರಾಮೀಣ ಅಧ್ಯಕ್ಷ ವಿನಯ ನಾವಲಗಟ್ಟಿ, ದಸ್ತಗೀರ್ ಪೈಲ್ವಾನ್, ಬಸನಗೌಡ ಹೊಳೆಯಾಚಿ, ಎಂ.ಕೆ.ಪೂಜಾರಿ, ಇಮ್ರಾನ್ ತಪಕೀರ್, ಭಗವಂತ ಹಳ್ಳಿ, ಮುನ್ನಾ ಖತೀಬ್, ಪ್ರಕಾಶ ಬಾಗೋಜಿ, ವಿವೇಕ ಜತ್ತಿ, ಸಿದ್ಧಲಿಂಗ ದಳವಾಯಿ, ರಮೇಶ ಪಟಗುಂದಿ, ಚಂದ್ರಶೇಖರ್ ಕೊಣ್ಣೂರ, ಸಂಜೀವ್ ಪೂಜಾರಿ, ಜಾಕೀರ್, ಪ್ರಕಾಶ, ಕಲ್ಪನಾ ಜೋಶಿ, ಪ್ರೇಮಾ ಚಿಕ್ಕೋಡಿ ಸೇ–ರಿದಂತೆ ಅನೇಕ ಮುಖಂಡರು ಇದ್ದರು.

# ಕನ್ನಡೇತರರ ಮನವೊಲಿಸಿ: ಬಿ.ಎಲ್.ಸಂತೋಷ್

ಬೆಂಗಳೂರು: ಈ ಬಾರಿ ಮತದಾನದ ವೇಳೆ ಪ್ರತಿಯೊಂದು ಮತಗಟ್ಟೆಯಲ್ಲೂ ಅತಿ ಹೆಚ್ಚು ಪ್ರಮಾಣದಲ್ಲಿ ಮತದಾನ ಆಗುವಂತೆ ನೋಡಿಕೊಳ್ಳಬೇಕು.

ವಿಶೇಷವಾಗಿ ಕನ್ನಡಿಗರಲ್ಲದವರು ಮತದಾನಕ್ಕೆ ಬರುವಂತೆ ಮನವೊಲಿಸಬೇಕು ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.



ಸಂತೋಷ್ ಅವರು ಪಕ್ಷದ ವಿಸ್ತಾರಕರ ಸಭೆಯಲ್ಲಿ ಸೂಚಿಸಿದ್ದಾರೆ.


ಅಲ್ಲದೇ, ಹೊಸ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ ಕಡೆಗಳಲ್ಲಿ ಶೇ 10ರಷ್ಟು ಹೆಚ್ಚುವರಿ ಮತಗಳು ಪಕ್ಷದ ಅಭ್ಯರ್ಥಿಗಳಿಗೆ ಬರುವಂತೆ ಶ್ರಮ ಹಾಕಬೇಕು.

ಇನ್ನು ಕೇವಲ ಮೂರು ವಾರಗಳು ಉಳಿದಿವೆ. ಕಾಲ ಮೀರುವ ಮುನ್ನ ಈ ಎಲ್ಲ ಅಂಶಗಳ ಬಗ್ಗೆಯೂ ಗಮನಹರಿಸಬೇಕು ಎಂದು ನಾಯಕರು, ವಿಸ್ತಾರಕರು ಮತ್ತು ಸ್ಥಳೀಯ ನಾಯಕರಿಗೆ ಅವರು ಹೇಳಿದ್ದಾರೆಂದು ಮೂಲಗಳು ತಿಳಿಸಿವೆ.

ಮತದಾನದ ಪ್ರಮಾಣ ಶೇ 10 ರಷ್ಟು ಹೆಚ್ಚಿಸಲು ಕಠಿಣ ಪರಿಶ್ರಮ ಹಾಕಲೇಬೇಕು. ಪ್ರತಿ ಮತಗಟ್ಟೆ ವ್ಯಾಪ್ತಿಯಲ್ಲಿರುವ ಕನ್ನಡೇತರರನ್ನು ತಲುಪಲು ಅವರ ಮನೆಗಳಿಗೆ ಹೋಗಬೇಕು. ಲೋಕಸಭಾ ಚುನಾವಣೆಯಲ್ಲಿ ಮತದಾನಕ್ಕೆ ಬರುವ ಅವರು ವಿಧಾನಸಭೆ ಚುನಾವಣೆಯಲ್ಲಿ ಮತ ಹಾಕಲು ಆಸಕ್ತಿ ತೋರಿಸುವುದಿಲ್ಲ. ಆದ್ದ–ರಿಂದ ಅವರನ್ನು ಸಂಪರ್ಕಿಸುವ ಕೆಲಸವನ್ನೂ ಮಾಡುವಂತೆ ಸೂಚಿಸಿದ್ದಾರೆ.

# ನದಿಯಲ್ಲಿ ಮುಳುಗಿ ಮೂವರು ಸಾವು

ಉಡುಪಿ: ನದಿಯಲ್ಲಿ ಚಿಪ್ಪು ಮೀನು ಹಿಡಿಯಲು ಹೋದ ನಾಲ್ವರಲ್ಲಿ ಮೂವರು ನೀರುಪಾಲಾಗಿದ್ದು, ಓರ್ವ ಕಣ್ಮರೆಯಾದ ಘಟನೆ ಉಡುಪಿಯ ಬ್ರಹ್ಮಾವರದಲ್ಲಿ ನಡೆದಿದೆ.



ಉಡುಪಿ ಮತ್ತು ಶೃಂಗೇರಿ ಮೂಲದ ಯುವಕರಾದ ಇಬಾಜ್, ಫಜಾನ್, ಸೂಫಾನ್ ಹಾಗೂ ಫರಾನ್ ರಂಜಾನ್ ಹಬ್ಬಕ್ಕೆ ಬ್ರಹ್ಮಾವರದ ಸಂಬಂಧಿಕರ ಮನೆಗೆ ಬಂದಿದ್ದರು. ಈ ವೇಳೆ ಕುಕ್ಕುಡೆ ಕಿಣಿಯರ ಕುದ್ರು ಸಮೀಪದ ನದಿಗೆ ಸಂಜೆ ದೋಣಿಯಲ್ಲಿ ಮೀನು ಹಿಡಿಯಲು ಏಳು ಯುವಕರ ತಂಡ ತೆರಳಿತ್ತು. ಈ ವೇಳೆ ಅವಘಡ ಸಂಭವಿಸಿದೆ.

ಮೂವರು ಯುವಕರು ಸಾವಿಗೀಡಾಗಿದ್ದು, ಓರ್ವ ಕಣ್ಮರೆಯಾಗಿದ್ದಾನೆ. ಸ್ಥಳೀಯರು, ಪೊಲೀಸರು ಹಾಗೂ ಅಗ್ನಿಶಾಮಕ ದಳದಿಂದ ಶೋಧ ಕಾರ್ಯ ನಡೆಯುತ್ತಿದೆ.

# ದೇಶದ ಭದ್ರತೆ, ಸಮಗ್ರತೆಗಾಗಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿ: ಲಕ್ಷ್ಮೀ ಹೆಬ್ಬಾಳಕರ್

ಗೋಕಾಕ/ ಬೈಲಹೊಂಗಲ: ದೇಶದ ಭದ್ರತೆ, ಸಮಗ್ರತೆಗಾಗಿ ಮತ್ತು ಸರ್ವ ಜನಾಂಗಗಳನ್ನು ಒಂದೇ ದೃಷ್ಟಿಯಿಂದ ನೋಡುವ ಏಕೈಕ ಪಕ್ಷ ಕಾಂಗ್ರೆಸ್ ಪಕ್ಷವಾಗಿದ್ದು, ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಬಹುಮತದಿಂದ ಆಯ್ಕೆ ಮಾಡಬೇಕು ಎಂದು ಕಾಂಗ್ರೆಸ್ ನಾಯಕಿ, ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮತದಾರರಲ್ಲಿ ಮನವಿ ಮಾಡಿದ್ದಾರೆ.

ಗೋಕಾಕ ಹಾಗೂ ಬೈಲಹೊಂಗಲದಲ್ಲಿ



ಸೋಮವಾರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷಕ್ಕೆ ತನ್ನದೇ ಆದ ತತ್ವ ಸಿದ್ದಾಂತಗಳಿದ್ದು, ಸರ್ವ ಜನಾಂಗಗಳನ್ನು ಒಂದೇ ದೃಷ್ಟಿಯಿಂದ ನೋಡುತ್ತ ಬಂದಿದೆ. ಕಾಂಗ್ರೆಸ್ ಪಕ್ಷದ ಇತಿಹಾಸವೇ ಈ ದೇಶದ ಇತಿಹಾಸವಾಗಿದೆ.

ಹಾಗಾಗಿಯೇ ಇಂದು ರಾಜ್ಯಾದ್ಯಂತ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರುತ್ತಿದ್ದಾರೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದ್ದು, ಪಕ್ಷದ ಅಭ್ಯರ್ಥಿಗಳಿಗೆ ಮತ ಕೊಡುವ ಮೂಲಕ ಹೆಚ್ಚಿನ ಶಕ್ತಿ ತುಂಬಬೇಕು ಎಂದು ವಿನಂತಿಸಿದರು.

ಗೋಕಾಕ ಕ್ಷೇತ್ರದ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿರುವ ಮಹಾಂತೇಶ ಕಡಾಡಿಯವರನ್ನು ಹಾಗೂ ಬೈಲಹೊಂಗಲ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿರುವ ಮಹಾಂತೇಶ ಕೌಜಲಗಿಯವರನ್ನು ಅತ್ಯಧಿಕ ಬಹುಮತದಿಂದ ಆಯ್ಕೆ ಮಾಡಿ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿನಂತಿಸಿದರು.

ಕಾರ್ಯಕ್ರಮದಲ್ಲಿ ಪಕ್ಷದ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ, ಆಯಾ ಕ್ಷೇತ್ರಗಳ ಅಭ್ಯರ್ಥಿಗಳು, ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಬಿಜೆಪಿ ಪಕ್ಷದ ವಿಶೇಷ ಮಹಾಪ್ರಚಾರ ಅಭಿಯಾನ 224 ಮತಕ್ಷೇತ್ರದಲ್ಲಿ ನಡೆಯಲಿದೆ: ರಾಜ್ಯ ವಕ್ತಾರ ಎಮ್.ಬಿ.ಝೀರಲಿ

ಬೆಳಗಾವಿ: ರಾಜ್ಯಾದ್ಯಂತ ಚುನಾವಣೆಯ ನಿಮಿತ್ಯಕೇಂದ್ರ ಹಾಗೂ ರಾಜ್ಯ ನಾಯಕರ ನೇತೃತ್ವದಲ್ಲಿ ಬಿಜೆಪಿ ಪಕ್ಷದ ವಿಶೇಷ ಮಹಾಪ್ರಚಾರ ಅಭಿಯಾನ 224 ಮತಕ್ಷೇತ್ರದಲ್ಲಿ ನಡೆಯಲಿದೆ ಎಂದು ರಾಜ್ಯ ವಕ್ತಾರ ಎಮ್.ಬಿ.ಝೀರಲಿ ಹೇಳಿದರು.

ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಭಿಯಾನದಲ್ಲಿ ಕೇಂದ್ರ, ರಾಜ್ಯದ ನಾಯಕರು ಏ25 ಮತ್ತು 26 ರಂದು ವಿಶೇಷ ಮಹಾಪ್ರಚಾರ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ. ಮುಖ್ಯಮಂತ್ರಿ, ಮಾಜಿ ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಪಕ್ಷದ ಪದಾಧಿಕಾರಿಗಳು ಈ ವಿಶೇಷ ಮಹಾಪ್ರಚಾರ ಅಭಿಯಾನದಲ್ಲಿ ಭಾಗವಹಿಸಲಿದ್ದಾರೆ.

ಈ ಚುನಾವಣೆಯಲ್ಲಿ 150ಕ್ಕೂ ಹೆಚ್ಚು ಸೀಟುಗಳು ಭಾರತೀಯ ಜನತಾ ಪಾರ್ಟಿ ಗೆಲ್ಲುವ ದೃಢ ವಿಶ್ವಾಸ ಇದೆ ಎಂದರು. ಹೋಬಳಿ ಹಾಗೂ ತಾಲ್ಲೂಕಾ ಕೇಂದ್ರಗಳಲ್ಲಿ ರೋಡ್ ಶೋ, ಸಾರ್ವಜನಿಕ ಸಭೆಗಳು. ಮನೆ ಮನೆ ಸಂಪರ್ಕ ಮೂಲಕ ಬಿಜೆಪಿ ಅಭ್ಯರ್ಥಿ ಪರ ಮತ ಯಾಚನೆ ಮಾಡಲಿದ್ದಾರೆ.

ಪ್ರಮುಖ ಕಾರ್ಯಕರ್ತರು, ಸಮುದಾಯ ಮುಖಂಡರು, ಫಲಾನುಭವಿಗಳು ಹಾಗೂ ಪ್ರಮುಖರೊಂದಿಗೆ ಸಭೆ ಸ್ಥಳೀಯ ಪ್ರತಿಮೆಗಳಿಗೆ ಮಾಲಾರ್ಪಣೆ. ದೇವಸ್ಥಾನ, ಮಠ, ಮಂದಿರಗಳಿಗೆ



ಭೇಟಿ ಬೀದಿ, ಪ್ರಮುಖ ಸ್ಥಳಗಳು ಮತ್ತು ಆಯಾ ಕಟ್ಟಿನ ಸ್ಥಳಗಳಲ್ಲಿ ಸಾರ್ವಜನಿಕ ಸಭೆಗಳು ನಡೆಯಲಿವೆ.

ವಿಶೇಷ ಮಹಾಪ್ರಚಾರದಲ್ಲಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ ಷಾ, ಕೇಂದ್ರ ರಕ್ಷಣಾ ಸಚಿವ ರಾಜನಾದ ಸಿಂಗ್, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕದ ಉಸ್ತುವಾರಿ ಅರುಣ ಸಿಂಗ್ ಕೇಂದ್ರ ಸಚಿವರಾದ ಧರ್ಮೇಂದ್ರ ಪ್ರಧಾನ್, ಸ್ಮೃತಿ ಇರಾನಿ ನಿರ್ಮಲಾ ಸೀತಾರಾಮನ್, ಮನ್ಸುಖ್ ಮಾಂಡ್ವಿಯಾ, ತಮಿಳುನಾಡು ರಾಜ್ಯಾಧ್ಯಕ್ಷರು ಮತ್ತು ಕರ್ನಾಟಕ ಚುನಾವಣಾ ಸಹ–ಉಸ್ತುವಾರಿ ಕೆ.ಅಣ್ಣಾಮಲೈ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ದೇವೇಂದ್ರ ಫಡ್ನವೀಸ್, ರಾಜ್ಯಕ್ಕೆ ಆಗಮಿಸಲಿದ್ದಾರೆ.

ರಾಜ್ಯ ನಾಯಕರುಗಳಾ ನಳಿನ್ ಕುಮಾರ್ ಕಟೀಲ್, ಬಸವರಾಜ ಬೊಮ್ಮಾಯಿ, ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯರು ಮತ್ತು ರಾಜ್ಯದ ಮಾಜಿ ಮುಖ್ಯಮಂತ್ರಿಗಳು ಸದಾನಂದ ಗೌಡ, ಸಿ.ಟಿ ರವಿ ಹಾಗೂ ಇನ್ನಿತರರು ಇರಲಿದ್ದಾರೆ.

ಕಾರ್ಯಕರ್ತರಿಂದಲೇ ಇರುವ ಕಾರ್ಯಕರ್ತರೇ ಬೆಳೆಸಿದ ರಾಜ–ಕೀಯ ಪಕ್ಷ ನಮ್ಮದು 224 ಕ್ಷೇತ್ರದಲ್ಲಿ 9 ಜನ ವೈದ್ಯರು, ಐಪಿಎಸ್, ಐಎಎಸ್, 70ಕ್ಕೂ ಹೆಚ್ಚು ಜನ ಸಾಮಾನ್ಯರು 75 ಜನ ಹೊಸ ಮುಖಗಳಿಗೆ ಅವಕಾಶ ನೀಡಿದ್ದೇವೆ. ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ. .ಪ್ರಧಾನಿ ನರೇಂದ್ರ ಮೋದಿಯವರ ಕನಸು ಮತ್ತು ಅಪೇಕ್ಷೆಯಂತೆ ಅಭಿವೃದ್ಧಿಪರ ರಾಜ–ಕಾರಣದಲ್ಲಿ ಹೊಸ ಅಲೆಯ ಹೊಸ ಮುಖಗಳಿಗೆ ನಮ್ಮ ಪಕ್ಷ ಬಹುಪರಾಕ್ ಹೇಳಿದೆ ಎಂದರು.

ಜಿಲ್ಲೆಯ ಬೆಳಗಾವಿ ದಕ್ಷಿಣ ಕ್ಷೇತ್ರಕ್ಕೆ ಉತ್ತರಪ್ರದೇಶದ ಉಪಮುಖ್ಯಮಂತ್ರಿ ಕೇಶವಪ್ರಸಾದ ಮೌರ್ಯ, ಉತ್ತರಕ್ಕೆ ಬಿಹಾರ ಶಾಸಕ ಸಂಜೀವ ಚೌರಾಸಿಯಾ, ಅರಭಾವಿಗೆ ಮಹಾರಾಷ್ಟ್ರ ರಾಜ್ಯದ ಉನ್ನತ ಶಿಕ್ಷಣ ಹಾಗೂ ವೈದ್ಯಕೀಯ ಸಚಿವ ಗಿರಿಷ ಮಹಾಜನ, ಗ್ರಾಮೀಣ ಮತಕ್ಷೇತ್ರಕ್ಕೆ ಬಿಹಾರ ಸಂಸದ ಹ–ರೀಷ ದೀವೆದಿ, ಕಿತ್ತೂರು ಕ್ಷೇತ್ರಕ್ಕೆ ಪುಣೆಯ ಶಾಸಕ ಸಿದ್ಧಾರ್ಥ ಶಿರೋಳ, ಸವದತ್ತಿ ಮತಕ್ಷೇತ್ರಕ್ಕೆ ಕೇಂದ್ರ ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್, ನಿಪ್ಪಾಣಿ ಕ್ಷೇತ್ರಕ್ಕೆ ಕೇಂದ್ರ ಶಿಕ್ಷಣ ಸಚಿವೆ ಅನ್ನಪೂರ್ಣ ದೇವಿ, ರಾಷ್ಟ್ರೀಯ ರೈತ ಮೋರ್ಚಾ ಅಧ್ಯಕ್ಷ ರಾಜ–ಕುಮಾರ ಚಾಹರ ಚಿಕ್ಕೋಡಿ ಕ್ಷೇತ್ರಕ್ಕೆ, ಉತ್ತರ ಪ್ರದೇಶ ಸಂಸದೆ ಸಂಗೀತಾ ಯಾದವ ಅಥಣಿ ಕ್ಷೇತ್ರಕ್ಕೆ, ಮನೋಜ ಪಂಗರಕರ ಕಾಗವಾಡಕ್ಕೆ, ಸೊಲ್ಲಾಪುರ ಶಾಸಕ ವಿಜಯಕುಮಾರ್ ದೇಶಮುಖ ಕುಡಚಿ, ಜಯಕುಮಾರ ರಾವಳ ರಾಯಭಾಗ, ಹುಕ್ಕೇರಿಗೆ ಶಿವಾಜಿ–ರಾವ ಬಜಬಾಳು, ಯಮಕನಮರಡಿಗೆ ಕುರುಕ್ಷೇತ್ರದ ಸಂಸದ ನಯಾಬ್ ಸಿಂಗ್ ಶೈನಿ ಆಗಮಿಸಿಲಿದ್ದರೆ ಎಂದರು.

# ಕಾಂಗ್ರೆಸ್ ಗೆ ರಾಹುಲ್ ಗಾಂಧಿ ಹೀರೋ, ಬಿಜೆಪಿಗೆ ಕಾರ್ಯಕರ್ತರೇ ಹೀರೋಗಳು: ಅಣ್ಣಾಮಲೈ

ಚಿಕ್ಕಬಳ್ಳಾಪುರ: ಕಾಂಗ್ರೆಸ್‌ಗೆ ಹೀರೋ ರಾಹುಲ್ ಗಾಂಧಿ ಬಿಜೆಪಿಗೆ ಕಾರ್ಯಕರ್ತರೇ ಹೀರೋ. ನಮ್ಮಲ್ಲಿ ಕಾರ್ಯಕರ್ತರು ಹೀರೋ ಆಗಿರೋವರೆಗೂ ಏನೂ ಸಮಸ್ಯೆ ಇಲ್ಲ ಎಂದು ತಮಿಳುನಾಡು ಬಿಜೆಪಿ ಅಧ್ಯಕ್ಷ ಅಣ್ಣಾಮಲೈ ಹೇಳಿದ್ದಾರೆ.

ಶಿಡ್ಲಘಟ್ಟದಲ್ಲಿ ಹಮ್ಮಿಕೊಂಡಿದ್ದ ಡಿಜಿಟಲ್ ಮೀಡಿಯಾ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು ಕಾಂಗ್ರೆಸ್ ವಿರುದ್ಧ ಕಿಡಿಕಾ–ರಿದರು. ಲಿಂಗಾಯತ ಸಿಎಂ ರಾಜ್ಯವನ್ನು ಹಾಳುಮಾಡಿಬಿಟ್ಟರು ಎಂಬ ಸಿದ್ದರಾಮಯ್ಯನವರ ಹೇಳಿಕೆ ಹಿನ್ನೆಲೆ ಮಾತನಾಡಿದ ಅಣ್ಣಾಮಲೈ, ಎಲ್ಲಾ ಜಾತಿಯವರು ನಮ್ಮ ಪಕ್ಷದಲ್ಲಿದ್ದಾರೆ. ಕರ್ನಾಟಕದಲ್ಲಿ ಕನ್ನಡಿ ಗರಿದ್ದಾರೆ,



ತಮಿಳುನಾಡಿನಲ್ಲಿ ತಮಿಳುಗ–ರಿದ್ದಾರೆ. ಕರ್ನಾಟಕದಲ್ಲಿ ಒಂದು ಸಮುದಾಯಕ್ಕೆ ಕಪ್ಪು ಚುಕ್ಕೆ ತರುವಂತಹ ಕೆಲಸ ಕಾಂಗ್ರೆಸ್‌ನವರು ಮಾಡುತ್ತಿದ್ದಾರೆ. ಎಲ್ಲ ಸಮುದಾಯಗಳು ಸೇರಿ ಇದನ್ನು ವಿರೋಧ ಮಾಡಬೇಕು ಎಂದು ಆಗ್ರಹಿಸಿದರು.

ಬಿಜೆಪಿಯಲ್ಲಿ ಸೋತ ಮೇಲು ಉಪ ಮುಖ್ಯಮಂತ್ರಿಯಾಗಿದ್ದಾರೆ. ಎಂಎಲ್‌ಸಿ ಕೊಟ್ಟಿದ್ದೇವೆ. ನಾನು ಏನೂ ಇಲ್ಲದೆ ಕೆಲಸ ಮಾಡ್ತಾ ಇದ್ದೇನೆ.

ಆದರೆ, ಡಿಕೆಶಿ ಸಿದ್ದರಾಮಯ್ಯ ಕರ್ನಾಟಕ ರಾಜ್ಯವನ್ನು ಎಟಿಎಂ ಎಂದು ತಿಳಿದುಕೊಂಡಿದ್ದಾರೆ ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಜಗದೀಶ್ ಶೆಟ್ಟರ್‌ಗೆ ಉತ್ತರ ಕರ್ನಾಟಕದಲ್ಲಿ ಪ್ರಚಾರ ಮಾಡುವಂತೆ ಕಾಂಗ್ರೆಸ್ ನಾಯಕರು ಕರೆ ನೀಡಿದ್ದಾರೆ. ಇದರಿಂದ ಸ್ಥಳೀಯ ನಾಯಕರು ಇದನ್ನು ಪ್ರಶ್ನಿಸಬೇಕು. ಯಾರಾದರೂ ಕಾಂಗ್ರೆಸ್‌ಗೆ ಹೋದಾಗ ಕೈ ಕುಲುಕುವುದು, ಶಾಲು ಹಾಕುವುದು ಮಾಮೂಲಿ, ಒಂದು ಗಾಡಿಯಲ್ಲಿ ಪೆಟ್ರೋಲ್ ಮುಗಿದ್ರೆ ಇನ್ನೊಂದು ಗಾಡಿ ಹಿಡಿಯುತ್ತಾರೆ.

ರಾಹುಲ್ ಗಾಂಧಿ ಅವರೇ ಉತ್ತರ ಕರ್ನಾಟಕದಲ್ಲಿ ಇಷ್ಟು ದಿನ ಕಾಂಗ್ರೆಸ್ ನಾಯಕರು ಇರಲಿಲ್ಲವೇ ಎಂದು ಅಣ್ಣಾಮಲೈ ಪ್ರಶ್ನಿಸಿದ್ದಾರೆ.

# ಚುನಾವಣೆ ಪ್ರಚಾರಕ್ಕೆ ಚಾಲನೆ ನೀಡಿದ: ರಾಜೇಂದ್ರ ಗುಡಗುಂಟಿ



ಸಾವಳಗಿ: ಜಮಖಂಡಿ ತಾಲೂಕಿನ ಸಾವಳಗಿ ಪಟ್ಟಣದಲ್ಲಿ ಭಾರತೀಯ ಜನತಾ ಪಕ್ಷದ ಅಧಿಕೃತ ಅಭ್ಯರ್ಥಿ ಜಗದೀಶ್ ಗುಡಗುಂಟಿ ಅವರ ಪ್ರಚಾರವನ್ನು ಶ್ರೀ ಶಿವಲಿಂಗೇಶ್ವರ ದೇವಸ್ಥಾನದಲ್ಲಿ ಶುಕ್ರವಾರ ಪೂಜೆ ಸಲ್ಲಿಸಿ, ನಂತರ ಮಾನೆ ತೋಟದಲ್ಲಿ ವಿಧಾನ ಸಭೆ ಚುನಾವಣೆ ಪ್ರಚಾರಕ್ಕೆ ಚಾಲನೆ ನೀಡಿದರು.

ಚಾಲನೆ ನೀಡಿ ಮಾತನಾಡಿದ ಉದ್ಯಮಿ ರಾಜೇಂದ್ರ ಗುಡಗುಂಟಿ ಅವರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅನೇಕ ಜನಪ್ರಿಯ ಯೋಜನೆಗಳನ್ನು ಜಾರಿಗೆ ತಂದು ಜನರಿಗೆ ಅನುಕೂಲ ಮಾಡಿದೆ.

ಈ ಬಾರಿ ಸಹೋದರ ಜಗದೀಶ್ ಗುಡಗುಂಟಿ ಅವ–ರಿಗೆ ಚುನಾವಣೆಯಲ್ಲಿ ಅತಿ ಹೆಚ್ಚು ಮತದಾನವಾಗುವಂತೆ ನೋಡಿಕೊಳ್ಳಬೇಕು.

ಪ್ರತಿಯೊಂದು ಬೂತ್‌ನಲ್ಲಿಯೂ ಪಕ್ಷವನ್ನು ಸಂಘಟಿಸುವ ಹಾಗೂ ಸರ್ಕಾರದ ಸಾಧನೆಗಳನ್ನು ಜನರ ಬಳಿಗೆ ಒಯ್ಯುವ ಹಾಗೂ ಅದರ ಬಗ್ಗೆ ಸಂಪೂರ್ಣವಾಗಿ ಮಾಹಿತಿ ನೀಡುವ ಕೆಲಸವಾಗಬೇಕು.

ಜಮಖಂಡಿ ಮತಕ್ಷೇತ್ರಕ್ಕೆ ಹಗಲಿರುಳು ಶ್ರಮಪಟ್ಟು ಕೇಲಸ ಮಾಡುತ್ತವೆ, ಈ ಬಾರಿ ಸಹೋದರ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಜಗದೀಶ್ ಗುಡಗುಂಟಿ ಅವರನ್ನು ಚುನಾವಣೆಯಲ್ಲಿ ಅತಿ ಹೆಚ್ಚು ಮತಗಳಿಂದ ಹಾರಿಸಿ ತರಬೇಕು ಎಂದು ಕಾರ್ಯಕರ್ತರಿಗೆ ಮನವಿ ಮಾಡಿದರು. ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರೇವಣ್ಣಯ್ಯ, ಸತಗೌಡ ನ್ಯಾಮಗೌಡ, ತುಕಾರಾಮ ಬಾಪಕರ, ಸುಜೀತಗೌಡ ಪಾಟೀಲ, ರಾಜುಗೌಡ ಪಾಟೀಲ, ಬಸವರಾಜ್ ಪರಮಗೊಂಡ, ರಾಜಕುಮಾರ ಕರಾಬೆ, ಲಕ್ಷ್ಮಣ ಪುಂಡೆ, ಜೀವಪ್ಪ ಮಾಳಿ, ಹಾಗೂ ಬಿಜೆಪಿ ಬೆಂಬಲಿತ ಗ್ರಾಮ ಪಂಚಾಯತ ಸದಸ್ಯರು, ಮುಖಂಡರು, ಯುವ ಕಾರ್ಯಕರ್ತರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಾಜಹಂಸಗಡ ವೀಕ್ಷಿಸಲು ಜನಸಾಗರ: ಕತ್ತಲಾದರೂ ನಿಲ್ಲದ ಪ್ರವಾಹ

ಬೆಳಗಾವಿ: ಬೆಳಗಾವಿಯಲ್ಲಿ ನೋಡುವುದಕ್ಕೇನಿದೆ ಎಂದು ಪ್ರಶ್ನಿಸುತ್ತಿದ್ದವರಿಗೆ ಈಗ ಉತ್ತರ ಸಿಕ್ಕಿದೆ. ರಾಜ್ಯದ ಎರಡನೇ ರಾಜಧಾನಿ ಎನಿಸಿದ್ದರೂ ನಗರದ ಹತ್ತಿರದಲ್ಲಿ ನೋಡುವುದಕ್ಕೆ, ಪಿಕ್‌ನಿಕ್ ಮಾಡುವುದಕ್ಕೆ ಅಂತಹ ಸ್ಥಳ ಇರಲಿಲ್ಲ.

ಆದರೆ ಮಾರ್ಚ್ 5ರಂದು ಇದಕ್ಕೆಲ್ಲ ಉತ್ತರ ಸಿಕ್ಕಿದೆ. ನಗರದ ಹೊರವಲಯದಲ್ಲೇ ಅತ್ಯಂತ ಸುಂದರ ಪ್ರವಾಸಿ ತಾಣವಾಗಿ ಎದ್ದು ನಿಂತಿದೆ ರಾಜಹಂಸಗಡ.

ಭಾನುವಾರ ಇಲ್ಲಿ ಪ್ರವಾಹೋಪಾದಿಯಲ್ಲಿ ಜನರು ಹರಿದು ಬಂದಿದ್ದರು. ಕತ್ತಲಾದರೂ ಜನ ಬರುತ್ತಲೇ ಇದ್ದರು. ಸಾವಿರಾರು ವಾಹನಗಳು ಜಮಾಯಿಸಿದ್ದವು. ನಿಯಂತ್ರಿಸಲು ಪೊಲೀಸರು ಹರಸಾಹಸಪಡಬೇಕಾಯಿತು.

ಯಳ್ಳೂರ ಗಡ ಅಥ–ವಾ ರಾಜಹಂಸಗಡ ಎಂದು ಕರೆಯಲ್ಪಡುವ ಛತ್ರಪತಿ ಶಿವಾಜಿ ಮಹಾರಾಜರ ಕೋಟೆ ಸ್ಥಳ ಸುಂದರವಾಗಿದ್ದರೂ ಅಲ್ಲಿ ಮೂಲ ಸೌಕರ್ಯಗಳಿರಲಿಲ್ಲ. ಅದೊಂದು ವ್ಯವಸ್ಥಿತ ತಾಣವಾಗಿರಲಿಲ್ಲ. ಆದರೆ ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರ ಪ್ರಯತ್ನದಿಂದಾಗಿ ಇಲ್ಲೊಂದು ಅತ್ಯಪರೂಪವಾದ ಛತ್ರಪತಿ ಶಿವಾಜಿ ಮಹಾರಾಜರು ಸಿಂಹಾಸನಾರೂಢ ರಾಗಿರುವ ಮೂರ್ತಿ ಸ್ಥಾಪನೆಯಾಗಿದೆ. ಇಲ್ಲಿರುವ ಸಿದ್ದೇಶ್ವರ ಗುಡಿ ಜೀರ್ಣೋದ್ಧಾರ ವಾಗಿದೆ. ಇಡೀ ಪರಿಸರವನ್ನು ಅಭಿವೃದ್ಧಿಪಡಿಸಲಾಗಿದೆ. ರಸ್ತೆಗಳ ನಿರ್ಮಾಣವಾಗಿದೆ.

ರಾಜಹಂಸಗಡ ದೊಡ್ಡ



ಧಾರ್ಮಿಕ ಪ್ರವಾಸಿ ತಾಣವಾಗಿ ಅಭಿವೃದ್ಧಿಯಾಗಿದೆ. ನವೀಕೃತ ಸಿದ್ದೇಶ್ವರ ಮಂದಿರ ಮತ್ತು ಛತ್ರಪತಿ ಶಿವಾಜಿ ಮೂರ್ತಿ ಉದ್ಘಾಟನೆಯಾ ದಂದಿನಿಂದ ರಾಜಹಂಸಗಡ ದೊಡ್ಡ ಮಟ್ಟದಲ್ಲಿ ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಶನಿವಾರ, ಭಾನುವಾರ ಮತ್ತು ರಜಾ ದಿನಗಳಲ್ಲಂತೂ ಜನ ಸಾಗರವೇ ಸೇರುತ್ತದೆ.

ಉದ್ಘಾಟನೆಯ ದಿನವೇ ಒಂದೂವರೆ ಲಕ್ಷಕ್ಕಿಂತ ಹೆಚ್ಚು ಜನರು ಆಗಮಿಸಿ, ಹರ್ಷೋದ್ಘಾರಗೈದಿದ್ದರು. ಅಲ್ಲಿಂದ ಪ್ರತಿನಿತ್ಯ 2 –3 ಸಾವಿರ ಪ್ರವಾಸಿಗರು ಆಗಮಿಸಿ, ಖುಷಿಪಡುತ್ತಿದ್ದಾರೆ. ಹಿಂದೆ ಯಾರಿಂದಲೂ ಆಗದ ಕೆಲಸವನ್ನು ಮಾಡಿದ್ದಕ್ಕಾಗಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಪ್ರಶಂಸೆಯ ಸು–ರಿಮಳೆಗೈಯುತ್ತಿದ್ದಾರೆ.

ಏ.23, ಭಾನುವಾರ ಬೆಳಗ್ಗೆಯಿಂದಲೇ ಸಾಲುಗಟ್ಟಿ ವಾಹನಗಳು ರಾಜಹಂಸಗಡದ ಕಡೆಗೆ ಆಗಮಿಸುತ್ತಿದ್ದವು. ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಜನರು ಆಗಮಿಸಿ ಸಂಭ್ರಮಿಸಿದರು. ಸಂಜೆಯಂತೂ ಸಾವಿರಾರು ಬೈಕ್, ಕಾರುಗಳು ಜಮಾಯಿಸಿದ್ದವು. ಕತ್ತಲಾಗುತ್ತಿದ್ದಂತೆ ಪೊಲೀಸರು ಜನರನ್ನು ವಾಪಸ್ ಕಳಿಸಲು ಪ್ರಯತ್ನಿಸುತ್ತಿದ್ದರು. ದಿನದಿಂದ ದಿನಕ್ಕೆ ಪ್ರವಾಸಿಗರ ಸಂಖ್ಯೆ ಏರುತ್ತಲೇ ಇದೆ.

ಇನ್ನೂ ಕೆಲವೊಂದು ಸಣ್ಣ ಪುಟ್ಟ ಕೆಲಸಗಳಾಗಬೇಕಿದ್ದು, ಸಿದ್ದೇಶ್ವರ ಮಂದಿರವನ್ನು ಇನ್ನೂ ಸ್ವಲ್ಪ ಅಭಿವೃದ್ಧಿಪಡಿಸಬೇಕಿದೆ. ಅಲ್ಲೊಂದು ಸಣ್ಣ ವಾಟರ್ ಫಾಲ್ಸ್ ಮಾಡುವ ಯೋಜನೆಯನ್ನು ಲಕ್ಷ್ಮೀ ಹೆಬ್ಬಾಳಕರ್ ಹೊಂದಿದ್ದಾರೆ. ಸಣ್ಣಪುಟ್ಟ ಕೆಲಸವನ್ನು ಆದಷ್ಟು ಬೇಗ ಮಾಡಿಸುವ ಯೋಜನೆಯನ್ನು ಅವರು ರೂಪಿಸಿದ್ದಾರೆ.

ಮುಂದಿನ ದಿನಗಳಲ್ಲಿ ಬೆಳಗಾವಿಗೆ ಇನ್ನಷ್ಟು ಮೆರಗು ತರಲಿದೆ ಈ ತಾಣ. ತನ್ಮೂಲಕ ಲಕ್ಷ್ಮೀ ಹೆಬ್ಬಾಳಕರ್ ಅವರ ಹೆಸರು ಶಾಶ್ವತವಾಗಿ ನೆಲೆಯೂರುವಂತಾಗಿದೆ. ಸರಕಾರ ದುಡ್ಡು ಕೊಟ್ಟಿರಬಹುದು. ಆದ–'ರೆ ಇಲ್ಲಿಯವರೆಗೆ ಯಾರಿಗೂ ಇಚ್ಛಾಶಕ್ತಿ ಇರಲಿಲ್ಲ. ಅದನ್ನು ಲಕ್ಷ್ಮೀ ಹೆಬ್ಬಾಳಕರ್ ಮಾಡಿ ತೋರಿಸಿದ್ದಾರೆ.

ಒಳ್ಳೆಯ ಕೆಲಸ ಯಾ–ರಿಂದಾದರೂ ಪ್ರಶಂಸಿಸಲೇಬೇಕು.

ಬೆಳಗಾವಿ ನಗರದಿಂದ 17 ಕಿಮೀ ದೂರದಲ್ಲಿರುವ ಈ ಪ್ರವಾಸಿ ತಾಣ ತಲುಪಲು 30 ನಿಮಿಷ ಬೇಕಾಗಲಿದೆ. ಸಂಜೆ 5 ಗಂಟೆಗೆ ಅಲ್ಲಿಗೆ ತಲುಪುವಂತೆ ಹೋದರೆ 6.30ರ ವರೆಗೂ ಅಲ್ಲಿನ ಸೌಂದರ್ಯವನ್ನು ಸವಿಯಬಹುದು.

# ಇಂದು, ನಾಳೆ ಎಲ್ಲ 224 ಕ್ಷೇತ್ರಗಳಲ್ಲಿ ಬಿಜೆಪಿ ಮಹಾ ಪ್ರಚಾರ ಅಭಿಯಾನ

ಬೆಂಗಳೂರು: ರಾಜ್ಯದ ವಿಧಾನಸಭಾ ಚುನಾವಣಾ ಪ್ರಚಾರದ ಭಾಗವಾಗಿ ನಾಳೆ ಮತ್ತು ನಾಡಿದ್ದು (ಏ.25, 26) ಎಲ್ಲ 224 ಕ್ಷೇತ್ರಗಳಲ್ಲಿ ಬಿಜೆಪಿ ವಿಶೇಷ 'ಮಹಾ ಪ್ರಚಾರ ಅಭಿಯಾನ'ವನ್ನು ಹಮ್ಮಿಕೊಂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಸಂಸದ ನಳಿನ್ ಕುಮಾರ್ ಕಟೀಲ್ ಅವರು ತಿಳಿಸಿದರು.

ನಗರದ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಎಲ್ಲ 224 ಕ್ಷೇತ್ರಗಳಿಗೆ ಬಿಜೆಪಿ ಅಭ್ಯರ್ಥಿಗಳು ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಕೇಂದ್ರ ನಾಯಕರಾದ ಅಮಿತ್ ಶಾ, ಜೆ.ಪಿ. ನಡ್ಡಾ ಚುನಾವಣಾ ಪ್ರವಾಸ ಆರಂಭಿಸಿದ್ದಾರೆ. ಒಂದು ತಿಂಗಳ ಹಿಂದೆ ಆರಂಭಿಸಿದ ಬೂತ್ ವಿಜಯ್ ಅಭಿಯಾನದಲ್ಲಿ ಡಬಲ್ ಇಂಜಿನ್ ಸರ್ಕಾರದ ಸಾಧನೆಗಳು ಮತ್ತು ಯೋಜನೆಗಳನ್ನು ಕಾರ್ಯಕರ್ತರು ಮನೆ-ಮನೆಗೆ ತಲುಪಿಸಿದ್ದಾರೆ. ನಾಮಪತ್ರ ಸಲ್ಲಿಕೆ ನಂತರ ಅಭ್ಯರ್ಥಿಗಳ ಪರಿಚಯದೊಂದಿಗೆ ಕಾರ್ಯಕರ್ತರು ಪ್ರಚಾರ ನಡೆಸಲಿದ್ದಾರೆ ಎಂದು ಹೇಳಿದರು.

ಮತಗಟ್ಟೆ ಆಧಾರದಡಿ ಏ.25, 26ರಂದು 'ವಿಶೇಷ ಮಹಾ ಪ್ರಚಾರ ಅಭಿಯಾನ'ವನ್ನು ಬಿಜೆಪಿ ಹಮ್ಮಿಕೊಂಡಿದೆ. ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ಮಟ್ಟದ ನಾಯಕರು ಈ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ. ಎಲ್ಲ 224 ಕ್ಷೇತ್ರಗಳಲ್ಲಿ ಸಾರ್ವಜನಿಕ ಸಭೆ, ರೋಡ್ ಶೋ, ಸುದ್ದಿಗೋಷ್ಠಿ, ಮನೆ-ಮನೆಗೆ ಭೇಟಿ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರ ನೀಡಿದರು.

ಕೇಂದ್ರ- ರಾಜ್ಯದ ನಾಯಕರಾದ ಜೆ.ಪಿ.ನಡ್ಡಾ, ಅಮಿತ್ ಶಾ, ರಾಜನಾಥ್ ಸಿಂಗ್, ಅರುಣ್ಸಿಂಗ್, ಸ್ಮೃತಿ ಇರಾನಿ, ಧರ್ಮೇಂದ್ರ ಪ್ರದಾನ್ ನಿರ್ಮಲಾ ಸೀತಾರಾಮನ್. ಮನ್ಸುಖ್ ಮಾಂಡವೀಯ, ಯೋಗಿ ಆದಿತ್ಯನಾಥ್, ದೇವೇಂದ್ರ ಫಡಣವಿಸ್, ಸಿ.ಟಿ.ರವಿ, ಅಣ್ಣಾಮಲೈ ಸೇರಿದಂತೆ 98 ಮಂದಿ ಬಿಜೆಪಿ ಕೇಂದ್ರ ನಾಯಕರು ಮತ್ತು ಕೇಂದ್ರ ಸಚಿವರು, ಪಕ್ಷದ ರಾಜ್ಯದ ನಾಯಕರು, ಸಚಿವರು, ಸಂಸದರು ಸೇರಿದಂತೆ 150 ರಾಜ್ಯ ನಾಯಕರು ಈ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ನಳಿನ್ಕುಮಾರ್ ಕಟೀಲ್ ಅವರು



ತಿಳಿಸಿದರು.

150ಕ್ಕೂ ಹೆಚ್ಚು ಸ್ಥಾನ ಗೆಲ್ಲುವ ಗುರಿಯೊಂದಿಗೆ ನಾಯಕರು ಮತ್ತು ಕಾರ್ಯಕರ್ತರು ಬೆಳಿಗ್ಗೆಯಿಂದ ಸಂಜೆ ವರೆಗೆ ಮನೆ-ಮನೆಗೆ ಭೇಟಿ ಬಿಜೆಪಿ ಸರ್ಕಾರಗಳ ಕಾರ್ಯಯೋಜನೆಗಳು ಮತ್ತು ಸಾಧನೆಗಳನ್ನು ತಿಳಿಸಲಿದ್ದಾರೆ. ಬೆಳಿಗ್ಗೆ ಮಂದಿರ ದೇವಸ್ಥಾನಗಳಿಗೆ ಭೇಟಿ ನೀಡಿ ಬಳಿಕ ರಾಷ್ಟ್ರ ನಾಯಕರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿ, ಆ ನಂತರ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಫಲಾನುಭವಿಗಳು ಮತ್ತು ಸಮುದಾಯಗಳ ಮುಖಂಡರೊಂದಿಗೆ ಸಂವಾದ ನಡೆಸಲಿದ್ದಾರೆ. ಕಾರ್ಯಕರ್ತರ ಆಧಾರದಡಿ ಬಿಜೆಪಿ ಚುನಾವಣೆ ಎದುರಿಸಲಿದೆ ಎಂದು ಹೇಳಿದರು.

ಕೇಂದ್ರ ಸಚಿವೆ ಹಾಗೂ ಬಿಜೆಪಿ ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕರಾದ ಕು.ಶೋಭಾ ಕರಂದ್ಲಾಜೆ ಮಾತನಾಡಿ, ಅಭಿಯಾನದಡಿ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಹಿಂದುಳಿದ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ಭೇಟಿ ನೀಡಿ ಸರ್ಕಾರ ಒದಗಿಸಿರುವ ಮೀಸಲಾತಿಯ ಬಗ್ಗೆ ತಿಳಿಸಲಿದ್ದಾರೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ನಾಲ್ಕು ದಿನ ದಕ್ಷಿಣ, ಕನ್ನಡ, ಕರಾವಳಿ, ಕಿತ್ತೂರು ಕರ್ನಾಟಕ, ಕಲ್ಯಾಣ ಕರ್ನಾಟಕದಲ್ಲಿ ಪ್ರಚಾರ ನಡೆಸಲಿದ್ದಾರೆ. ಅಮಿತ್ ಶಾ ಅವರು 35 ರಿಂದ 40 ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ನಡೆಸಲಿದ್ದಾರೆ ಎಂದು ವಿವರಿಸಿದರು.

ರಾಹುಲ್ ಗಾಂಧಿ ಬಡವರ ಬಗ್ಗೆ ಮಾತನಾಡುತ್ತಾರೆ. ಆದರೆ ಅವರಿಗೆ ಬಡವರ ಬಗ್ಗೆ ಗೊತ್ತಿಲ್ಲ.

ಕಾಂಗ್ರೆಸ್ಗೆ 60 ವರ್ಷ ಆಡಳಿತ ನಡೆಸಲು ಅವಕಾಶ ನೀಡಿದರೂ ಗರೀಬಿ ಹಟಾವೋ ಮಾಡಲಿಲ್ಲ. ಮನೆ, ಶೌಚಾಲಯ ಕಟ್ಟಿಸಿಕೊಡುವುದಕ್ಕೆ, ಅಡುಗೆ ಅನಿಲ ನೀಡುವುದಕ್ಕೆ ನರೇಂದ್ರ ಮೋದಿಯವರು ಬರಬೇಕಾಯಿತು. ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಹೋಗುವ ಸಂದೇಶ ನೀಡಿರುವ ಬಸವೇಶ್ವರರ ಬಗ್ಗೆ ರಾಹುಲ್ ಗಾಂಧಿಯವರಿಗೆ ಗೊತ್ತಿಲ್ಲ ಎಂದು ಟೀಕಿಸಿದರು.

ಮತ ಬ್ಯಾಂಕ್ಗಾಗಿ ಒಂದು ಸಮುದಾಯದ ಓಲೈಕೆ ಮಾಡುವ ಕಾಂಗ್ರೆಸ್ ಮತ ಬ್ಯಾಂಕ್ಗಾಗಿ ಒಂದು ಸಮುದಾಯವನ್ನು ಓಲೈಕೆ ಮಾಡುವುದು ಕಾಂಗ್ರೆಸ್ ಗೆ ಗೊತ್ತು. ರಾಜ್ಯದಲ್ಲಿ ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ಭಾಗ್ಯಲಕ್ಷ್ಮಿ, ಸಂಧ್ಯಾ ಸುರಕ್ಷಾ ಸೇರಿದಂತೆ ಎಲ್ಲ ವರ್ಗಗಳಿಗೂ ಪ್ರಯೋಜನ ವಾಗುವ ಯೋಜನೆಗಳನ್ನು ರೂಪಿಸಿದ್ದರು. ಬಿಜೆಪಿ, ಒಂದು ಧರ್ಮಕ್ಕಾಗಿ ಯೋಜನೆಗಳನ್ನು ರೂಪಿಸಿಲ್ಲ. ಆದರೆ, ಸಿದ್ದರಾಮಯ್ಯ ಕೇವಲ ಒಂದು ಸಮುದಾಯಕ್ಕಾಗಿ ಶಾದಿ ಭಾಗ್ಯ ಯೋಜನೆ ಜಾರಿಗೆ ತಂದಿದ್ದರು ಎಂದು ಕು.ಶೋಭಾ ಕರಂದ್ಲಾಜೆ ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ವಕ್ತಾರರು ಮತ್ತು ವಿಧಾನಪ-ರಿಷತ್ ಸದಸ್ಯೆ ಡಾ. ತೇಜಸ್ವಿನಿ ಗೌಡ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅಜಿತ್ ಹೆಗ್ಡೆ ಉಪಸ್ಥಿತರಿದ್ದರು.

# ಬಿಜೆಪಿ ಚುನಾವಣಾ ಕಚೇರಿ ಉದ್ಘಾಟನೆ

ಹುಕ್ಕೇರಿ: ಪಟ್ಟಣದಲ್ಲಿ ಸೋಮವಾರ ಭಾರತೀಯ ಜನತಾ ಪಾರ್ಟಿ(ಬಿಜೆಪಿ)ಯ ಹುಕ್ಕೇರಿ ಕ್ಷೇತ್ರದ ಚುನಾವಣಾ ಕಚೇರಿ ಉದ್ಘಾಟನೆ ನಡೆಯಿತು.

ಬ್ಲಾಕ್ ಅಧ್ಯಕ್ಷ ರಾಚಯ್ಯ ಹಿರೇಮಠ, ಪುರಸಭೆ ಮಾಜಿ ಉಪಾಧ್ಯಕ್ಷ ಗುರು ಕುಲಕರ್ಣಿ ಮಾತನಾಡಿ, ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳಾಗಿದ್ದು ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಗೆಲುವಿಗೆ ಶ್ರೀರಕ್ಷೆಯಾಗಲಿದೆ. ಮನೆ ಮನೆ ಪ್ರಚಾರ ಕೈಗೊಂಡು ಕ್ಷೇತ್ರದಲ್ಲಿ ಕೈಗೊಂಡ ಕಾಮಗಾ-ರಿಗಳ ಬಗ್ಗೆ ಅರಿವು ಮೂಡಿಸಿ ಬಿಜೆಪಿ ಪರ ಮತಯಾಚಿಸಬೇಕು ಎಂದರು.



ಮುಖಂಡರಾದ ಅಶೋಕ ಪಟ್ಟಣಶೆಟ್ಟಿ, ಬಸವರಾಜ ಮರಡಿ, ಸತ್ಯಪ್ಪ ನಾಯಿಕ, ಸುರೇಶ ದೊಡಲಿಂಗನವರ, ಮಹಾವೀರ ನಿಲಜಗಿ, ಎ.ಕೆ.ಪಾಟೀಲ, ಆನಂದ ಗಂಧ, ಮಲ್ಲಪ್ಪಾ ಬಿಸಿರೊಟ್ಟಿ, ಪ್ರಕಾಶ ಮುತಾಲಿಕ, ರಾಜು ಮುನ್ನೋಳಿ, ಪಿಂಟು ಶೆಟ್ಟಿ, ವಿರೇಶ ಗಜಬರ, ಬಸವರಾಜ ಗಂಗಣ್ಣವರ, ರಾಜು ಚೌಗಲಾ, ರಂಗನಾಥ ಬಾರಕೇರ, ಚನ್ನಪ್ಪ ಗಜಬರ, ಮಹಾಂತೇಶ ತಳವಾರ, ಭೀಮಶಿ ಗೋರಖನಾಥ, ಮುನ್ನಾ ಕಳಾವಂತ, ರಾಜು ಮೋಮಿನದಾದಾ, ಸವಿತಾ ಏಣಗಿಮಠ, ಲಾಜಮ್ ನಾಯಿಕವಾಡಿ, ರಿಯಾಜ ಮುಲ್ಲಾ ಮತ್ತಿತರರು ಉಪಸ್ಥಿತರಿದ್ದರು.

# ಚಲಿಸುತ್ತಿದ್ದ ವೇಳೇ ಬೇರ್ಪಟ್ಟ ರೈಲಿನ ಬೋಗಿಗಳು

ರಾಮನಗರ: ರಾಮನಗರದಲ್ಲಿ ಚಲಿಸುತ್ತಿದ್ದ ವೇಳೇ ರೈಲಿನ ಬೋಗಿಗಳು ಬೇರ್ಪಟ್ಟಿರುವ ಘಟನೆ ನಡೆದಿದೆ.

ಭಾನುವಾರ ರಾತ್ರಿ ಸುಮಾರು 8 ಗಂಟೆಗೆ ಹೊರಟಿದ್ದ ತೂತುಕುಡಿ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳು ರಾಮನಗರ ನಿಲ್ದಾಣದಲ್ಲಿ ಬೇರ್ಪಟ್ಟಿರುವ ಘಟನೆ ನಡೆದಿದ್ದು, ಅವಘಡದ ವೇಳೆಯಲ್ಲಿ ಕೆಲ



ಕಾಲ ಪ್ರಯಾಣಿಕರು ಆತಂಕಕ್ಕೆ ಒಳಗಾದ ಘಟನೆ ಕೂಡ ನಡೆಯಿತು.

ಘಟನೆ ಬಗ್ಗೆ ತನಿಖೆ ನಡೆಸಲಾಗುವುದು, ತನಿಖೆ ವೇಳೆ ಯಾರೇ ತಪ್ಪು ಮಾಡಿದರೂ ಅವರಿಗೆ ಶಿಕ್ಷೆ ನೀಡಲಾಗುವುದು ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ಮೇಲ್ನೋಟಕ್ಕೆ ತಾಂತ್ರಿಕ ಕಾರಣದಿಂದಾಗಿ ಬೋಗಿಗಳು ಬೇರ್ಪಟ್ಟಿರುವ ಬಗ್ಗೆ ಹೇಳಲಾಗುತ್ತಿದೆ.

ಘಟನೆಯಲ್ಲಿ ಯಾರಿಗೂ ಗಾಯಗಳು ಆಗಿಲ್ಲ ಎನ್ನಲಾಗಿದೆ.

# ದಿ.25ರಂದು ಹಾರೋಗೇರಿ ಪಟ್ಟಣಕ್ಕೆ ಮಾಜಿ ಸಿಎಂ ಸಿದ್ದರಾಮಯ್ಯನವರ ಆಗಮನ

ಮುಗಳಖೋಡ: ಹಾರೂಗೇರಿ ಪಟ್ಟಣದಲ್ಲಿ ಮಂಗಳವಾರ ದಿನಾಂಕ: 25ರಂದು ಕಾಂಗ್ರೆಸ್ ಪಕ್ಷದಿಂದ ಬೃಹತ್ ಸಮಾವೇಶ ಹಮ್ಮಿಕೊಂಡಿದ್ದು ಮಾಜಿ ಮುಖ್ಯಮಂತ್ರಿಗಳು, ವಿರೋದ ಪಕ್ಷದ ನಾಯಕರು ಸನ್ಮಾನ್ಯ ಸಿದ್ದರಾಮಯ್ಯನವರು ಆಗಮಿಸುತ್ತಿದ್ದು ಈ ಸಮಾವೇಶಕ್ಕೆ ಕುಡಚಿ ಮತಕ್ಷೇತ್ರದಿಂದ ಸುಮಾರು 50 ಸಾವಿರ ಕ್ಕೂ ಅಧಿಕ ಪಕ್ಷದ ಕಾರ್ಯಕರ್ತರು, ಬೆಂಬಲಿಗರು ಸಮಾವೇಶಕ್ಕೆ ಸೇರುವ ಸಾಧ್ಯತೆ ಇದೆ. ನಮ್ಮ ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯ



ಇಲ್ಲ, ನಾವೆಲ್ಲರೂ ಒಂದೇ ಮನೆಯ ಮಕ್ಕಳು, ಸನ್ಮಾನ್ಯ ಮಾಜಿ ಶಾಸಕರು ಎಸ್.ಬಿ.ಘಾಟಗೆ ಅವರೇ ನನಗೆ ಕುಡಚಿ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಲು ಟಿಕೆಟ್ ಕೊಡಿಸಿದ್ದು, ಅವರು ಕೂಡ ಮುಂದಿನ ದಿನಗಳಲ್ಲಿ ನನ್ನ ಪರವಾಗಿ ಕ್ಷೇತ್ರದಲ್ಲಿ ಪ್ರಚಾರ ಮಾಡಲಿದ್ದಾರೆ.

# ಲಿಂಗಾಯತ ಧರ್ಮದ ಮಹತ್ವ, ಬಸವಣ್ಣವರ ವಚನಗಳ ನೆನೆದ ಪ್ರವೀಣ ಹೀರೆಮಠ


ಬೆಳಗಾವಿ : ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ ಮುನಿಯ ಬೇಡ, ಅನ್ಯ-ರಿಗೆ ಅಸಹ್ಯ ಪಡ ಬೇಡ ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ ಇದೆ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ ಇದೆ ನಮ್ಮ ಕೂಡಲಸಂಗಮ ದೇವರನೊಲಿಸುವ ಪರಿ ವಚನದ ಮೂಲಕ



ಜಗದ್ಗುರು ಅಣ್ಣ ಬಸವಣ್ಣವರನ್ನು ನೆನೆದು ಮಾತು ಪ್ರಾರಂಭಿಸಿದ ಪ್ರವೀಣ ವಿಭೂತಿಯ ಮಹತ್ವ ತಿಳಿಸಿದ್ದಾರೆ.

ಕಾಯಕವೇ ಕೈಲಾಸ ಎಂದು ಹೇಳುವ ಮೂಲಕ ಬೆಳಗಾವಿಯ ಸಕಲ ಜನತೆಗೆ ಬಸವ ಜಯಂತಿಯ ಶುಭಾಶಯಗಳನ್ನು ತಿಳಿಸಿದ ಪ್ರವೀಣ ಹಿರೇಮಠ ಅಣ್ಣ ಬಸವಣ್ಣ ಅವರ ವಚನಗಳನ್ನು ನೆನೆದು ಮಾತನಾಡಿದ್ದಾರೆ , ಬಸವಣ್ಣನವರ ಪರಂಪರೆ ಕರ್ನಾಟಕ ಮತ್ತು ಅದರಾಚೆಗಿನ ಜನರಿಗೆ ಸ್ಪೂರ್ತಿ ನೀಡುತ್ತಲೇ ಇದೆ ಎಂದು ಪ್ರವೀಣ ಹೇಳಿದ್ದಾರೆ.

ಸಾಮಾಜಿಕ ನ್ಯಾಯ, ಸಹಾನುಭೂತಿ ಮತ್ತು ಆಧ್ಯಾತ್ಮಿಕತೆಯ ಕುರಿತು ಬಸವಣ್ಣವರ ಬೋಧನೆಗಳು ಇಂದಿಗೂ ಪ್ರಸ್ತುತವಾಗಿವೆ ಮತ್ತು ಅನೇಕ ವ್ಯಕ್ತಿಗಳು ಮತ್ತು ಸಾಮಾಜಿಕ ಚಳುವಳಿಗಳಿಗೆ ಸ್ಪೂರ್ತಿಯ ಮೂಲವಾಗಿದೆ ಎಂದು ಹೇಳಿದ್ದಾರೆ.



## ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದ ಗಂಗಾಧರ ಗೌಡ ನಿವಾಸದ ಮೇಲೆ ಐಟಿ ದಾಳಿ

ಮಂಗಳೂರು: ಕಾಂಗ್ರೆಸ್ ಮುಖಂಡ ಗಂಗಾಧರ ಗೌಡ ಅವರ ಎರಡು ವಸತಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯಲ್ಲಿರುವ ಶಿಕ್ಷಣ ಸಂಸ್ಥೆಯ ಮೇಲೆ ಆದಾಯ ತೆರಿಗೆ ಇಲಾಖೆ ಸೋಮವಾರ ದಾಳಿ ನಡೆಸಿದೆ.

ಈ ಶಿಕ್ಷಣ ಸಂಸ್ಥೆಯು ಗಂಗಾಧರಗೌಡ ಅವರ ಪುತ್ರ ರಂಜನ್ ಗೌಡ ಅವರಿಗೆ ಸೇ-ರಿದ್ದಾಗಿದೆ.

ಗಂಗಾಧರಗೌಡರು 2018 ರಲ್ಲಿ ಬಿಜೆಪಿ ತೊರೆದು ಕಾಂಗ್ರೆಸ್‌ಗೆ ಸೇರಿದ್ದರು. ಕರ್ನಾಟಕ ವಿಧಾನಸಭಾ ಚುನಾವಣೆಗೆ ಟಿಕೆಟ್ ನಿರಾಕ-ರಿಸಿದ ನಂತರ ಅವರು ಇತ್ತೀಚೆಗೆ ಸಕ್ರಿಯ ರಾಜರಾರಣದಿಂದ ಹಿಂದೆ ಸರಿಯುವುದಾಗಿ ಘೋಷಿಸಿದ್ದರು.

ಈ ಸಂಬಂಧ ಇನ್ನಷ್ಟೇ ಹೆಚ್ಚಿನ ವಿವರಗಳು ತಿಳಿಯಬೇಕಿದೆ.

ಈಮಧ್ಯೆ, ಆದಾಯ ತೆರಿಗೆ (ಐಟಿ) ಇಲಾಖೆಯು ತಮಿಳುನಾಡಿನ ಅನೇಕ ಸ್ಥಳಗಳಲ್ಲಿ ಶೋಧ ನಡೆಸುತ್ತಿದೆ. ಖಾಸಗಿ ಸಂಸ್ಥೆಗೆ ಸಂಬಂಧಿಸಿದಂತೆ ಐಟಿ ಅಧಿಕಾರಿಗಳು ತಮಿಳುನಾಡಿನ 50 ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧ ನಡೆಸುತ್ತಿದ್ದಾರೆ ಎಂದು ಅಧಿಕೃತ ಮೂಲಗಳು ಇಂದು ತಿಳಿಸಿವೆ.

ಮೂಲಗಳ ಪ್ರಕಾರ, ಖಾಸಗಿ ಸಂಸ್ಥೆಯು ಡಿಎಂಕೆಯೊಂದಿಗೆ ಬಹಳ ನಿಕಟ ಸಂಪರ್ಕ ಹೊಂದಿದೆ ಎಂದು ಹೇಳಲಾಗಿದೆ.

ಅಣ್ಣಾನಗರದ ಡಿಎಂಕೆ ಶಾಸಕ ಎಂಕೆ ಮೋಹನ್ ಅವರ ಪುತ್ರ, ಸಂಸ್ಥೆಯ ಷೇರುದಾರ ಕಾರ್ತಿಕ್ ಅವರ ಮನೆ ಮೇಲೆ ಆದಾಯ ತೆರಿಗೆ ದಾಳಿ ನಡೆದಿದೆ.

## ವಿಜಯಪುರ ಜಿಲ್ಲೆಯ 8 ಮತಕ್ಷೇತ್ರದಿಂದ ಒಟ್ಟು 20 ಅಭ್ಯರ್ಥಿಗಳು ನಾಮಪತ್ರ




ವಿಜಯಪುರ : ವಿಧಾನಸಭಾ ಚುನಾವಣೆ ಹಿನ್ನೆಲೆ ವಿಜಯಪುರ ಜಿಲ್ಲೆಯ 8 ಮತಕ್ಷೇತ್ರದಿಂದ ಒಟ್ಟು 20 ಅಭ್ಯರ್ಥಿಗಳು ನಾಮಪತ್ರ ವಾಪಸ್ಸು ಪಡೆದುಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ.

ಜಿಲ್ಲೆಯ ಎಂಟು ಮತಕ್ಷೇತ್ರದಿಂದ 20 ಅಭ್ಯರ್ಥಿಗಳು ತಮ್ಮ ನಾಮಪತ್ರ ಹಿಂಪಡೆದುಕೊಂಡಿದ್ದಾರೆ.

ವಿಜಯಪುರ ನಗರ ಮತಕ್ಷೇತ್ರ: ಐಜಾಜ್ ಅಹ್ಮದ ಜಾಗೀರದಾರ, ಸಿಂದಗಿ ಮತಕ್ಷೇತ್ರ: ಅಮೀರಮಜಾ ಚೌಧರಿ, ಅಕ್ಬರ್ ಖಾಜಾಸಾಬ್ ಮುಲ್ಲಾ, ಇಂಡಿ ಮತಕ್ಷೇತ್ರ: ಶಿವಶರಣ ಜೆಟ್ಟೆಪ್ಪ ವಾಲೀಕಾರ್, ಮಹೆಬೂಬ್ ಅಬ್ದುಲ್‌ಗನಿಸಾಬ್ ಅರಬ, ನಾಗಠಾಣ ಮೀಸಲು ಮತಕ್ಷೇತ್ರ: ಅರ್ಜುನ ಬಂಡಿ, ಮಹೇಂದ್ರ ನಾಯಿಕ್, ಶಂಕರ ಪೂಜಾರಿ, ರವೀಂದ್ರ ಕಟ್ಟಿಮನಿ, ಬಬಲೇಶ್ವರ ಮತಕ್ಷೇತ್ರ: ಇಮಾಮ್‌ಜಾಫರ್ ತಿಡಗುಂದಿ, ಮೈಬೂಬ ಮುಲ್ಲಾ, ಯಾಸೀನ್ ಜವಳಿ, ಜಗದೀಶ ಮಲ್ಲಪ್ಪ ಬಿಸಿರೊಟ್ಟಿ, ಕೃಷ್ಣಾ ಚವ್ಹಾಣ, ಸಂಗಪ್ಪ ಇಂಡಿ, ಸಂಗಯ್ಯ ಮಠಿಮಠ, ಮಹಾದೇವ ಪವಾರ, ಬಸವನಬಾಗೇಬಾಡಿ ಮತಕ್ಷೇತ್ರ: ಸಂಯುಕ್ತಾ ಪಾಟೀಲ್

ದೇವರಹಿಪ್ಪರಗಿ ಮತಕ್ಷೇತ್ರ: ಬಾಪುಗೌಡ ಮಲ್ಲನಗೌಡ ಪಾಟೀಲ, ಮುದ್ದೇಬಿಹಾಳ ಮತಕ್ಷೇತ್ರ: ಸಿದ್ದಪ್ಪ ವಾಲೀಕಾರ್ ನಾಮಪತ್ರ ಹಿಂಪಡೆದುಕೊಂಡಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ತಿಳಿಸಿದ್ದಾರೆ.

# ಡಾ. ರಾಜಕುಮಾರ್ ಸರಳತೆ ಎಲ್ಲರಿಗೂ ಆದರ್ಶಪ್ರಾಯ: ಗುರುನಾಥ ಕಡಬೂರ

ಬೆಳಗಾವಿ: ಕನ್ನಡ ಚಲನಚಿತ್ರಗಳಲ್ಲಿ ಉತ್ತಮ ಹಾಗೂ ವಿಭಿನ್ನ ಪಾತ್ರಗಳ ಮೂಲಕ ಇಡೀ ಭಾರತಕ್ಕೆ ಕೀರ್ತಿ ತಂದುಕೊಟ್ಟ ಹಿರಿಮೆ ಕರ್ನಾಟಕ ರತ್ನ, ಕನ್ನಡದ ಕಣ್ಮಣಿ ಡಾ. ರಾಜ-ಕುಮಾರ ಅವರಿಗೆ ಸಲ್ಲುತ್ತದೆ. ಅವರ ಸರಳತೆಯ ವ್ಯಕ್ತಿತ್ವ ಎಲ್ಲರಿಗೂ ಆದ-ರ್ಶಪ್ರಾಯ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ನಗರದ ವಾರ್ತಾ ಭವನದಲ್ಲಿ ಸೋಮವಾರ (ಏ.24) ನಡೆದ ಡಾ. ರಾಜಕುಮಾರ ಜನ್ಮ ದಿನಾಚರಣೆ ನಿಮಿತ್ಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಡಾ. ರಾಜಕುಮಾರ ಅವರ ತಂದೆ ಮೂಲತಃ ರಂಗಭೂಮಿ ಕಲಾವಿದರಾಗಿದ್ದು, ತಂದೆಯಿಂದ ಪ್ರೇರಿತರಾದ ಅವರು ಅನೇಕ ನಾಟಕಗಳಲ್ಲಿ ನಟಿಸಿ ನಂತರ ಬೇಡರ ಕಣ್ಣಪ್ಪ ಚಲನಚಿತ್ರದ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ರಾಜಕುಮಾರ್ ಅವರು ವಿಭಿನ್ನ ಪಾತ್ರಗಳ ಮೂಲಕ ಅನೇಕ ಪಾತ್ರಗಳನ್ನು ನಿಭಾಯಿಸಿದ್ದಾರೆ



ಎಂದು ಗುಂಜಿ ಗ್ರಾಮದ ಕನ್ನಡ ಪ್ರೌಢಶಾಲಾ ಶಿಕ್ಷಕರಾದ ಅರ್ಜುನ್ ಕಾಮಣ್ಣವರ ಅವರು ತಿಳಿಸಿದರು.

ರಾಜಕುಮಾರ ಮಾಡಿದಂತಹ ಅನೇಕ ಪಾತ್ರಗಳಿಗೆ ಮೆಚ್ಚಿ, ಅಭಿಮಾನಿ ಬಳಗ ವರನಟ ಎಂದು ಅವರನ್ನು ಕರೆಯುತ್ತಾರೆ. ಎಷ್ಟೇ ತಲೆಮಾರು ಉರುಳಿದರೂ ಕನ್ನಡ ಚಿತ್ರ ರಂಗದಲ್ಲಿ ಅವರು ತಮ್ಮದೇ ಆದಂತಹ ಛಾಪು ಮೂಡಿಸಿದ್ದಾರೆ.

ಕೇವಲ ನಟರಾಗಿ ಮಾತ್ರವಲ್ಲದೆ ಅನೇಕ ಚಿತ್ರಗಳಗೆ ಧ್ವನಿ ನೀಡುವುದರ ಮೂಲಕ ಜನಪ್ರಿಯ ಹಾಡುಗಾರರಾಗಿಯೂ ಗುರುತಿಸಿಕೊಂಡಿದ್ದಾರೆ. ಡಾ. ರಾಜ-ಕುಮಾರ ಅವರು ನಟನೆ ಹಾಗೂ ಗಾಯನದ ಮೂಲಕ ಕನ್ನಡ ಜನರ ಮನದಲ್ಲಿ ಅಜರಾಮರವಾಗಿ ಉಳಿದಿರುವ ನಟ ಏಕೈಕ ನಟ-ರಾಗಿದ್ದಾರೆ.

ಕನ್ನಡ ಭಾಷೆಯ ಸರಳ ಸಜ್ಜನಿಕೆಯ ನಟ ರಾಜಕುಮಾರ ಅವರು ತಮ್ಮ ಅಭಿನಯದಿಂದ ಜನಸಾಮಾನ್ಯರನ್ನು ಸೆಳೆದಿದ್ದರು. ಕೇವಲ ಚಿತ್ರರಂಗ ಮಾತ್ರವಲ್ಲದೇ ವಯಕ್ತಿಕ ಜೀವನದಲ್ಲಿ ಕೂಡ ಅವರು ಯಾವುದೇ ಕಳಂಕ ಇಲ್ಲದ ಶ್ರೇಷ್ಠ ನಟ ಎಂದು ಕಾಮಣ್ಣವರ ತಿಳಿಸಿದರು.

ವಾರ್ತಾ ಇಲಾಖೆಯ ಸಿಬ್ಬಂದಿಗಳಾದ, ಅನಂತ್ ಪಪ್ಪು, ಎಂ.ಎಲ್ ಜಮಾದಾರ, ಮತ್ತು ಸಿಟಿಇ ಉಪನ್ಯಾಸಕರಾದ ಶ್ರೀಮತಿ ಝುಡ್.ಜಿ ಸಯ್ಯದ್, ಗಜಾನನ ಹಳೆಮನಿ, ಸತೀಶ್ ಘೋರ್ಪಡೆ, ಸಣ್ಣಉಳಿತಾಯ ಇಲಾಖೆಯ ಸಹಾಯಕ ನಿರ್ದೇಶಕ ವಿ.ಎಂ ಕಂಗ್ರಾಳಕರ್, ಶಿಕ್ಷಕರಾದ ಜ್ಞಾನೇಶ್ವರ ಮೀರಾಶಿ, ಅರುಣ ನೇಸರಗಿ, ಪರುಶರಾಮ ಮೂಕನವರ, ಪ್ರಮೋದ ಗಡಕರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಟ್ಯಾಲಿ ಸಲ್ಯೂಷನ್ಸ್ ಎಂಎಸ್ಎಂಇ ಪ್ರಶಸ್ತಿ

ಹುಬ್ಬಳ್ಳಿ : ಸಾಫ್ಟ್‌ವೇರ್ ಉತ್ಪನ್ನಗಳ ಉದ್ಯಮದಲ್ಲಿ ಪ್ರವರ್ತಕರಾದಟ್ಯಾಲಿ ಸಲ್ಯೂಷನ್ಸ್, ಮೂರು ದಶಕಗಳಿಂದ ಸಣ್ಣ ಮತ್ತು ಮಧ್ಯಮ ವ್ಯವಹಾರಗಳಿಗೆ (ಎಂಎಸ್ಎಂಇ) ವ್ಯಾಪಾರ ನಿರ್ವಹಣಾ ಪರಿಹಾರಗಳನ್ನು ವಿತರಿಸುತ್ತಿದ್ದು, ಇದು ಮೂರನೇ ಆವೃತ್ತಿಯ 'ಎಂಎಸ್ಎಂಇ ಗೌರವ'ಗಳನ್ನು ಘೋಷಿಸಿತು.

ರಾಷ್ಟ್ರದ ಆರ್ಥಿಕ ಪ್ರಗತಿಯಲ್ಲಿ ಅವರ ಕೊಡುಗೆಗಾಗಿ ವ್ಯಾಪಾರಗಳು ಮತ್ತು ಉದ್ಯಮಿಗಳನ್ನು ಗುರುತಿಸಲು ಹಮ್ಮಿಕೊಳ್ಳುವ ವಾರ್ಷಿಕಉಪಕ್ರಮಇದಾಗಿದೆ. ಈ ಗೌರವಗಳು ವೈವಿಧ್ಯತೆ ಮತ್ತು ಎಂಎಸ್ಎಂಇ-ಗಳ ಧನಾತ್ಮಕ ಪ್ರಭಾವವನ್ನುತಮ್ಮಉತ್ತಮ ಅಭ್ಯಾಸಗಳ ಮೂಲಕ ತಳಮಟ್ಟದಲ್ಲಿ ಗುರುತಿಸಿ ಗೌರವಿಸುತ್ತದೆ.

ರೂ.250 ಕೋಟಿಗಿಂತ ಕಡಿಮೆ ವಹಿವಾಟು ಹೊಂದಿರುವ ಎಲ್ಲ ವ್ಯವಹಾರಗಳು ಮತ್ತು ಮಾನ್ಯತೆ ಪಡೆದ ಜಿಎಸ್‌ಟಿಐ-ಎನ್‌ಗಳು ಈ ಪ್ರತಿಷ್ಠಿತಗೌರವ ಉಪಕ್ರಮದಲ್ಲಿ ಭಾಗವಹಿಸಬಹುದು. ಆಸಕ್ತ ಉದ್ಯಮಿಗಳು ಅಥವಾಅಂತಹ ಉದ್ಯಮಿಗಳ ಬಗ್ಗೆ ತಿಳಿದಿರುವ ಜನರುತಮ್ಮ ಪ್ರವೇಶವನ್ನು https://tallysolutions.com/msme-honours ಮೂಲಕ 10ನೇ ಮೇ 2023 ರೊಳಗೆ ಸಲ್ಲಿಸಬಹುದು.

ಎಂಎಸ್ಎಂಇ ಗೌರವದ ಎರಡನೇ ಆವೃತ್ತಿಯು ದೇಶಾದ್ಯಂತ 1,487 ಪಟ್ಟಣಗಳು ಮತ್ತು ನಗರಗಳಿಂದ ಸುಮಾರು 2,000 ನಾಮ ನಿರ್ದೇಶನಗಳನ್ನು ಸ್ವೀಕರಿಸಿದೆ ಮತ್ತು 98 ಕ್ಕೂ ಹೆಚ್ಚು ವ್ಯವಹಾರಗಳನ್ನು ಅಂತರರಾಷ್ಟ್ರೀಯ ಎಂಎಸ್ಎಂಇ ದಿನದ ಸಂದರ್ಭದಲ್ಲಿ ಅಂದರೆಜೂನ್ 27, 2022ರಂದು ಗೌರವಿಸಲಾಯಿತು.

ವಿಜೇತರನ್ನು ಪ್ರೆಸ್, ಪಾಡ್‌ಕಾಸ್ಟ್‌ಗಳು, ಇತ್ಯಾದಿ ಸಾಮಾಜಿಕ ಮಾಧ್ಯಮಗಳ ಮೂಲಕ ಗೌರವಿಸಲಾಯಿತು. ಈ ವರ್ಷ, ಭಾರತದಜೊತೆಗೆ, ಉಪಕ್ರಮವು ಭಾರತ, ಯುನೈಟೆಡ್ ಅರಬ್‌ಎಮಿರೇಟ್ಸ್, ಸೌದಿ ಅರೇಬಿಯಾ, ಬಾಂಗ್ಲಾದೇಶ, ನೇಪಾಳ, ಇಂ-ಡೋನೇಷ್ಯಾ ಮತ್ತು ಆಫ್ರಿಕಾದ ಅತ್ಯುತ್ತಮ ವ್ಯವಹಾರಗಳನ್ನು ಸಹ ಗೌರವಿಸುತ್ತದೆ.

ಕೊಡುಗೆಗಳು ಮತ್ತು ಯಶಸ್ಸಿನ ಕಥೆಗಳ ವೈವಿಧ್ಯತೆಯನ್ನು ನಿಜವಾಗಿಯೂ ಹೊರತರಲು ಎಂಎಸ್ಎಂಇ ಗೌರವಗಳನ್ನು 5 ವಿಭಾಗಗಳಲ್ಲಿ ವಿಂಗಡಿಸಲಾಗಿದೆ:

Tally®
POWER OF SIMPLICITY

ವಂಡರ್ ವುಮನ್: ತಮ್ಮ ಕನಸುಗಳನ್ನು ಬೆನ್ನಟ್ಟುತ್ತಿರುವ ಮತ್ತುಇಂದು ವ್ಯವಹಾರಗಳನ್ನು ಮರುವ್ಯಾಖ್ಯಾನಿಸಿರುವ ಮಹಿಳಾ ಉದ್ಯಮಿಗಳನ್ನು ಗುರುತಿಸುವುದು

ಬಿಸಿನೆಸ್ ಮೆಸ್ಟ್ರೋ: ಸಮಯದ ಪರೀಕ್ಷೆಯನ್ನು ತಡೆದುಕೊಳ್ಳುವ ಮತ್ತು ಬೆಳೆಯುತ್ತಲೇ ಇರುವ ದಿಗ್ಗಜರನ್ನುಗುರುತಿಸುವುದು.

ನ್ಯೂಜೆನ್‌ಐಕಾನ್: ಮಾರುಕಟ್ಟೆಯ-ಅಂತರವನ್ನು ಗುರುತಿಸಿದ ಮತ್ತು ನವೀನ ಪರಿಹಾರಗಳನ್ನು ಪರಿಚಯಿಸಿದ ಸ್ಟಾರ್ಟ್‌ಅಪ್‌ಗಳನ್ನು ಗುರುತಿಸುವುದು

ಟೆಕ್‌ಟ್ರಾನ್ಸ್‌ಫಾರ್ಮರ್: ಆಧುನಿಕ ತಂತ್ರಜ್ಞಾನದ ಅಳವಡಿಕೆಯೊಂದಿಗೆ ಉತ್ತಮ ಫಲಿತಾಂಶಗಳನ್ನು ಪಡೆದಚುರುಕಾದ ವ್ಯವಹಾರಗಳನ್ನು ಗುರುತಿಸುವುದು.

ಚಾಂಪಿಯನ್‌ಆಫ್‌ಕಾಸ್: ಜಾಗತಿಕಯೋಗ ಕ್ಷೇಮಕ್ಕಾಗಿ ಉತ್ತಮ ಉದ್ದೇಶಕ್ಕಾಗಿ ಕೊಡುಗೆ ನೀಡಿದ ವ್ಯಾಪಾರಗಳನ್ನು ಗುರುತಿಸುವುದು

ಉಪಕ್ರಮದಕುರಿತು ಪ್ರತಿಕ್ರಿಯಿಸಿದ ಟ್ಯಾಲಿ ಸಲ್ಯೂಷನ್ಸ್‌ನ ಮುಖ್ಯ ಮಾರುಕಟ್ಟೆ ಅಧಿಕಾರಿ ಶ್ರೀಮತಿ ಜಯತಿ ಸಿಂಗ್, "ವಿಶಾಲವಾದ ಸ್ಟಾರ್ಟ್‌ಅಪ್‌ಗಳನ್ನು ಒಳಗೊಂಡಿರುವ ಸೂಕ್ಷ್ಮ, ಸಣ್ಣ ಮಧ್ಯಮ ವ್ಯವಹಾರಗಳು, ಸಾಂಪ್ರದಾಯಿಕ ದೀರ್ಘಾವಧಿಯ ವ್ಯವಹಾರಗಳು ಮತ್ತುಇತರ ವಹಿವಾಟುಗಳು ತಮ್ಮ ಕೊಡುಗೆಗಳಿಗಾಗಿ ಮಾತ್ರಗೌರವಿಸಲ್ಪಡುತ್ತವೆ. ಆದಾಗ್ಯೂ ವಿಶ್ವಆರ್ಥಿಕತೆಯು ನಾವೀನ್ಯತೆ ಮತ್ತು ಬೆಳವಣಿಗೆಯ ಕೆಲವು ಅದ್ಭುತ ಕಥೆಗಳಿಗೆ ಸಾಕ್ಷಿಯಾಗಿದೆ.

ಎಂಎಸ್ಎಂಇ ಗೌರವಗಳ 3 ನೇ ಆವೃತ್ತಿಯುಗಾತ್ರ, ಭೌಗೋಳಿಕತೆ, ವ್ಯವಹಾರಗಳ ಪ್ರಕಾರಗಳು ಮತ್ತುಅವಧಿಯ ವೈವಿಧ್ಯತೆಯಾದ್ಯಂತ ಈ ಉದ್ಯಮಿಗಳ ಯಶಸ್ಸಿನ ಕಥೆಗಳನ್ನು ಗುರುತಿಸುವಗುರಿಯನ್ನು ಹೊಂದಿದೆ.

ಈ ವೇದಿಕೆಯ ಮೂಲಕ, ನಾವು ಭಾರತೀಯ ಪಟ್ಟಣಗಳು ಮತ್ತು ನಗರಗಳು ಮತ್ತು ಪ್ರಪಂಚದಾದ್ಯಂತ ಎಂಎಸ್ಎಂಇ ಗಳಿಗೆ ಧ್ವನಿ ನೀಡಲು ಉದ್ದೇಶಿಸಿದ್ದೇವೆ ಮತ್ತುಅವರಅನನ್ಯ ಕೊಡುಗೆಗಳನ್ನು ಎತ್ತಿತೋ-ರಿಸುತ್ತೇವೆ. ದೇಶದಲ್ಲಿ ಉದ್ಯಮಶೀಲತೆಯ ಬೆಳವಣಿಗೆ ಮತ್ತುಅಭಿವೃದ್ಧಿಯನ್ನು ಮತ್ತಷ್ಟು ಹೆಚ್ಚಿಸುವ ವಿವಿಧ ವೇದಿಕೆಗಳಲ್ಲಿ ಇವುಗಳನ್ನು ವರ್ಷಪೂರ್ತಿ ಹಂಚಿಕೊಳ್ಳಲಾಗುವುದು" ಎಂದು ವಿವರಿಸಿದರು.

ವಿಜೇತರನ್ನು ಅಂತಿಮಗೊಳಿಸಲು ಎಂ-ಎಸ್‌ಎಂಇ ಉದ್ಯಮದತಜ್ಞರನ್ನು ಒಳಗೊಂಡಿರುವ ತೀರ್ಪುಗಾರರ ಮೂಲಕ ನಾಮನಿರ್ದೇಶನಗಳನ್ನುನಿರ್ಣಯಿಸಲಾಗುತ್ತದೆ. ಇವುಗಳು ಮೆಟ್ರೋ, ಶ್ರೇಣಿ 1, ಶ್ರೇಣಿ 2 ಮತ್ತು ಶ್ರೇಣಿ 3 ಮಾರುಕಟ್ಟೆಗಳಿಂದ ಎದ್ದುಕಾಣುವ ನಾಮನಿರ್ದೇಶನಗಳ ಮಿಶ್ರಣವಾಗಿದೆ.


ಟ್ಯಾಲಿಯ 2.3 ದಶಲಕ್ಷಕ್ಕೂಅಧಿಕ ಎಸ್‌ಎಂಇ ಪರವಾನಗಿ ಬೇಸ್, 28,000 ಪಾಲುದಾರರ ವಿಶಾಲ ಪರಿಸರ ವ್ಯವಸ್ಥೆ, ಭಾರತದಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳ 1.35 ಲಕ್ಷ ಪ್ರಬಲ ಸಮುದಾಯವು ಈ ಉಪಕ್ರಮದ ಪ್ರಮಾಣ ಮತ್ತುಗುರಿಗೆ ಸಾಕ್ಷಿಯಾಗಿದೆ.

# ನೆಮ್ಮದಿಯೇ ನಿಜವಾದ ಸಂಪತ್ತು: ಶ್ರೀ ರಂಭಾಪುರಿ ಜಗದ್ಗುರು

ಚನ್ನಗಿರಿ: ಮನುಷ್ಯನ ಜೀವನ ಬಹಳಷ್ಟು ಒತ್ತಡದಿಂದ ಕೂಡಿದೆ. ಭೌತಿಕ ಬದುಕಿನಲ್ಲಿ ಎಲ್ಲ ಸಂಪನ್ಮೂಲಗಳಿದ್ದರೂ ಶಾಂತಿಯಿಲ್ಲ. ಮನಸ್ಸಿನ ನೆಮ್ಮದಿಗಿಂತ ದೊಡ್ಡದಾದ ಶ್ರೀಮಂತಿ-ಕೆ ಈ ಜಗತ್ತಿನಲ್ಲಿ ಯಾವುದೂ ಇಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಿನ ಕಶೆಟ್ಟಿ ಗ್ರಾಮದಲ್ಲಿ ನೂತನ ಶಿಲಾಮಂದಿರ ಉದ್ಘಾಟನೆ ಮತ್ತು ಶ್ರೀ ಗುರು ರೇವಣಸಿದ್ಧಯ್ಯ ಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನಾ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಹು ಜನ್ಮಗಳ ಪುಣ್ಯ ಫಲದಿಂದ ಮಾನವ ಜೀವನ ಪ್ರಾಪ್ತವಾಗಿದೆ. ಅರಿವು ಆದರ್ಶ ಮತ್ತು ಆಚರಣೆಗಳಿಂದ ಬದುಕನ್ನು ಕಟ್ಟಿಕೊಳ್ಳಬೇಕಾಗಿದೆ. ಅರಿತು ಬಾಳಿದರೆ ಬಾಳು ಸುಖಮಯ. ಮರೆತು ಮಲಗಿದರೆ ಜೀವನ ಬಂಧನಕಾರಿ. ಭವ ಬಂಧನದಿಂದ ಮುಕ್ತಗೊಳಿಸುವುದೇ ಗುರುವಿನ ಧರ್ಮವಾಗಿದೆ. ಬೆಳೆಯ ಸುರಕ್ಷತೆಗೆ ಬೇಲಿ ಇರುವಂತೆ ಆತ್ಮೋನ್ನತಿಗಾಗಿ ಧರ್ಮಾಚರಣೆಯ ಅವಶ್ಯಕತೆ ತುಂಬಾ ಇದೆ. ಮನುಷ್ಯನ ಮೇಲೆ ನಂಬಿಕೆ ಇಟ್ಟವರು ಭಯ



ಪಡಬಹುದು. ಆದರೆ ದೇವರ ಮೇಲೆ ನಂಬಿಕೆ ಇಟ್ಟವರು ಭಯ ಪಡುವ ಅವಶ್ಯಕತೆಯಿಲ್ಲ. ದೇಶದಲ್ಲಿ ಪ್ರಧಾನಿ, ಸಮಾಜದಲ್ಲಿ ಗುರು, ಪರಿವಾರದಲ್ಲಿ ತಂದೆ, ಮನೆಯಲ್ಲಿ ಮಹಿಳೆ ಇವರು ಎಂದಿಗೂ ಸಾಧಾರಣ ವ್ಯಕ್ತಿಗಳಲ್ಲ. ಏಕೆಂದರೆ ಅಭಿವೃದ್ಧಿ ಮತ್ತು ವಿನಾಶ ಇವೆರಡೂ ಇವರ ಕೈಯಲ್ಲಿಯೇ ಇರುತ್ತವೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಆದರ್ಶ ಬದುಕಿಗೆ ಕೊಟ್ಟ ವಿಚಾರ ಧಾರೆಗಳು ಸರ್ವ ಕಾಲಕ್ಕೂ ಸರ್ವ-ರಿಗೂ ಅನ್ವಯಿಸುತ್ತವೆ. ಲಿಂ. ಶ್ರೀ ಗುರು ರೇವಣಸಿದ್ಧಯ್ಯ ಸ್ವಾಮಿಗಳ ಧರ್ಮ ನಿಷ್ಠೆ ಗುರು ಪರಂಪರೆಯಲ್ಲಿ ಇಟ್ಟ ಶ್ರದ್ಧೆ ಮರೆಯಲಾಗದು. ಅವರ ಆದರ್ಶ ಗುಣಗಳು ಬದುಕಿ ಬಾಳುವ ಜನತೆಗೆ ದಾರಿ ದೀಪ ಎಂದರು.

ದುಗ್ಗಾವತಿ ಹಿರೇಮಠದ ಮಲ್ಲಿಕಾರ್ಜುನ ಸ್ವಾಮಿಗಳು ಮತ್ತು ವೀರಭದ್ರಸ್ವಾಮಿಗಳು ಮಾರ್ಗದರ್ಶನ ನೀಡಿದ ಸಮಾರಂಭದಲ್ಲಿ ಬಸವಾಪಟ್ಟಣ ರಾಂಪುರದ ಶಿವಕುಮಾರ ಹಾಲಸ್ವಾಮಿಗಳು ಹಾಗೂ ಕತ್ತಲಗೆರೆ ಉಮಾಪತಿ ಹಾಲಸಿದ್ಧೇಶ್ವರ ಸ್ವಾಮಿಗಳು ಉಪಸ್ಥಿತರಿದ್ದರು. ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಕಶೆಟ್ಟಿಹಳ್ಳಿ ಕೆ. ಎಂ.ರುದ್ರಯ್ಯ ಪ್ರಾಸ್ತಾವಿಕ ನುಡಿದರು. ಶಿಕ್ಷಕ ಹೆಚ್.ಎಂ.ಜಯದೇವಯ್ಯ ಸ್ವಾಗತಿಸಿದರು. ಕುಮಾರಿ ದೀಕ್ಷಿತ ಆರ್. ಪ್ರಾರ್ಥನೆ ಮಾಡಿದರು. ಬಸವಾಪಟ್ಟಣದ ಕುಮಾರಿ ವಿದ್ಯಾಶ್ರೀ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವಗಳೊಂದಿಗೆ ಸಂಭ್ರಮದಿಂದ ಜರುಗಿತು. ಸಮಾರಂಭದ ನಂತರ ಆಗಮಿಸಿದ ಸಕಲ ಸದ್ಭಕ್ತರಿಗೆ ಅನ್ನ ದಾಸೋಹ ಜರುಗಿತು.

# ಶೆಟ್ಟರ್ ಬದಲಾವಣೆ ತೀರ್ಮಾನ ಮೋದಿ, ಶಾ ಅವರದ್ದು: ಜೋಶಿ

ಹುಬ್ಬಳ್ಳಿ: ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿ ಶೆಟ್ಟರ್ ಅವರನ್ನು ಬದಲಾಯಿಸಿ, ಹೊಸಬರಿಗೆ ಅವಕಾಶ ನೀಡಬೇಕೆಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರೇ ತೀರ್ಮಾನಿಸಿದರು' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ತಮಗೆ ಟಿಕೆಟ್ ತಪ್ಪಿಸಿರುವ ವಿಷಯ ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರ ಗಮನಕ್ಕಿಲ್ಲ ಎಂದು ಪಕ್ಷ ತೊರೆದು ಕಾಂಗ್ರೆಸ್ ಸೇರಿರುವ ಜಗದೀಶ ಶೆಟ್ಟರ್ ಅವರ ಹೇಳಿಕೆಗೆ ಜೋಶಿ ಅವರು ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರತಿಕ್ರಿಯಿಸಿದರು.

ಅಮಿತ್ ಶಾ ಅವರು ಶೆಟ್ಟರ್ ಅವರಿಗೆ ದೂರವಾಣಿ ಕರೆ ಮಾಡಿ, ರಾಜ್ಯಸಭಾ ಸದಸ್ಯ ಸ್ಥಾನ ಅಥವಾ ನೀವು ಕೇಳುವ ಬೇರೆ ಯಾವುದಾದರೂ ಸ್ಥಾನ ನೀಡುತ್ತೇವೆ. ಚುನಾವಣೆಗೆ ಸ್ಪರ್ಧಿಸಲು ಹೊಸಬರಿಗೆ ಅವಕಾಶ ಮಾಡಿಕೊಡಿ. ನೀವು ಹೇಳುವ ಕಾರ್ಯಕರ್ತನಿಗೇ ಟಿಕೆಟ್ ನೀಡುತ್ತೇವೆ ಎಂದೂ ಹೇಳಿದ್ದರು' ಎಂದು ವಿವರಿಸಿದರು.



ಮೋದಿ, ಅಮಿತ್ ಶಾ ಅವರ ವಿರುದ್ಧ ಹೇಳಿಕೆ ನೀಡಿದರೆ ಜನ ವೋಟ್ ಹಾಕಲ್ಲ ಎಂದು ಅವರಿಗೆ ಗೊತ್ತಿದೆ. ಅದಕ್ಕೆ ಅವರು, ಮೋದಿ, ಅಮಿತ್ ಶಾ ಅವರಿಗೆ ಈ ವಿಷಯ ಗೊತ್ತಿಲ್ಲ ಎನ್ನುವ ಮೂಲಕ ರಕ್ಷಣೆ ಪಡೆಯಲು ಪ್ರಯತ್ನಿಸುತ್ತಿದ್ದಾರೆ' ಎಂದು ಹೇಳಿದರು.

ಸಂತೋಷ ಹೆಸರು ಅನಗತ್ಯ: 'ಬಿ.ಎಲ್. ಸಂತೋಷ ಅವರು ಪಕ್ಷದ ಸಂಘಟನಾ ಕಾರ್ಯದರ್ಶಿಯಾಗಿದ್ದಾರೆ. ಪಕ್ಷ ಕಟ್ಟುವ ಕೆಲಸ ಮಾಡುವ ಕಾರ್ಯಕರ್ತರಾಗಿದ್ದಾರೆ. ಅವರ ಹೆಸರನ್ನು ಅನಗತ್ಯವಾಗಿ ಎಳೆದು ತರಲಾಗುತ್ತಿದೆ. ಶೆಟ್ಟರ್ ಅವರಿಗೆ ಟಿಕೆಟ್ ತಪ್ಪಲು ಸಂತೋಷ ಕಾರಣರಲ್ಲ. ಶೆಟ್ಟರ್ ಒಬ್ಬರೇ ಅವರ ಹೆಸರನ್ನು ಹೇಳಿದ್ದಾರೆ. ಬೇರಾರೂ ಹೇಳಿಲ್ಲ' ಎಂದು ನುಡಿದರು.

**ಕನಸಿನಲ್ಲಾದರೂ ಸಂತೋಷಪಡಲಿ: ವ್ಯಂಗ್ಯ**

ತಾವು ಬಿಜೆಪಿ ತ್ಯಜಿಸಿ ಕಾಂಗ್ರೆಸ್ ಸೇರಿರುವುದರಿಂದ 25ರಿಂದ 30 ಸ್ಥಾನಗಳ ಮೇಲೆ ಪರಿಣಾಮ ಬೀರಲಿದೆ ಎಂದು ಜಗದೀಶ ಶೆಟ್ಟರ್ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಪ್ರಲ್ಹಾದ ಜೋಶಿ ಅವರು, 'ಬಹುಶಃ ಅವರು ಕನಸು ಕಾಣುತ್ತಿದ್ದಾರೆ. ಕನಸು ಕಾಣುವುದನ್ನು ತಡೆಯಲು ಸಾಧ್ಯವಿಲ್ಲ. ಕನಿಷ್ಠ ಕನಸಿನಲ್ಲಾದರೂ ಸಂತೋಷಪಡಲಿ' ಎಂದು ವ್ಯಂಗ್ಯವಾಡಿದರು.

# ನಿರ್ಭೀತಿಯಿಂದ ಮತ ಚಲಾಯಿಸಿ

ಕಿತ್ತೂರು: ಎಲ್ಲ ದಾನಗಳಲ್ಲಿ ಮತದಾನ ಶ್ರೇಷ್ಠವಾದದ್ದು, ಯಾವುದೇ ಆಸೆ ಆಮಿಷಕ್ಕೆ ಒಳಗಾಗದೆ ನಿರ್ಭೀತಿಯಿಂದ ಎಲ್ಲರೂ ಮತದಾನ ಮಾಡಬೇಕೆಂದು ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸುಭಾಷ್ ಸಂಪಗಾಂವಿ ಅವರು ಹೇಳಿದರು.

ತಾಲ್ಲೂಕು ಪಂಚಾಯತಿ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ತಾಲೂಕಿನ ತುರಮರಿ ಗ್ರಾಮ ಪಂಚಾಯತಿ ಆವರಣದಲ್ಲಿ ಸೋಮವಾರ ಏರ್ಪಡಿಸಿದ್ದ ಮತದಾನ ಜಾಗೃತಿ ಅಭಿಯಾನದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಿಳೆಯರು ಮತದಾನ ವಿಷಯದಲ್ಲಿ ಹಿಂಜರಿಯದೇ ಮುಕ್ತವಾಗಿ ಮತದಾನ ಮಾಡಬೇಕು. ಸಂವಿಧಾನ ನೀಡಿರುವ ನಿಮ್ಮ ಹಕ್ಕನ್ನು ನೀವು ತಪ್ಪದೇ ಚಲಾಯಿಸಬೇಕು ಎಂದರು.




ಇದೇ ಸಂದರ್ಭದಲ್ಲಿ ಮತದಾನ ಜಾಗೃತಿಗಾಗಿ ಮಹಿಳೆಯರಿಂದ ರಂಗೋಲಿ ಸ್ಪರ್ಧೆ ಏರ್ಪಡಿಸಲಾಯಿತು. ಮಹಿಳೆಯರು ಆಸಕ್ತಿಯಿಂದ ಪಾಲ್ಗೊಂಡು ಮತದಾನದ ಮಹತ್ವ ಸಾರುವ ಘೋಷಣೆ ಹಾಗೂ ಚಿತ್ರಗಳನ್ನು ರಂಗೋಲಿಯಲ್ಲಿ ಆಕರ್ಷಕವಾಗಿ ಬಿಡಿಸಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ನರೇಗಾ ಸಹಾಯಕ ನಿರ್ದೇಶಕರು ಲಿಂಗರಾಜ ಹಲಕರ್ಣಿಮಠ, ಐಇಸಿ ಸಂಯೋಜಕಿ ಎಸ್.ಬಿ.ಜವಳಿ, ಪಿಡಿಓ ಸುಭಾಷ ದಾನಪ್ಪನವರ, ಕಾರ್ಯದರ್ಶಿ ಮಹಾಂತೇಶ ಇಟಗಿ, ಕಲ್ಲಪ್ಪ ಚಕಡಿ, ಪಡದಯ್ಯ ಚಿಕ್ಕಮಠ, ಅನ್ನಪೂರ್ಣ ವಕ್ಕುಂದ, ಭಾಗ್ಯಲಕ್ಷ್ಮೀ ಬಿ ಎಚ್, ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# 70 ಲಕ್ಷ ಮೌಲ್ಯದ ಸಿಎಚ್ ಪೌಡರ್ ಸೀಜ್

ರಾಯಚೂರು: ವಿಧಾನ ಸಭೆ ಚುನಾವಣಾ ಹೊಸ್ತಿಲಿನಲ್ಲಿ ರಾಯಚೂರು ಅಬಕಾರಿ ಅಧಿಕಾರಿಗಳು ಫುಲ್ ಅಲರ್ಟ್ಆಗಿದ್ದು, ಅಕ್ರಮ ದಂಧೆಗಳನ್ನು ನಡೆಸುತ್ತಿದ್ದ ಅಪ್ಪ ಮಗ ಕಳ್ಳಾಟ ಪತ್ತೆ ಹಚ್ಚಿ ಬಂಧಿಸಲಾಗಿದೆ.

ಚುನಾವಣೆ ಸಂದರ್ಭದಲ್ಲಿ ರಾಜ್ಯದಲ್ಲಿ ನಿಷೇಧಿತ ಸೇಂದಿಗೆ ಮತ್ತೆ ಡಿಮ್ಯಾಂಡ್ ಶುರುವಾಗಿದ್ದು, ಮದ್ಯ ಪ್ರಿಯರು ನಿಸರ್ಗದತ್ತವಾಗಿ ದೊರಕುವ ಸೇಂದಿಯನ್ನು ಕುಡಿಯಲು ಮುಂದಾಗುತ್ತಾರೆ.



ಡಿಮ್ಯಾಂಡ್ ಹೆಚ್ಚಾದಂತೆ ಅಕ್ರಮಗಳ ಜಾಸ್ತಿಯಾಗುತ್ತಿದ್ದು, ಸೇಂದಿ, ಹೆಂಡ ತಯಾರಿಸಲು ಬಳಸಲಾಗುವ ನಿಷೇಧಿತ ಸಿಎಚ್ ಪೌಡರ್ ಎನ್ನುವ ಕೆಮಿಕಲ್ ದಂಧೆಯೂ ಬೆಳಕಿಗೆ ಬಂದಿದೆ.

ಈ ಬೆನ್ನಲ್ಲೆ ರಾಯಚೂರು ಅಬಕಾರಿ ಅಧಿಕಾರಿಗಳು ಫುಲ್ ಅಲರ್ಟ್ ಆಗಿದ್ದಾರೆ.

ರಾಯಚೂರು ತಾಲ್ಲೂಕಿನ ಕಡಂಗದೊಡ್ಡಿ ಗ್ರಾಮದ ನರಸರಾಜು ಹಾಗೂ ಆತನ ಮಗ ತಾಯನಗೌಡ ಬಲೆ ಬಿದ್ದಿದ್ದಾರೆ. ಹೊಲದಲ್ಲಿರುವ ಅಂಡರ್ಗ್ರೌಂಡ್ನಲ್ಲಿ ಅಬಕಾರಿ ಭಾಷೆಯಲ್ಲಿ 24 ಕ್ಯಾರೆಟ್ ಗೋಲ್ಡ್ ಎಂದು ಕರೆಯಲ್ಪಡುವ ಪ್ಯೂರ್ ಸಿಎಚ್ ಪೌಡರ್ ಸಿಕ್ಕಿತು. ಕೆಜಿ ಸಿಎಚ್ ಪೌಡರ್ನಿಂದ ಸುಮಾರು 1000 ಕ್ಕೂ ಹೆಚ್ಚು ಲೀಟರ್ ಸೇಂದಿ ತಯಾರಿಸಬಹುದಾಗಿತ್ತು. ಸಿಎಚ್ ಪೌಡರ್ ಮಾರಾಟ ಮಾಡುತ್ತಿದ್ದ ಅಪ್ಪ ಮಗ ಅಬಕಾರಿ ಖೆಡ್ಡಾಗೆ ಬಿದ್ದಿದ್ದಾರೆ ಎಂದು ವರದಿಯಾಗಿದೆ.

# ರಾಮದುರ್ಗ ಬಿಜೆಪಿ ಶಾಸಕ ನಾಮಪತ್ರ ವಾಪಸ್



ಬೆಳಗಾವಿ: ಬಿಜೆಪಿಯಿಂದ ಟಿಕೆಟ್ ಕೈತಪ್ಪಿದ್ದ ಬೆನ್ನಲ್ಲೇ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ರಾಮದುರ್ಗ ಶಾಸಕ ಮಹಾದೇವಪ್ಪ ಯಾದವಾಡ ಸೋಮವಾರ ತಮ್ಮ ನಾಮಪತ್ರ ವಾಪಸ್ ಪಡೆದಿದ್ದಾರೆ. ಬಿಜೆಪಿ ವರಿಷ್ಠರ ಮನವೊಲಿಕೆ ಫಲಿಸಿದ್ದು, ನಾಮಪತ್ರ ವಾಪಸ್ ಪಡೆದಿರುವ ಅವರು ಬಿಜೆಪಿ ಅಭ್ಯರ್ಥಿ ಚಿಕ್ಕ ರೇವಣ್ಣ ಅವರಿಗೆ ಬೆಂಬಲ ನೀಡಲು ನಿರ್ಧರಿಸಿದ್ದಾರೆ.

2018ರ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅಶೋಕ್ ಮಹದೇವಪ್ಪ ಪಟ್ಟಣ ಅವರ ವಿರುದ್ಧ ಮಹಾದೇವಪ್ಪ ಯಾದವಾಡ 57,047 ಮತಗಳ ಅಂತರದಲ್ಲಿ ಭರ್ಜರಿ ಜಯ ಸಾಧಿಸಿದ್ದರು. ಹಾಲಿ ಶಾಸಕರಿಗೆ ಬಿಜೆಪಿ ಈ ಬಾರಿ ಟಿಕೆಟ್ ನೀಡದೆ ಚಿಕ್ಕ ರೇವಣ್ಣ ಅವರಿಗೆ ನೀಡಿತ್ತು. ಇದರಿಂದ ಪಕ್ಷದ ವಿರುದ್ಧ ಬಂಡಾಯವೆದ್ದಿದ್ದರು.

# ಹಳ್ಳಿ ಹಳ್ಳಿಗಳಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಗೆ ಸಂಭ್ರಮದ ಸ್ವಾಗತ; ಮತ್ತೆ ಮತ್ತೆ ನೀವೇ ಶಾಸಕರಾಗಬೇಕು ಎಂದ ಗ್ರಾಮಸ್ಥರು

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಕ್ಷೇತ್ರಾದ್ಯಂತ ಅಭೂತಪೂರ್ವ ಸ್ವಾಗತ, ಬೆಂಬಲ ವ್ಯಕ್ತವಾಗುತ್ತಿದೆ.

ಭಾನುವಾರ ಕಾಳೇನಟ್ಟಿ ಗ್ರಾಮದಲ್ಲಿ ಪ್ರಚಾರಕ್ಕೆಂದು ತೆರಳಿದಾಗ ಮಹಿಳೆಯರು ಆರತಿ ಬೆಳಗಿ ಸ್ವಾಗತಿಸಿದರು. ಲಕ್ಷ್ಮೀ ಹೆಬ್ಬಾಳಕರ್ ಆಗಮನ ವಾಗುತ್ತಿದ್ದಂತೆ ಗ್ರಾಮಸ್ಥರೆಲ್ಲ ಸಂಭ್ರಮದಿಂದ ಬರಮಾಡಿಕೊಂಡರು. ಕ್ಷಣ ಮಾತ್ರದಲ್ಲಿ ಹಬ್ಬದ ವಾತಾವರಣವೇ ನಿರ್ಮಾಣವಾಯಿತು.



ಕಳೆದ 5 ವರ್ಷದಲ್ಲಿ ನೀವು ಮಾಡಿರುವಷ್ಟು ಅಭಿವೃದ್ಧಿಯನ್ನು ಹಿಂದೆಂದೂ ಕಂಡಿರಲಿಲ್ಲ.

ನೀವು ಪ್ರಚಾರಕ್ಕೆ ಬರುವ ಅವಶ್ಯಕತೆಯೇ ಇಲ್ಲ. ನಾವೇ ನಿಮ್ಮ ಪರವಾಗಿ ಓಡಾಡಿ ಮತ ಹಾಕಿಸುತ್ತೇವೆ. ಕಳೆದ ಬಾರಿಗಿಂತ ಅತೀ ಹೆಚ್ಚು ಅಂತರದಿಂದ ನಿಮ್ಮನ್ನು ಆಯ್ಕೆ ಮಾಡಿ ಕಳಿಸುತ್ತೇವೆ. ಮತ್ತೆ ಮತ್ತೆ ನೀವೇ ನಮ್ಮ ಶಾಸಕರಾಗಿ ಬರಬೇಕು ಎಂದು ಒಕ್ಕೊರಲಿನಿಂದ ಹೇಳಿದರು.

ಈ ಸಂದರ್ಭದಲ್ಲಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ನಿಮ್ಮ ಪ್ರೀತಿ, ವಿಶ್ವಾಸ ನೋಡಿ ನನಗೆ ಮಾತೇ ಬರುತ್ತಿಲ್ಲ. ಇದೇ ಪ್ರೀತಿ ನನ್ನನ್ನು ಮತ್ತೊಮ್ಮೆ ವಿಧಾನಸೌಧದ ಮೆಟ್ಟಿಲು ಹತ್ತಿಸುತ್ತದೆ ಎನ್ನುವ ವಿಶ್ವಾಸವಿದೆ. ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತಕ್ಕೆ ಬರುವುದು ನಿಶ್ಚಿತವಾಗಿದ್ದು, ಕಳೆದ ಬಾರಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕ್ಷೇತ್ರಕ್ಕೆ ತರುತ್ತೇನೆ ಎಂದು ಹೇಳಿದರು.

ಎಲ್ಲರೂ ತಪ್ಪದೆ ಮೇ 10ರಂದು ಮತದಾನ ಮಾಡಬೇಕು. ಕಾಂಗ್ರೆಸ್ ಪಕ್ಷದ ಹಸ್ತದ ಚಿನ್ಹೆಗೆ ಮತ ನೀಡುವ ಮೂಲಕ ನನ್ನನ್ನು ಆಯ್ಕೆ ಮಾಡಬೇಕು ಎಂದು ಅವರು ವಿನಂತಿಸಿದರು. ಕಾಂಗ್ರೆಸ್ ಪಕ್ಷದ ಹಾಗೂ ಸ್ಥಳೀಯ ಹಲವಾರು ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಏರ್ ಇಂಡಿಯಾ, ಮೇಕ್ ಮೈ ಟ್ರಿಪ್ ಗೆ 1.48 ಲಕ್ಷ ರೂಪಾಯಿ ಪರಿಹಾರ ನೀಡಲು ಬೆಂಗಳೂರು ಕೋರ್ಟ್ ಆದೇಶ

ಬೆಂಗಳೂರು: ವಿಮಾನ ತಡವಾಗಿದ್ದರ ಪರಿಣಾಮ ವೃದ್ಧ ದಂಪತಿಯ ಆಫ್ರಿಕನ್ ಸಫಾರಿ ರಜೆ ಯೋಜನೆ ವಿಫಲಗೊಂಡಿದ್ದಕ್ಕಾಗಿ ಆ ದಂಪತಿಗೆ ಏರ್ ಇಂಡಿಯಾ, ಮೇಕ್ ಮೈ ಟ್ರಿಪ್ ಗೆ 1.48 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಬೆಂಗಳೂರಿನ ಗ್ರಾಹಕ ಕೋರ್ಟ್ ತೀಪು ನೀಡಿದೆ.

ಚಾರ್ಟೆಡ್ ಅಕೌಂಟೆಂಟ್ ಆಗಿರುವ ಎಸ್ ರಾಮಭದ್ರನ್ (76) ಹಾಗೂ ಅವರ ಪತ್ನಿ ಆರ್ ವತ್ಸಲ (75) ಅವರು ಕಿಲಿಮಂಜಾರೋಗೆ 2019 ರ ಡಿ.19 ರಂದು ತೆರಳಲು ಯೋಜನೆ ರೂಪಿಸಿದ್ದರು. ತಮಗಾದ ಸಮಸ್ಯೆಯ ಬಗ್ಗೆ ಮಾಹಿತಿ ಹಂಚಿಕೊಂಡಿರುವ ರಾಮಭದ್ರನ್ ಹೇಳುವುದು ಹೀಗೆ...

ಪ್ರಯಾಣಕ್ಕಾಗಿ ನಾವು ಬೆಂಗಳೂರಿನಿಂದ ದೆಹಲಿಗೆ ಮೇಕ್ ಮೈ ಟ್ರಿಪ್ ವೆಬ್ ಸೈಟ್ ಮೂಲಕ ಏರ್ ಇಂಡಿಯಾ ವಿಮಾನದ




ಟಿಕೆಟ್ ನ್ನು ಕಾಯ್ದಿರಿಸಿದ್ದೆವು, ಅದು 10 ದಿನಗಳ ಪ್ರವಾಸವಾಗಿತ್ತು ಹಾಗೂ ಅಮೇರಿಕಾದಿಂದ ನನ್ನ ಮಗಳು ಹಾಗೂ ಮೊಮ್ಮಕ್ಕಳು ನೇರವಾಗಿ ಆಫ್ರಿಕಾದಲ್ಲಿ ನಮ್ಮ ಜೊತೆಯಾಗಲಿದ್ದರು.

ಆದರೆ ತಾವು ತೆರಳಬೇಕಿದ್ದ ವಿಮಾನ ಬರೊಬ್ಬರಿ 1 ಗಂಟೆ 45 ನಿಮಿಷ ವಿಳಂಬವಾಗಿತ್ತು. ದೆಹಲಿಗೆ ನಾವು ತಲುಪುವ ವೇಳೆಗೆ ಅಂತಾರಾಷ್ಟ್ರೀಯ ವಿಮಾನ ಸಿಬ್ಬಂದಿ ಬೋರ್ಡಿಂಗ್ ಗೇಟ್‌ಗಳನ್ನು ಮುಚ್ಚಲಾಗಿದೆ ಮತ್ತು ನಮ್ಮ ಪೂರ್ವ-ಪರಿಶೀಲಿಸಲಾದ ಲಗೇಜ್‌ಗಳನ್ನು ಡಿಪ್ಲಾನ್ ಮಾಡಲಾಗಿದೆ ಎಂದು ತಿಳಿಸಿದರು. ಪರಿಣಾಮ ಆಫ್ರಿಕಾಗೆ ತೆರಳಲು ಎಲ್ಲಾ ರೀತಿಯಿಂದಲೂ ಸಿದ್ಧತೆ ಮಾಡಿಕೊಂಡಿದ್ದ ನಾವು ದೆಹಲಿಯಲ್ಲಿ 4 ಡಿಗ್ರಿಯ ಚಳಿಯಲ್ಲಿ ಸತತ 4 ಗಂಟೆಗಳ ಕಾಲ ನಲುಗಬೇಕಾಗಿ ಬಂದಿತ್ತು. ನಾನು ಮಧುಮೇಹದಿಂದ ಬಳಲುತ್ತಿದ್ದೇನೆ. ನಮಗೆ ಯಾವುದೇ ಉಪಹಾರ ಅಥ-'ವಾ ಬೆಂಬಲವನ್ನು ನೀಡಲಾಗಿಲ್ಲ ಎಂದೂ ರಾಮಭದ್ರನ್ ಆರೋಪಿಸಿದ್ದಾರೆ.

ಪರಿಸ್ಥಿತಿಯನ್ನು ಇನ್ನಷ್ಟು ಹದಗೆಟ್ಟು, ನಮಗೆ ನಿಲ್ದಾಣದ ಒಳಗೆ ವಿಶ್ರಾಂತಿ ಕೊಠಡಿಯನ್ನು ಬಳಕೆ ಮಾಡಲು ಬಿಡಲಿಲ್ಲ. ಬಳಸಲಾಗುವುದಿಲ್ಲ ಮತ್ತು ಹೊರಗಿನದ್ದನ್ನು ಬಳಸಲು ಸುತ್ತುವರೆದು ತೆರಳಬೇಕಾಯಿತು ಎಂದು ಹೇಳಿದ್ದಾರೆ.

ಮರುದಿನ ಕಿಲಿಮಂಜಾರೊಗೆ ವಿಮಾನ ಟಿಕೆಟ್ ನ್ನು ಕಾಯ್ದಿರಿಸಲು ಏರ್ ಇಂಡಿಯಾ ಸಿಬ್ಬಂದಿಗೆ ನಾವು ವಿನಂತಿಸಿದರೂ, ಅವರು ಯಾವುದೇ ಟಿಕೆಟ್‌ಗಳಿಲ್ಲ ಎಂದು ಹೇಳಿದರು. ಅವರು ಯಾವ ವಿಮಾನದಲ್ಲಿ ಟಿಕೆಟ್ ಕಾಯ್ದಿರಿಸಲು ಸಾಧ್ಯವಿಲ್ಲ ಎಂದು ಹೇಳಿದ್ದರೋ ಅದೇ ವಿಮಾನದಲ್ಲಿ "ನನ್ನ ಮಗಳು 4.75 ಲಕ್ಷ ರೂಪಾಯಿಗಳನ್ನು ಪಾವತಿಸಿ ಹೊಸ ಟಿಕೆಟ್‌ಗಳನ್ನು ಬುಕ್ ಮಾಡಿದರು.

ನಾವು ಹಿಂತಿರುಗಿದ ನಂತರ ನಮಗೆ ಉಂಟಾದ ಅನಾನುಕೂಲದ ಬಗ್ಗೆ ಮೇಕ್ ಮೈ ಟ್ರಿಪ್ ಹಾಗೂ ಏರ್ ಇಂಡಿಯಾಗೆ ನಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಯತ್ನಿಸಿದೆವಾದರೂ ಅವರಿಂದ ಯಾವುದೇ ಪ್ರತಿಕ್ರಿಯೆ ಬರಲಿಲ್ಲ. "ಒಂದು ವರ್ಷದ ಕಾಯುವಿಕೆ ನಂತರ, ನಾವು ಕಾನೂನು ನೋಟಿಸ್ ಕಳುಹಿಸಿದ್ದೇವೆ" ಎಂದು ರಾಮಭದ್ರನ್ ಹೇಳಿದ್ದಾರೆ. ಮೇ 2022 ರಲ್ಲಿ ಅವರು ಸಲ್ಲಿಸಿದ ಪ್ರಕರಣದಲ್ಲಿ ಏಪ್ರಿಲ್ 17 ರಂದು ನ್ಯಾಯಾಲಯ ತೀಪು ಪ್ರಕಟಿಸಿದ್ದು ಸ್ವಲ್ಪ ಸಮಾಧಾನ ತಂದಿದೆ ಎಂದು ಅವರು ತಿಳಿಸಿದ್ದಾರೆ.

## ದಾಖಲೆ ಇಲ್ಲದ 18 ಲಕ್ಷ ರೂ. ಹಣ, 6 ಲಕ್ಷ ರೂ. ಮೌಲ್ಯದ ಬೆಳ್ಳಿ ನಾಣ್ಯಗಳು ಜಪ್ತಿ

ಬೀದರ್: ಹೈದರಾಬಾದ್‌ನಿಂದ ಬೀದರ್‌ಗೆ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 18 ಲಕ್ಷ ರೂ. ಹಣ ಹಾಗೂ 6 ಲಕ್ಷ ರೂ. ಮೌಲ್ಯದ ಬೆಳ್ಳಿ ನಾಣ್ಯಗಳನ್ನು ಬೀದರ್ ಪೊಲೀಸರು ಜಪ್ತಿ ಮಾಡಿದ್ದಾರೆ.

ಬೀದರ್ ಮತ್ತು ತೆಲಂಗಾಣ ಗಡಿಯ ಶಾಪೂರ್ ಗ್ರಾಮದ ಬಳಿಯ ಚೆಕ್ ಪೋಸ್ಟ್‌ನಲ್ಲಿ ಪೊಲೀಸರು ತಪಾಸಣೆ ನಡೆಸುತ್ತಿದ್ದ ವೇಳೆ ಕಾರಿನಲ್ಲಿ 18 ಲಕ್ಷ ರೂ. ಹಣ, 5 ಗ್ರಾಂನ 1,250 ನಾಣ್ಯಗಳು ಮತ್ತು 1 ಗ್ರಾಂನ 1,000 ಬೆಳ್ಳಿ ನಾಣ್ಯಗಳು ಪತ್ತೆಯಾಗಿವೆ.



ಈ ಕುರಿತು ಪೊಲೀಸರು ಅಕ್ರಮ ಸಾಗಾಟ ಮಾಡುತ್ತಿದ್ದ ಕಾರು, ಹಣ ಹಾಗೂ ಬೆಳ್ಳಿಯ ನಾಣ್ಯಗಳನ್ನು ವಶಕ್ಕೆ ಪಡೆದುಕೊಂಡು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

# ಬಸವೇಶ್ವರರ 890 ನೇ ಜಯಂತಿ ಆಚರಣೆ

ರಡ್ಡೆರಹಟ್ಟಿ ಗ್ರಾಮಸ್ಥರ ವತಿಯಿಂದ ಸರಳವಾಗಿ ಬಸವ ಜಯಂತಿಯನ್ನು ಆಚರಿಸಿದರು.

ಗ್ರಾಮದ ಪ್ರಮುಖರಾದ ನಿಂಗಪ್ಪ ಖೋತ ಅವರು ಬಸವಣ್ಣನವರ ಮೂರ್ತಿಗೆ ಪುಷ್ಪನಮನ ಸಲ್ಲಿಸಿದರು.

ಪ್ರಜಾಪ್ರಭುತ್ವ, ಶರಣ ತತ್ವವನ್ನು ಬಸವಣ್ಣ ರಕ್ಷಣೆ ಮಾಡಿದರು.

ಪ್ರಜಾಪ್ರಭುತ್ವ, ಸಂಸತ್ತು ಎಲ್ಲದಕ್ಕೂ ಬಸವಣ್ಣ ಪ್ರೇರಣೆ.



ಸಮಾಜದಲ್ಲಿ ಅಂಧತ್ವವಿದ್ದಾಗ ಬಸವಣ್ಣನವರ ಬೆಳಕಿನ ಹಾದಿ ತೋರಿದರು ಎಂದರು. ಗ್ರಾಮದ ಪ್ರಮುಖರಾದ ಶಿವಾನಂದ ಗಲಗಲಿ ಅವರು ಮಾತನಾಡಿದರು.

# ಸರ್ಕಾರಿ ಆಸ್ಪತ್ರೆ ವಾರ್ಡ್‌ನಲ್ಲೇ ವೈದ್ಯ ನೇಣಿಗೆ ಶರಣು

ಬೆಂಗಳೂರು: ಅನಾರೋಗ್ಯದಿಂದ ಬಳಲುತ್ತಿದ್ದ ವೈದ್ಯ ಬೆಂಗಳೂರಿನ ಸರ್ಕಾರಿ ಆಸ್ಪತ್ರೆ ವಾರ್ಡ್‌ನಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ.



ಡಾ.ಎಸ್.ರೇಣುಕಾನಂದ (43) ಆತ್ಮಹತ್ಯೆ ಮಾಡಿಕೊಂಡ ವೈದ್ಯ. ಇವರು ಜಯನಗರ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಡೆತ್‌ನೋಟ್ ಬರೆದಿಟ್ಟು ನೇಣಿಗೆ ಶರಣಾಗಿದ್ದಾರೆ. ಮಕ್ಕಳ ತಜ್ಞರಾಗಿದ್ದ ವೈದ್ಯ ಡಾ. ಎಸ್.ರೇಣುಕಾನಂದ ಅವರು ಆಸ್ಪತ್ರೆಯ ವಾರ್ಡ್‌ನಲ್ಲಿ ಭಾನುವಾರ ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಬೆಡ್‌ಶೀಟ್‌ನಿಂದ ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೇಣುಕಾನಂದ ಬಾಲ್ಯದಿಂದಲೇ ಪೋಲಿಯೋದಿಂದ ಅಂಗವೈಕಲ್ಯತೆ ಹೊಂದಿದ್ದರು. ಹೀಗಾಗಿ ಹಲವು ದಿನಗಳಿಂದ ಕಣ್ಣಿನ ಸಮಸ್ಯೆಯಿಂದ ಬಳಲುತ್ತಿದ್ದರು. ಇದರಿಂದ ಬೇಸತ್ತಿದ್ದರು. ಬೆಳಗ್ಗೆ 11:30 ರ ವೇಳೆಗೆ ರೌಂಡ್ಸ್ ಮುಗಿಸಿ ಬಂದು ಡ್ಯೂಟಿ ರೂಂಗೆ ತೆರಳಿದ್ದರು. ಮನೆಯಿಂದ ತಾಯಿಯ ಸೀರೆ ತೆಗೆದುಕೊಂಡು ಬಂದು ನೇಣು ಹಾಕಿಕೊಂಡಿದ್ದಾರೆ. ಡೆತ್‌ನೋಟ್‌ನಲ್ಲಿ ಪತ್ನಿ-ಮಕ್ಕಳು, ತಂದೆ-ತಾಯಿಗೆ ಕ್ಷಮೆಯಾಚಿಸಿದ್ದಾರೆ. ಮಧ್ಯಾಹ್ನದ ವೇಳೆ ಪತಿಗೆ ಪತ್ನಿ ಕರೆ ಮಾಡಿದ್ದರು. ಹಲವು ಬಾರಿ ಕರೆ ಮಾಡಿದ್ರೂ ಕರೆ ಸ್ವೀಕರಿಸಿರಲಿಲ್ಲ. ಹೀಗಾಗಿ ಗಾಬರಿಗೊಂಡು ಪತಿಯ ಸಹೋದ್ಯೋಗಿಗಳಿಗೆ ಪತ್ನಿ ಕರೆ ಮಾಡಿದ್ದರು.


ಆಸ್ಪತ್ರೆ ಸಿಬ್ಬಂದಿ ಗಮನಿಸಿ ತಿಲಕನಗರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ಈ ಸಂಬಂಧ ತಿಲಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಹ್ಲಾದ ಶೀರೋಳ ಕಾಂಗ್ರೇಸ ಗೂಡ್ ಬೈ ಹೇಳಿ ಬಿಜೆಪಿಗೆ ಸೇರ್ಪಡೆ

ಕೊಲ್ಹಾರ: ಮಲಘಾಣ ಗ್ರಾಮದ ಯುವ ನಾಯಕ ಬಡವರ ಬಂಧು ದೀನ ದಲಿತರ ಆಶಾಕಿರಣ ಸ್ನೇಹಜೀವಿ ಶ್ರೀ ಪ್ರಹ್ಲಾದ ಶಿರೋಳ ಅವರು ಸರಿ ಸುಮಾರ ಐದರಿಂದ ಆರು ವರ್ಷಗಳಿಂದ ಕಾಂಗ್ರೆಸದಲ್ಲಿ ದುಡಿದರು ಯಾವುದೇ ಪ್ರಯೋಜನವಾಗಿಲ್ಲ ಅಲ್ಲಿನ ಅವ್ಯವಸ್ಥೆಯ ನೋಡಿ ಅದರಿಂದ ದೂರ ವಾಗಬೇಕೆಂಬ ಮಹದಾಸೆಯಿಂದ ಭ್ರಷ್ಟ ಕಾಂಗ್ರೆಸ್ ಪಕ್ಷ ತೊರೆದ ಯವಕರ ಮಾಣಿಕ್ಯ ಭವಿಷ್ಯದ ಕರ್ನಾಟಕದ ಮುಖ್ಯಮಂತ್ರಿ ಶ್ರೀ B.Y. ವಿಜೇಯೇಂದ್ರ ಅಣ್ಣಾವ್ವರ ನೇತೃತ್ವದಲ್ಲಿ ಇಂದು ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಯಾದ ಪ್ರಹ್ಲಾದ ಅವರಿಗೆ ಭಾರತಿಯ ಜನತಾ ಪಕ್ಷಕ್ಕೆ ಬರಮಾಡಿಕೊಂಡ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು.



# ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಲೋಕಾಯುಕ್ತ ರೇಡ್




ಬೀದರ್: ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಸೋಮವಾರ ಮುಂಜಾನೆ ಶಾಕ್ ನೀಡಿದೆ. ವಿವಿಧ ಜಿಲ್ಲೆಗಳ ಹಲವು ಇಲಾಖೆಯ ಅಧಿಕಾರಿಗಳ ಮನೆ ಹಾಗೂ ಕಚೇರಿ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿ ಮಹತ್ವದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದೆ.

ಬೀದರ್ ಜಿಲ್ಲೆಯಾದ್ಯಂತ 6 ಕಡೆ ಏಕಕಾಲಕ್ಕೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಮುಡಬಿ ಉಪ ತಹಶೀಲ್ದಾರ್ ವಿಜಯಕುಮಾರ್ ಸ್ವಾಮಿಯವರ ಆನಂದ್ ನಗರ ಹಾಗೂ ಬಸವಕಲ್ಯಾಣ ಪಟ್ಟಣದಲ್ಲಿರುವ ನಿವಾಸಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಅಲ್ಲದೇ ಅವರು ಕಾರ್ಯನಿರ್ವಹಿಸುವ ಮುಡುಬಿಯ ಕಚೇರಿ ಹಾಗೂ ಬಸವಕಲ್ಯಾಣ ಪಟ್ಟಣದ ಹೊಂದಿರುವ ಗ್ಯಾರೇಜ್ ಮೇಲೂ ದಾಳಿ ಮಾಡಿದ್ದಾರೆ.

ಸಣ್ಣ ನೀರಾವರಿ ಇಲಾಖೆ ಕಾರ್ಯ ನಿರ್ವಾಹಕ ಇಂಜಿನಿಯರ್ ಸುರೇಶ್ ಮೇದಾ ಅವರ ಗುರುನಗರದ ನಿವಾಸ ಹಾಗೂ ನೌಬಾದ್ನಲ್ಲಿರುವ ಕಚೇರಿ ಮೇಲೆ ದಾಳಿ ಮಾಡಿ ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಲೋಕಾಯುಕ್ತ ಎಸ್ಪಿ ಎ.ಆರ್ ಕರ್ನೂಲ್ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಎನ್.ಎಂ ಓಲೇಕಾರ್ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ದಾಳಿ ನಡೆದಿದೆ.

ಬಳ್ಳಾರಿಯ ಎಇಇ ಕಾರ್ಯನಿರ್ವಹಿಸುವ ಹುಸೇನ್ ಸಾಬ್ ಅವರ ಬುಡಾ ಕಾಂಪ್ಲೆಕ್ಸ್‌ನಲ್ಲಿರುವ ಕಚೇರಿ ಹಾಗೂ ರಾಘವೇಂದ್ರ ಕಾಲೋನಿಯಲ್ಲಿರುವ ಮನೆ ಮತ್ತು ಶಿಡಿಗಿನಮೊಳದಲ್ಲಿರುವ ಮನೆಯ ಮೇಲೂ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆ ಸೇರಿದಂತೆ ವಿವಿಧೆಡೆ ಅಕ್ರಮ ಆಸ್ತಿ ಮಾಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಬಿಬಿಎಂಪಿ ಜೆಇಇಟಿ ಹನುಮಂತರಾಯ ಅವರ ಚಿತ್ರದುರ್ಗದ ಬೋಚಾಪುರದ ಫಾರಂ ಹೌಸ್ ಮೇಲೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಎಸ್ಪಿ ವಾಸುದೇವ ನೇತೃತ್ವದಲ್ಲಿ ಪರಿಶೀಲನೆ ನಡೆಯುತ್ತಿದೆ. ನಿವೃತ್ತ ಡಿಸಿಎಫ್ ನಾಗರಾಜ್ ಹಾಗೂ ಹೊಳಲ್ಕೆರೆ ತಹಶೀಲ್ದಾರ್ ನಾಗರಾಜ್ ಮನೆ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಡಿಸಿಎಫ್ ಅವರ ಶಿವಮೊಗ್ಗ ಮನೆ ಹಾಗೂ ತಹಶೀಲ್ದಾರ್ ಅವರ ಶಿಕಾರಿಪುರದ ಮನೆಯಲ್ಲಿ ಪರಿಶೀಲನೆ ನಡೆಸಲಾಗುತ್ತಿದೆ. ಅಲ್ಲದೆ ಡಿಸಿಎಫ್ ಅವರ ದಾವಣಗೆರೆ ಬಳಿಯ ತೋಟದ ಮನೆಯ ಮೇಲೂ ದಾಳಿ ನಡೆದಿದೆ. ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂ.ಎಸ್ ಕೌಲಾಪುರೆ ನೇತೃತ್ವದಲ್ಲಿ ಇಪ್ಪತ್ತಕ್ಕೂ ಹೆಚ್ಚು ಅಧಿಕಾರಿಗಳಿಂದ ಏಳು ಕಡೆ ದಾಳಿ ನಡೆದಿದ್ದು ಪರಿಶೀಲನೆ ನಡೆಸಲಾಗುತ್ತಿದೆ.

ಬಂಗಾರಪೇಟೆಯಲ್ಲೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಎನ್.ವೆಂಕಟೇಶಪ್ಪ ಅವರ ಮನೆ ಮೇಲೆ ಲೋಕಾ ದಾಳಿ ನಡೆದಿದೆ. ನಗರದಲ್ಲಿ ಮೂರು ಕಡೆ ಹಾಗೂ ಮುಳಬಾಗಿಲು ತಾಲ್ಲೂಕಿನ ತಿಪ್ಪದೊಡ್ಡಿಯಲ್ಲಿ ಎರಡು ಕಡೆ, ಒಟ್ಟು ವೆಂಕಟೇಶಪ್ಪ ಅವರಿಗೆ ಸೇರಿದ ಐದು ಕಡೆ ಏಕಕಾಲಕ್ಕೆ ದಾಳಿ ನಡೆದಿದೆ.

# ಬಿ.ಎ. ಮತ್ತು ಬಿ.ಕಾಂ. ವಿದ್ಯಾರ್ಥಿಗಳಿಗೆ ಸಾವಯವ ಕೃಷಿ ತರಬೇತಿ

ಬೆಳಗಾವಿ: ಐಸಿಎಆರ್-ಕೆಎಲ್ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ಲಿಂಗರಾಜ ಮಹಾವಿದ್ಯಾಲಯದ ಬಿ.ಎ. ಮತ್ತು ಬಿ.ಕಾಂ. ವಿದ್ಯಾರ್ಥಿಗಳಿಗೆ ಸಾವಯವ ಕೃಷಿ ಕುರಿತು 6 ದಿನಗಳ ಸರ್ಟಿಫಿಕೇಟ್ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೇಂದ್ರದ ಮುಖ್ಯಸ್ಥೆ ಶ್ರೀಮತಿ ಶ್ರೀದೇವಿ ಬ. ಅಂಗಡಿಯವರು ವಹಿಸಿದ್ದರು.

ಅವರು ಅಧ್ಯಕ್ಷೀಯ ನುಡಿಯಲ್ಲಿ ಕೆ-ಎಲ್ಇ ಸಂಸ್ಥೆಯು ಶಿಕ್ಷಣ ರಂಗದಲ್ಲಿ ಮುಂಚೂಣಿಯಲ್ಲಿದೆ, ಕೃಷಿ ಕ್ಷೇತ್ರದ ಈ ಭಾಗದ ರೈತರಿಗೆ ಆಧುನಿಕ ತಂತ್ರಜ್ಞಾನದ ಮಾಹಿತಿ ನೀಡಿ ಅವರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಮತ್ತಿಕೊಪ್ಪದಲ್ಲಿ ಸ್ಥಾಪಿಸಿದ ಕೆಎಲ್ಇ ಕೃಷಿ ವಿಜ್ಞಾನ ಕೇಂದ್ರವು ಪ್ರಾತ್ಯಕ್ಷಿಕೆ, ಕ್ಷೇತ್ರ ಪರೀಕ್ಷೆಗಳನ್ನು ನಡೆಸುವುದರ ಜೊತೆಗೆ ರೈತರಿಗೆ ಬೇಕಾದ ಅಧಿಕ ಇಳುವರಿ ನೀಡುವ ತಳಿಗಳ ಬೀಜೋತ್ಪಾದನೆ ಮಾಡಿ ಪೂರೈಸಲಾಗುತ್ತಿದೆ. ಇಂದಿನ ಕೃಷಿಯಲ್ಲಿ ಅಧಿಕ ರಾಸಾಯನಿಕ ಗೊಬ್ಬರ ಮತ್ತು ಕೀಟ/ರೋಗನಾಶಕಗಳ ಬಳಕೆಯಿಂದ



ಅಂತರರ್ಜಲದಲ್ಲಿ ರಾಸಾಯನಿಕಗಳ ಸೇರ್ಪಡೆಯಿಂದ ನೀರು ವಿಷಪೂರಿತವಾಗುತ್ತಿದೆ ಮತ್ತು ವಿಷಮುಕ್ತ ಆಹಾರ ಉತ್ಪಾದನೆಗೊಂಡು ಜನರ ಆರೋಗ್ಯ ಹಾಳಾಗಿ ಅಧಿಕ ಜನರು ಆಸ್ಪತ್ರೆಗಳಿಗೆ ಹೆಚ್ಚು ಖರ್ಚು ಮಾಡುವಂತಾಗಿದೆ.

ಸಾವಯವ ಕೃಷಿ ಅಳವಡಿಕೆಯಿಂದ ರಾಸಾಯನಿಕಗಳ ಬಳಕೆ ಕಡಿಮೆ ಮಾಡಿ ವಿಷಮುಕ್ತ ಆಹಾರದ ಉತ್ಪಾದನೆ ಮಾಡುವುದು ಇಂದಿನ ಅವಶ್ಯಕತೆಯಾಗಿದೆ. ಸಾಂಪ್ರದಾಯಿಕ ಪದವಿ ಪಡೆಯುತ್ತಿರುವ ಬಿ. ಎ ಹಾಗೂ ಬಿ.ಕಾಂ ಪದವಿ ಯುವ ವಿದ್ಯಾರ್ಥಿಗಳಿಗೆ ಸಾವಯವ ಕೃಷಿ ತರಬೇತಿ ನೀಡಿ ಅವರ ಜ್ಞಾನವನ್ನು ಅಭಿವೃದ್ಧಿ ಪಡಿಸಿ ಪರಿಸರ ಸ್ನೇಹಿ ಸಾವಯವ ತಂತ್ರಜ್ಞಾನಗಳನ್ನು ರೈತರಿಗೆ ತ್ವರಿತವಾಗಿ ತಲುಪಿಸುವ ಉದ್ದೇಶದಿಂದ ಕೃಷಿ ವಿಜ್ಞಾನ ಕೇಂದ್ರವು ಯುವಕರಿಗೆ ಸಾವಯವ ಕೃಷಿ ಕುರಿತು 6 ದಿನಗಳ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಉತ್ತಮ ಕ್ರಮವಾಗಿದೆ. ತರಬೇತಿ ಪಡೆಯುತ್ತಿರುವ ಯುವ ವಿದ್ಯಾರ್ಥಿಗಳು ಕೃಷಿ ವಿಜ್ಞಾನ ಕೇಂದ್ರದ ಅನುಭವಿ ವಿಜ್ಞಾನಿಗಳಿಂದ ಮಾಹಿತಿ ಪಡೆದು ವಿಷಮುಕ್ತ ಆಹಾರ ಉತ್ಪಾದನೆಯಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಲಿಂಗರಾಜ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಹೆಚ್. ಎನ್. ಮೂಲಿಯವರು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಸಾವಯವ ಕೃಷಿ ಹೆಚ್ಚಿನ ಮಹತ್ವ ಬಂದಿದೆ ಮತ್ತು ಭಾರತ ದೇಶದಲ್ಲಿ ಸಾವಯವ ಕೃಷಿಯು ಬಹಳ ಪುರಾತನವಾದದ್ದು. ಆಧುನಿಕ ಕೃಷಿ ತಂತ್ರಜ್ಞಾನಗಳ ದುರಪಯೋಗಗಳಿಂದಾಗಿ ಅಂದರೆ, ಯಥೇಚ್ಛವಾಗಿ ರಾಸಾಯನಿಕ ಗೊಬ್ಬರ, ಪೀಡೆನಾಶಕಗಳ ಬಳಕೆಯಿಂದಾಗಿ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಲಿದೆ.

ಕಾರಣ ಯುವ ವಿದ್ಯಾರ್ಥಿಗಳಿಗೆ ಇಂತಹ ತರಬೇತಿಗಳು ಅವಶ್ಯಕವಾಗಿದೆ ಎಂದರು. ಅದೇರೀತಿ, ಲಿಂಗರಾಜ ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಡಾ. ಜಿ.ಎನ್. ಶೀಲಿಯವರು ಎಲ್ಲ ಗಣ್ಯಮಾನ್ಯರನ್ನು ಸ್ವಾಗತಿಸಿ ಸಾವಯವ ಕೃಷಿ ಮಹತ್ವ ಮತ್ತು ತರಬೇತಿಯ ಅವಶ್ಯಕತೆ ಬಗ್ಗೆ ಮಾತನಾಡಿದರು. ಲಿಂಗರಾಜ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಸಿ. ಮಲ್ಲನ್ನ ಕಾರ್ಯಕ್ರಮದ ಕೊನೆಯಲ್ಲಿ ವಂದಿಸಿದರು.

ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ. ಎಸ್. ಎಸ್. ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಶ್ರೀ. ಜಿ. ಬಿ. ವಿಶ್ವನಾಥ ಪ್ರಾಸ್ತಾವಿಕವಾಗಿ ಮಾತನಾಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089